02 February 2026 Monday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ
ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಅದೃಷ್ಟವಂತನು ಅವಕಾಶಗಳನ್ನು ಪಡೆಯುತ್ತಾನೆ, ಬುದ್ಧಿವಂತನು ಅವಕಾಶಗಳನ್ನು ಸೃಷ್ಟಿಸಿಕೊಳ್ಳುತ್ತಾನೆ!
-ಸ್ನೇಹಾ ಆನಂದ್

info.varthaman@gmail.com



17 ಕ್ಯಾನ್ಸರ್ ಔಷಧಿಗಳ ಸುಂಕ ಇಳಿಕೆ ಪುಟ ಸಂ. 2



ಚಾಮುಂಡಿ ಬೆಟ್ಟ ಉಳಿಸಿ ಹೋರಾಟಕ್ಕೆ ರಾಜಮಾತೆ ಬೆಂಬಲ ಪುಟ ಸಂ. 3



ವಿಜ್ಞಾನದ ಕಣ್ಣಲ್ಲಿ ವೇದಾಂತದ ದರ್ಶನ: 'ದಕ್ಷಿಣಾಸ್ಯ ದರ್ಶಿನಿ'ಗೆ ಅದ್ದೂರಿ ತೆರೆ ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್
VARTHAMAN Volume: 69 Issue: 89 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ರಾಜ್ಯಕ್ಕೆ 63,049 ಕೋಟಿ ತೆರಿಗೆ ಪಾಲು ಹಂಚಿಕೆ

**ಬೆಂಗಳೂರು:** ಕೇಂದ್ರ ಸರ್ಕಾರ ಕರ್ನಾಟಕ ರಾಜ್ಯಕ್ಕೆ 2026–27ನೇ ಸಾಲಿನಲ್ಲಿ 63,049 ಕೋಟಿ ತೆರಿಗೆ ಪಾಲು ಹಂಚಿಕೆ ಮಾಡಿದೆ. 16ನೇ ಹಣಕಾಸು ಆಯೋಗದ ಅನ್ವಯ ಕರ್ನಾಟಕ್ಕೆ ಶೇ 4.13 ತೆರಿಗೆ ಪಾಲು ಹಂಚಿಕೆಗೆ ಶಿಫಾರಸು ಮಾಡಿದೆ. 15ನೇ ಹಣಕಾಸು ಆಯೋಗವು ಶೇ 3.64 ಹಂಚಿಕೆ ಮಾಡಿತ್ತು.

ರಾಜ್ಯ ಸರ್ಕಾರವು 14ನೇ ಹಣಕಾಸು ಆಯೋಗದಲ್ಲಿ ನೀಡಿದಷ್ಟೇ, ಅಂದರೆ ಶೇ 4.71 ಹಂಚಿಕೆ ಮಾಡುವಂತೆ ಮನವಿ ಮಾಡಿತ್ತು. ಆದರೆ ಕೇಂದ್ರವು ರಾಜ್ಯಕ್ಕೆ 2026–27ನೇ ಸಾಲಿನಲ್ಲಿ 63,049 ಕೋಟಿ (ಶೇ. 4.13) ತೆರಿಗೆ ಪಾಲು ಹಂಚಿಕೆ ಮಾಡಿದೆ.

## ಮೈಸೂರಿಗೆ ನಿರಾಸೆ



**ಮೈಸೂರು:** ಕೇಂದ್ರ ಬಜೆಟ್ ನಲ್ಲಿ ಸಾಂಸ್ಕೃತಿಕ ನಗರ ಮೈಸೂರಿಗೆ ನಿರಾಸೆ ಆಗಿದೆ. ನಗರಕ್ಕೆ ಕೈಗಾರಿಕಾ ಕ್ಲಸ್ಟರ್, ಮಡಿಕೇರಿಗೆ ರೈಲು ಸೇರಿದಂತೆ ಅನೇಕ ಯೋಜನೆಗಳ ನಿರೀಕ್ಷೆ ಈಡೇರಿಲ್ಲ. ಬಿಜೆಪಿ ಸಂಸದ ಯದುವೀರ ಒಡೆಯರ್ ಅವರು ನಿನ್ನೆ ಮಾತನಾಡಿ, ಈ ಬಾರಿಯೂ ಮೈಸೂರಿಗೆ ಅನೇಕ ಉತ್ತಮ ಯೋಜನೆಗಳನ್ನು ನೀಡುವುದಾಗಿ ಭರವಸೆ ವ್ಯಕ್ತಪಡಿಸಿದ್ದರು. ಆದರೆ ಅವರ ನಿರೀಕ್ಷೆ ಹುಸಿಯಾಗಿದೆ. ಕೈಗಾರಿಕೆ ಪ್ರವಾಸೋದ್ಯಮ ಇಲಾಖೆ, ಅರಣ್ಯ ವನ್ಯಜೀವ ತಡೆಗೆ ಆದರೂ ವಿಶೇಷ ಯೋಜನೆ ಘೋಷಿಸುವ ನಿರೀಕ್ಷೆಯಲ್ಲಿದ್ದರು. ಪುಟ 2ಕ್ಕೆ


### ಕರ್ನಾಟಕಕ್ಕೆ ಸಿಗದ ಒತ್ತು | ಉತ್ತರ ರಾಜ್ಯಗಳಿಗೆ ನಿರ್ಮಲಾ ಭಾರೀ ಕೊಡುಗೆ

# ಆರ್ಥಿಕ ಸಮತೋಲನಕ್ಕೆ 'ಸರ್ಕಸ್'

**ನವದೆಹಲಿ:** ಕೇಂದ್ರ ಸರ್ಕಾರದ ಬಜೆಟ್ ನಲ್ಲಿ ಈ ಬಾರಿ ಯಾವುದೇ ಜನಪ್ರಿಯ ಯೋಜನೆಗಳನ್ನು ಘೋಷಣೆ ಮಾಡಿಲ್ಲ. ಬದಲಿಗೆ ದೇಶದ ಆರ್ಥಿಕ ಸ್ಥಿತಿಗೆ ಬೂಸ್ಟ್ ನೀಡಲು ಸರ್ಕಸ್ ಮಾಡಲಾ ಗಿದೆ. ಕೈಗಾರಿಕೆಗಳ ಅಭಿವೃದ್ಧಿಗೆ ಒತ್ತು ನೀಡ ಲಾಗಿದೆ. ಈ ಬಾರಿ ಆದಾಯ ತೆರಿಗೆ ಸ್ಲ್ಯಾಬ್‌ಗಳನ್ನು ಸಹ ಯಥಾಸ್ಥಿತಿ ಉಳಿಸಿಕೊಳ್ಳಲಾಗಿದೆ.

ಇಡೀ ಬಜೆಟ್‌ನಲ್ಲಿ ಕರ್ನಾಟಕಕ್ಕೆ ಹೇಳಿಕೊಳ್ಳುವಂತಹ ಯಾವುದೇ ಮಹತ್ವದ ಯೋಜನೆಗಳನ್ನು ನೀಡಲಾಗಿಲ್ಲ. ಹಾಗೇ ನೋಡಿದರೆ ಬಜೆಟ್ ಸಂಪೂರ್ಣವಾಗಿ ಉತ್ತರ ಪ್ರದೇಶ ಮತ್ತು ಬಿಹಾರಕ್ಕೆ ಸೀಮಿತವಾದಂತೆ ಕಾಣುತ್ತದೆ. ಅಲ್ಲದೆ, ಪಂಚ ರಾಜ್ಯ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಆ ರಾಜ್ಯಗಳಿಗೆ ಭರಪೂರ ಕೊಡುಗೆ ನೀಡಲಾಗಿದೆ. ಆದರೆ, ಜನಸಾಮಾನ್ಯರ ನೀರಿಕ್ಷೆಗಳನ್ನು ಈಡೇರಿಸಲು ಮುಂದಾಗಿಲ್ಲ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸತತ 9ನೇ ಬಾರಿಗೆ ಭಾನುವಾರ ಕೇಂದ್ರ ಬಜೆಟ್ ಮಂಡಿಸಿದರು. ನಾನಾ ಕ್ಷೇತ್ರಗಳಿಗೆ ವಿವಿಧ ಬಂಪರ್ ಕೊಡುಗೆಗಳನ್ನು ಘೋಷಿಸಿದ್ದಾರೆ. ಈ ಬಾರಿಯ ಬಜೆಟ್‌ನಲ್ಲಿ ಔಷಧಿಗಳು ಸೇರಿದಂತೆ ಹಲವಾರು ವಸ್ತುಗಳ ದರ ಇಳಿಕೆ ಮಾಡಿ ರುವುದರಿಂದ ಜನಸಾಮಾನ್ಯರಿಗೆ ಸಂತಸ ತಂದಿದೆ. ಅಲ್ಲದೇ ಕೆಲವು ವಸ್ತುಗಳ ದರ ಏರಿಕೆ ಮಾಡಲಾಗಿದೆ. ಒಂದು ಗಂಟೆ 26 ನಿಮಿಷಗಳ ಕಾಲ ಬಜೆಟ್ ಮಂಡಿಸಿದ ನಿರ್ಮಲಾ ಸೀತಾರಾ ಮನ್ ಅವರು, ವಿವಿಧ ಕ್ಷೇತ್ರಗಳ ಅಭಿವೃದ್ಧಿಗೆ ಮಹತ್ವದ ಯೋಜನೆಗಳನ್ನು ಘೋಷಿಸಿದ್ದಾರೆ. ದೇಶದ ಇತಿಹಾಸದಲ್ಲಿ 2ನೇ ಬಾರಿ ಭಾನು ವಾರ ಬಜೆಟ್ ಮಂಡನೆಯಾಗಿದೆ. 12 ವರ್ಷಗಳಲ್ಲಿ ಭಾರತದ ಆರ್ಥಿಕ ಪಥವು ಪುಟ 2ಕ್ಕೆ




### ಯಾವುದು ಅಗ್ಗ

- ಚರ್ಮ ಉತ್ಪನ್ನಗಳು
- ಮೊಬೈಲ್ ಫೋನ್
- ಇವಿ ಬ್ಯಾಟರಿ
- ಶುಗರ್, 17 ರೀತಿ ಕ್ಯಾನ್ಸರ್ ಔಷಧ ದರ
- ಸೋಲಾರ್ ಉತ್ಪನ್ನ
- ಜವಳಿ
- ಬೀಡಿ
- ವಿದೇಶಿ ಯಾತ್ರೆ
- ಬಯೋಗ್ಯಾಸ್ ಮಿಶ್ರಿತ ಸಿಎನ್‌ಜಿ
- ಮೈಕ್ರೋವೇವ್ ಒವೆನ್
- ಕಸ್ಟಮ್ಸ್ ಸುಂಕ
- ಸೆಣಬು ಉತ್ಪನ್ನ
- 7 ಗಂಭೀರ ರೋಗಗಳ ಔಷಧಿ ದರ ಇಳಿಕೆ ಮಾಡಲಾಗಿದೆ.

### ಯಾವುದು ತುಟ್ಟಿ

- ಸಿಗರೇಟ್
- ಮದ್ಯ
- ತಂಬಾಕು
- ಆಮದು ಯಂತ್ರೋಪಕರಣ
- ಆಮದು ಮಾಡಿಕೊಳ್ಳುವ ವಸ್ತುಗಳು
- ಆಮದಾಗುವ ಪ್ಲಾಸ್ಟಿಕ್ ವಸ್ತುಗಳು
- ನಿರ್ದಿಷ್ಟ ಟೆಲಿಕಾಂ ಉಪಕರಣಗಳು

## ಆದಾಯ–ವೆಚ್ಚ ಯಾರಿಗೆ, ಎಷ್ಟು?

**ನವದೆಹಲಿ:** ಕೇಂದ್ರ ಸರ್ಕಾರದ ಬೊಕ್ಕಸಕ್ಕೆ ಬರುವ ಪ್ರತಿ ರೂಪಾಯಿ ಆದಾಯದಲ್ಲಿ 64 ಪೈಸೆ ನೇರ ಮತ್ತು ಪರೋಕ್ಷ ತೆರಿಗೆಗಳಿಂದ ಸಂಗ್ರಹವಾಗುತ್ತದೆ ಎಂದು ಬಜೆಟ್‌ನಲ್ಲಿ ಘೋಷಿಸಲಾಗಿದೆ.

ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಭಾನುವಾರ ಸಂಸತ್ತಿನಲ್ಲಿ 2026–27ನೇ ಸಾಲಿನ ಕೇಂದ್ರ ಬಜೆಟ್ ಮಂಡಿಸಿದ್ದಾರೆ. ಸರ್ಕಾರಕ್ಕೆ ಬರುವ ಪ್ರತಿ ಒಂದು ರೂಪಾಯಿ ಆದಾಯದಲ್ಲಿ 24 ಪೈಸೆ ಸಾಲ ದಿಂದ, 10 ಪೈಸೆ ಹೂಡಿಕೆ ಹಿಂತೆಗೆತದಂತಹ ತೆರಿಗೆಯೇತರ ಆದಾಯದಿಂದ ಮತ್ತು 2 ಪೈಸೆ ಸಾಲೇತರ ಬಂಡವಾಳ ಸ್ವೀಕೃತಿಗಳಿಂದ ಬರಲಿದೆ ಎಂದು ಬಜೆಟ್ ದಾಖಲೆಗಳಲ್ಲಿ ಉಲ್ಲೇಖಿಸಲಾಗಿದೆ. ಆದಾಯ ತೆರಿಗೆಯಿಂದ ಪ್ರತಿ ರೂಪಾಯಿಗೆ 21 ಪೈಸೆ, ಕಾರ್ಪೊರೇಟ್ ತೆರಿಗೆಯಿಂದ 18 ಪೈಸೆ ಮತ್ತು ಸರಕು ಮತ್ತು ಸೇವಾ ತೆರಿಗೆಯಿಂದ (ಜಿಎಸ್‌ಟಿ) 15 ಪೈಸೆ ಆದಾಯ ಬರಲಿದೆ. ಇದಲ್ಲದೆ, ಪುಟ 3ಕ್ಕೆ

## ಬೆಂಗಳೂರಿಗೆ ಬುಲೆಟ್ ರೈಲು

**ನವದೆಹಲಿ:** ಬಜೆಟ್‌ನಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಬಂಪರ್ ಕೊಡುಗೆ ಕೊಟ್ಟಿದ್ದಾರೆ. 7 ಹೈಸ್ಪೀಡ್ ರೈಲು ಕಾರಿಡಾರ್ ಘೋಷಣೆ ಮಾಡಲಾಗಿದ್ದು, ಬೆಂಗಳೂರಿಗೆ ಬುಲೆಟ್ ರೈಲು ಘೋಷಿಸಲಾಗಿದೆ. ಪುಟ 3ಕ್ಕೆ



# ಹೊಸ ಆದಾಯ ತೆರಿಗೆ ಕಾಯ್ದೆ ಜಾರಿ

### ಸರಳೀಕೃತ ತೆರಿಗೆ ನಿಯಮ | ಆದಾಯ ತೆರಿಗೆ ಸ್ಲ್ಯಾಬ್ ಯಥಾಸ್ಥಿತಿ

**ನವದೆಹಲಿ:** ಆದಾಯ ತೆರಿಗೆ ಕಾಯ್ದೆ 2025 ಅನ್ನು ಏಪ್ರಿಲ್ 1ರಿಂದ ಜಾರಿಗೆ ತರಲಾಗುವುದು. ನಿಯಮಗಳು ಮತ್ತು ತೆರಿಗೆ ರಿಟರ್ನ್ಸ್ ಫಾರ್ಮ್‌ಗಳನ್ನು ಶೀಘ್ರದಲ್ಲೇ ತಿಳಿಸಲಾಗುವುದು ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಘೋಷಿಸಿದರು.

ಏಪ್ರಿಲ್ 1 ರಿಂದ, ಆರು ದಶಕಗಳಷ್ಟು ಹಳೆಯದಾದ ತೆರಿಗೆ ಕಾನೂನಿನ ಬದಲಿಗೆ ಹೊಸ ಆದಾಯ ತೆರಿಗೆ ಕಾಯ್ದೆ 2025 ಜಾರಿಗೆ ಬರಲಿದೆ. 2026–27ರ ಬಜೆಟ್‌ನಲ್ಲಿ ತೆರಿಗೆ ಕಾನೂನುಗಳಲ್ಲಿ ಮಾಡಲಾದ ಬದಲಾವಣೆಗಳನ್ನು ಹೊಸ ಕಾನೂನಿನಲ್ಲಿ ಸೇರಿಸಲಾಗುವುದು ಎಂದು ತಿಳಿಸಿದರು.

ಲೋಕಸಭೆಯಲ್ಲಿ ಭಾನುವಾರ ತಮ್ಮ ಬಜೆಟ್ ಭಾಷಣದಲ್ಲಿ, ನೇರ ತೆರಿಗೆ ಸಂಹಿತೆ ದಾಖಲೆ ಸಮಯದಲ್ಲಿ ಪೂರ್ಣಗೊಂಡಿದೆ ಮತ್ತು ಆದಾಯ ತೆರಿಗೆ ಕಾಯ್ದೆ 2025 ಏಪ್ರಿಲ್ 1, 2026ರಿಂದ ಜಾರಿಗೆ ಬರಲಿದೆ. ಸರಳೀಕೃತ ಆದಾಯ ತೆರಿಗೆ ನಿಯಮಗಳು ಮತ್ತು ನಮೂನೆಗಳನ್ನು ಶೀಘ್ರದಲ್ಲೇ ತಿಳಿಸಲಾಗುವುದು. ಸರ್ಕಾರ ಶೀಘ್ರದಲ್ಲೇ ಹೊಸ, ಸರಳೀಕೃತ ಆದಾಯ ತೆರಿಗೆ ನಿಯಮಗಳು ಮತ್ತು ನಮೂನೆಗಳನ್ನು ಬಿಡುಗಡೆ ಮಾಡುತ್ತದೆ ಮತ್ತು ಅದು ಜಾರಿಗೆ ಬರುವ ಮೊದಲು ತೆರಿಗೆದಾರರು ಅವುಗಳನ್ನು ಅರ್ಥಮಾಡಿಕೊಳ್ಳಲು ಮತ್ತು ಅನುಸರಿಸಲು ಸಾಕಷ್ಟು ಸಮಯ ನೀಡಲಾಗುವುದು ಎಂದು ಹೇಳಿದರು. ಸಾಮಾನ್ಯ ನಾಗರಿಕರು ಯಾವುದೇ ತೊಂದರೆಯಿಲ್ಲದೆ ಪಾಲಿಸಬಹುದಾದ ರೀತಿಯಲ್ಲಿ ಫಾರ್ಮ್‌ಗಳನ್ನು ಮರು ವಿನ್ಯಾಸಗೊಳಿಸಲಾಗಿದೆ. 2025ರ ಆದಾಯ ತೆರಿಗೆ ಕಾನೂನು ಸದ್ಯದ ತೆರಿಗೆ ದರಗಳನ್ನು ಬದಲಿಸುವುದಿಲ್ಲ ಮತ್ತು ತೆರಿಗೆಗಳಿಂದ ಸರ್ಕಾರದ ಒಟ್ಟು ಆದಾಯವು ಸರಿಸುಮಾರು ಒಂದೇ ಆಗಿರುವಂತೆ ವಿನ್ಯಾಸ ಗೊಳಿಸಲಾಗಿದೆ. ಇದು ನೇರ ತೆರಿಗೆ ಕಾನೂನುಗಳಲ್ಲಿನ ಬದಲಾವಣೆಗಳನ್ನು ಅರ್ಥ ಮಾಡಿಕೊಳ್ಳಲು ಸುಲಭ ಮಾಡ ಲಾಗಿದೆ. ಇದು ಗೊಂದಲವನ್ನು ನಿವಾರಿಸುತ್ತದೆ ಮತ್ತು ತೆರಿಗೆಗಳಿಗೆ ಸಂಬಂಧಿಸಿದ ವಿವಾದಗಳು ಅಥವಾ ಕಾನೂನು ಪ್ರಕರಣಗಳ ಸಾಧ್ಯತೆಗಳನ್ನು ಕಡಿಮೆ ಮಾಡುತ್ತದೆ. ಇದು 1961ರ ಆದಾಯ ತೆರಿಗೆ ಕಾಯ್ದೆಗೆ




ಹೋಲಿಸಿದರೆ ಪಠ್ಯದ ಪ್ರಮಾಣ ಮತ್ತು ವಿಭಾಗಗಳನ್ನು ಸುಮಾರು ಶೇ 50ರಷ್ಟು ಕಡಿಮೆ ಮಾಡುತ್ತದೆ ಎಂದು ಸಚಿವರು ತಿಳಿಸಿದರು.

ಹೊಸ ಕಾನೂನು ತೆರಿಗೆ ಅವಧಿಯನ್ನು ಸರಳಗೊಳಿಸುತ್ತದೆ, ಮೌಲ್ಯಮಾಪನ ವರ್ಷ ಮತ್ತು ಹಿಂದಿನ ವರ್ಷದ ನಡುವಿನ ವ್ಯತ್ಯಾಸವನ್ನು ತೆಗೆದುಹಾಕಿ, ಅದನ್ನು ಒಂದೇ ತೆರಿಗೆ ವರ್ಷದ ಪುಟ 2ಕ್ಕೆ

# ಪ್ರತಿ ಜಿಲ್ಲೆಯಲ್ಲಿ ಬಾಲಕಿಯರ ಹಾಸ್ಟೆಲ್

### * ವಿದ್ಯಾರ್ಥಿನಿಯರಿಗೆ ಉತ್ತಮ ಶಿಕ್ಷಣ ನೀಡಲು ಆದ್ಯತೆ

**ನವದೆಹಲಿ:** ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ತಮ್ಮ ದಾಖಲೆಯ 9ನೇ ಬಜೆಟ್‌ನಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಬಂಪರ್ ಕೊಡುಗೆ ಘೋಷಣೆ ಮಾಡಿದ್ದಾರೆ. ದೇಶಾದ್ಯಂತ ಶಿಕ್ಷಣ, ಸಂಶೋಧನೆ, ಕ್ರಿಯೇಟಿವ್ (ಸೃಜನಶೀಲ) ವಲಯಗಳನ್ನ ಬಲಪಡಿಸುವ ಉದ್ದೇಶದಿಂದ ಹಲವು ಯೋಜನೆಗಳನ್ನ ಘೋಷಿಸಿದ್ದಾರೆ.

ಕೇಂದ್ರ ಸರ್ಕಾರವು ದೇಶದ ಪ್ರತಿ ಜಿಲ್ಲೆಯಲ್ಲೂ ಬಾಲಕಿಯರ ಹಾಸ್ಟೆಲ್ ಸ್ಥಾಪಿಸುವ ಉದ್ದೇಶ ಹೊಂದಿದೆ. ಜೊತೆಗೆ 15,000 ಮಾಧ್ಯಮಿಕ ಶಾಲೆಗಳು (ಹೈಸ್ಕೂಲ್) ಮತ್ತು 500 ಕಾಲೇಜುಗಳಲ್ಲಿ ಕಂಟೆಂಟ್ ಕ್ರಿಯೇಟರ್ಸ್ ಲ್ಯಾಬ್ (ವಿಷಯ ರಚನೆಕಾರರ ಪ್ರಯೋಗಾಲಯ) ಗಳನ್ನ ಸ್ಥಾಪಿಸುವುದಾಗಿ ಘೋಷಿಸಿದ್ದಾರೆ. ಇದಕ್ಕಾಗಿ ಮುಂಬೈನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಕ್ರಿಯೇಟಿವ್ ಟೆಕ್ನಾಲಜೀಸ್‌ಗೆ ಅಗತ್ಯ ಬೆಂಬಲ ನೀಡುವುದಾಗಿ ತಿಳಿಸಿದ್ದಾರೆ.

ಅಲ್ಲದೇ ಅನಿಮೇಷನ್, ವಿಷ್ಯುವಲ್ ಎಫೆಕ್ಸ್, ಗೇಮಿಂಗ್ ಮತ್ತು ಕಾಮಿಕ್ಸ್ ಬೆಳೆಯುತ್ತಿರುವ ಉದ್ಯಮವಾಗಿದೆ. 2030ರ ವೇಳೆಗೆ 2 ದಶಲಕ್ಷ ವೃತ್ತಿಪರರ ಅಗತ್ಯವಿರಲಿದೆ ಎಂದು ಅಂದಾಜಿಸಲಾಗಿದೆ. ಹೀಗಾಗಿ ಕಂಟೆಂಟ್ ಕ್ರಿಯೇಟರ್ಸ್ ಲ್ಯಾಬ್‌ಗಳನ್ನ ಸ್ಥಾಪಿಸುವುದಾಗಿ ನಿರ್ಮಲಾ ಸೀತಾರಾಮನ್ ತಿಳಿಸಿದರು.



ಡಿಸೈನ್ ಮತ್ತು ಇನೋವೇಷನ್ (ನಾವಿನ್ಯತೆ) ಶಿಕ್ಷಣವನ್ನ ಬಲಪಡಿಸುವ ಗುರಿ ಹೊಂದಿದೆ. ಜೊತೆಗೆ ಐದು ವಿಶ್ವವಿದ್ಯಾಲಯ ಟೌನ್‌ಶಿಪ್‌ಗಳನ್ನ ಅಭಿವೃದ್ಧಿಪಡಿಸುವುದಾಗಿ ನಿರ್ಮಲಾ ಸೀತಾರಾಮನ್ ಘೋಷಿಸಿದ್ದಾರೆ. ಈ ಟೌನ್‌ಶಿಪ್‌ಗಳು ವಸತಿ ಸೌಲಭ್ಯಗಳು, ಸುಧಾರಿತ ಸಂಶೋಧನಾ ಮೂಲಸೌಕರ್ಯ, ಬಹು ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳನ್ನ ಒಂದೇ ಸಂಕೀರ್ಣದಲ್ಲಿ ಒಳಗೊಂಡಿರಲಿದೆ ಎಂದು ತಿಳಿಸಿದ್ದಾರೆ.

# ಪಂಚ ರಾಜ್ಯಗಳಿಗೆ ಭರಪೂರ ಕೊಡುಗೆ

### * ಮುಂಬರುವ ಚುನಾವಣೆ ಹಿನ್ನೆಲೆಯಲ್ಲಿ ಸಿಂಹಪಾಲು ಅನುದಾನ

**ನವದೆಹಲಿ:** ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭಾನುವಾರ ದಾಖಲೆಯ 9ನೇ ಬಜೆಟ್ ಅನ್ನು ಮಂಡಿಸಿದರು. ಇದರಲ್ಲಿ ವಿಧಾನಸಭೆ ಚುನಾವಣೆ ನಡೆಯಲಿರುವ ಪಂಚ ರಾಜ್ಯಗಳಿಗೆ ಹೆಚ್ಚಿನ ಅನುದಾನ ಘೋಷಿಸಲಾಗಿದೆ.

ಮುಂಬರುವ ಏಪ್ರಿಲ್‌ನಲ್ಲಿ ಕೇರಳ, ತಮಿಳುನಾಡು, ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ರಾಜ್ಯಗಳಲ್ಲಿ ಚುನಾವಣೆ ನಡೆಯಲಿದೆ. ಚುನಾವಣೆ ಮೇಲೆ ಕಣ್ಣಿಟ್ಟಿರುವ ಕೇಂದ್ರ ಸರ್ಕಾರ ಈ ರಾಜ್ಯಗಳಿಗೆ ನಿರೀಕ್ಷೆಯಂತೆ ಬಜೆಟ್‌ನಲ್ಲಿ ಸಿಂಹಪಾಲು ಅನುದಾನ ನೀಡಿದೆ.

ಒಡಿಶಾ, ಕೇರಳ, ಆಂಧ್ರಪ್ರದೇಶ ಮತ್ತು ತಮಿಳುನಾಡಿನಂತಹ ಖನಿಜ ಸಮೃದ್ಧ ರಾಜ್ಯಗಳನ್ನು ಗಮನದಲ್ಲಿರಿಸಿಕೊಂಡು ಅಪರೂಪದ ಭೂ ಕಾರಿಡಾರ್ ಸ್ಥಾಪಿಸುವುದಾಗಿ ಸಚಿವೆ ನಿರ್ಮಲಾ ಘೋಷಣೆ ಮಾಡಿದ್ದಾರೆ.

ಈ ಕಾರಿಡಾರ್‌ಗಳು ಖನಿಜ ಗಣಿಗಾರಿಕೆ, ಸಂಸ್ಕರಣೆ, ಸಂಶೋಧನೆ ಮತ್ತು ಉತ್ಪಾದನೆಯ ಮೇಲೆ ಗಮನ ಕೇಂದ್ರೀಕರಿಸುತ್ತವೆ ಎಂದರು. 2025ರ ನವೆಂಬರ್‌ನಲ್ಲಿ ಆಯಸ್ಕಾಂತದಂಥ ಶಾಶ್ವತ ಭೂ ಖನಿಜ ಯೋಜನೆ ಪ್ರಾರಂಭಿಸಿದ ನಂತರ, ಉತ್ಪಾದನಾ ವಲಯದಲ್ಲಿ ಭಾರತದ ಸಾಮರ್ಥ್ಯವನ್ನು ಬಲಪಡಿಸುವ ಗುರಿ ಹೊಂದಿದೆ ಎಂದಿದ್ದಾರೆ.

ಉತ್ತರ ಭಾರತದ ರಾಜ್ಯಗಳಲ್ಲಿ ಸುರಕ್ಷಿತ ಮತ್ತು ಸುಸ್ಥಿರ ಚಾರಣ ಹಾಗೂ ಪಾದಯಾತ್ರೆಯ ಹಾದಿಗಳನ್ನು ಸ್ಥಾಪಿಸಲು ಸರ್ಕಾರ ಯೋಜಿಸಿದೆ. ಇದಲ್ಲದೆ, ಅವರು ಒಡಿಶಾ, ಕರ್ನಾಟಕ ಮತ್ತು ಕೇರಳದ ಪ್ರಮುಖ ಆಮೆ ಗೂಡುಕಟ್ಟುವ ಹಾದಿಗಳನ್ನು ಹಾಗೂ ಆಂಧ್ರಪ್ರದೇಶ ಮತ್ತು ತಮಿಳುನಾಡಿನ ಪುಲಿಕಾಟ್ ಸರೋವರದ ಉದ್ದಕ್ಕೂ ಪಕ್ಷಿ ವೀಕ್ಷಣಾ ಹಾದಿಗಳನ್ನು ಪುಟ 3ಕ್ಕೆ



# ವಿಕಸಿತ ಭಾರತಕ್ಕೆ ಸ್ಪಷ್ಟ ಮಾರ್ಗಸೂಚಿ

### ಕೇಂದ್ರ ಬಜೆಟ್‌ಗೆ ಪ್ರಧಾನಿ ನರೇಂದ್ರ ಮೋದಿ 'ಬಹುಪರಾಕ್'

**ನವದೆಹಲಿ:** ಕೇಂದ್ರ ಬಜೆಟ್ 140 ಕೋಟಿ ಭಾರತೀಯರ ಆಕಾಂಕ್ಷೆಗಳನ್ನು ಪ್ರತಿಬಿಂಬಿಸುವ ಮೂಲಕ ವಿಕಸಿತ ಭಾರತ ನಿರ್ಮಾಣಕ್ಕೆ ಸ್ಪಷ್ಟ ಮಾರ್ಗಸೂಚಿಯನ್ನು ಒದಗಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಬಹುಪರಾಕ್ ಹೇಳಿದ್ದಾರೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಭಾನುವಾರ ಸತತ 9ನೇ ಬಾರಿಗೆ ಬಜೆಟ್ ಅನ್ನು ಮಂಡಿಸಿದ ನಂತರ ಕೇಂದ್ರ ಬಜೆಟ್ ಕುರಿತು ಪ್ರಧಾನಿ ಮೋದಿ ಅವರು ಪ್ರತಿಕ್ರಿಯಿಸಿದರು. ಇದು ಹಣಕಾಸಿನ ಕೊರತೆಯನ್ನು ಕಡಿಮೆ ಮಾಡುವುದು, ಹಣದುಬ್ಬರವನ್ನು ನಿಯಂತ್ರಣಕ್ಕೆ ತರುವತ್ತ ಗಮನ ಹರಿಸಿದ ವಿಶೇಷ ಬಜೆಟ್ ಆಗಿದೆ. ಅದೇ ರೀತಿ ಬಂಡವಾಳ ಹೂಡಿಕೆ ಮತ್ತು ಅಭಿವೃದ್ಧಿಗೆ ಪೂರವಾಗಿದೆ. ಯುವ ಜನತೆಗೆ ಮುಕ್ತ ಅವಕಾಶವನ್ನು ಒದಗಿಸುತ್ತದೆ ಎಂದು ಅಭಿಪ್ರಾಯಪಟ್ಟರು.



ಈ ಬಾರಿಯ ಬಜೆಟ್ 2047ರ ವಿಕಸಿತ ಭಾರತ ನಿರ್ಮಾಣಕ್ಕೆ ಭದ್ರ ಅಡಿಪಾಯವಾಗಲಿದೆ. ಮೇಕ್ ಇನ್ ಇಂಡಿಯಾ ಮತ್ತು ಆತ್ಮನಿರ್ಭರ ಭಾರತ ಅಭಿಯಾನಕ್ಕೆ ಹೊಸ ವೇಗವನ್ನು ನೀಡುವ ಮಹತ್ವಾಕಾಂಕ್ಷೆಯ ಮಾರ್ಗಸೂಚಿಯನ್ನು ರೂಪಿಸಲಾಗಿದೆ. ಈ ಬಜೆಟ್‌ನಲ್ಲಿ ಹೊಸ ಮತ್ತು ಉದಯೋನ್ಮುಖ ಕೈಗಾರಿಕೆಗಳ ಪುಟ 3ಕ್ಕೆ

## ಶೇ.4.13ರಷ್ಟು ತೆರಿಗೆ ಪಾಲು, ಕಾಂಗ್ರೆಸ್‌ಗೆ ಉತ್ತರ: ಎಚ್‌ಡಿಕೆ




**ನವದೆಹಲಿ:** ಕೇಂದ್ರದ 2026–27ನೇ ಸಾಲಿನ ಬಜೆಟ್ ಮೂಲಕ ರಾಜ್ಯ ಕಾಂಗ್ರೆಸ್ ಸರ್ಕಾರ ಮಾಡುತ್ತಿರುವ ಟೀಕೆಗಳಿಗೆ ಉತ್ತರ ಕೊಡಲಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ತೆರಿಗೆ ಪಾಲಿನಲ್ಲಿ ಅನ್ಯಾಯ ಆಗಿದೆ ಎಂದು ರಾಜ್ಯ ಸರ್ಕಾರ ಸಾಮಾನ್ಯವಾಗಿ ದೂರುತ್ತಿತ್ತು. 16ನೇ ಪುಟ 3ಕ್ಕೆ


## ರಾಜ್ಯದ ಪಾಲು ಸಿಕ್ಕಿಲ್ಲ: ಡಿಕೆಶಿ

**ರಾಮನಗರ:** ಕೇಂದ್ರ ಬಜೆಟ್ ನಿಂದ ರಾಜ್ಯಕ್ಕೆ ಯಾವುದೇ ಅನುಕೂಲ ಆಗಿಲ್ಲ. ನಮ್ಮ ರಾಜ್ಯಕ್ಕೆ ಯಾವುದೇ ದೊಡ್ಡ ಪಾಲು ಬಂದಿಲ್ಲ. ಬೆಂಗಳೂರಿಗೆ ಯಾವ ಹೈಸ್ಪೀಡ್ ರೈಲೂ ಬರಲ್ಲ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಟೀಕಿಸಿದ್ದಾರೆ.

ಬೆಂಗಳೂರಿಗೆ ಹೈಸ್ಪೀಡ್ ರೈಲು ಘೋಷಣೆ ವಿಚಾರದ ಬಗ್ಗೆ ಮಾತನಾಡಿ, ರಾಜ್ಯಕ್ಕೆ ಯಾವ ಸ್ಪೀಡ್ ರೈಲೂ ಬರಲ್ಲ. 50:50 ಅನುಪಾತದಲ್ಲಿ ಮಾಡಲು ಆಗಲ್ಲ, ಬೇಕಿದ್ದರೆ 90:10 ಕೊಡಲಿ. ಆಗ ನಾವು ಶೇ.10 ಕೊಡುತ್ತೇವೆ. ಬೇರೆ ರಾಜ್ಯಗಳಿಗೆ ಅವರೇ ಮಾಡಿಕೊಟ್ಟಿದ್ದಾರೆ. ನಮ್ಮ ರಾಜ್ಯಕ್ಕೂ ಶೇ.90 ಮಾಡಲಿ. ಬೆಂಗಳೂರು ಬಗ್ಗೆ ಅತಿಹೆಚ್ಚು ನಿರೀಕ್ಷೆ ಇತ್ತು. ಪುಟ 2ಕ್ಕೆ



## ಕುರುಡು ಬಜೆಟ್: ರಾಗಾ




**ನವದೆಹಲಿ:** ದೇಶದ ನಿಜವಾದ ಬಿಕ್ಕಟ್ಟುಗಳತ್ತ ಗಮನ ಹರಿಸದ ಕುರುಡು ಬಜೆಟ್ ಇದಾಗಿದೆ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವ್ಯಂಗ್ಯವಾಡಿದ್ದಾರೆ.

ಯುವಜನರಿಗೆ ಉದ್ಯೋಗವಿಲ್ಲ. ಉತ್ಪಾದನೆ ಕುಸಿಯುತ್ತಿದೆ. ಹೂಡಿಕೆದಾರರು ಬಂಡವಾಳ ಹಿಂತೆಗೆದುಕೊಳ್ಳುತ್ತಿದ್ದಾರೆ. ರೈತರು ಸಂಕಷ್ಟದಲ್ಲಿದ್ದಾರೆ. ಜಾಗತಿಕ ಸವಾಲುಗಳು ಪುಟ 2ಕ್ಕೆ

### ಯಾರು ಏನೆಂದರು?

## ಸವಾಲುಗಳಿಗೆ ಪರಿಹಾರ ನೀಡದ ಬಜೆಟ್: ಖರ್ಗೆ

**ನವದೆಹಲಿ:** ದೇಶದ ಆರ್ಥಿಕ, ಸಾಮಾಜಿಕ ಹಾಗೂ ರಾಜಕೀಯ ಸವಾಲುಗಳಿಗೆ ಪರಿಹಾರ ಒದಗಿಸದ ಬಜೆಟ್ ಇದಾಗಿದೆ ಎಂದು ಕೇಂದ್ರ ಬಜೆಟ್ ಕುರಿತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರತಿಕ್ರಿಯಿಸಿದ್ದಾರೆ.



ಯಾವುದೇ ದೂರದೃಷ್ಟಿ, ಇಚ್ಛಾಶಕ್ತಿ ಇಲ್ಲದ ಬಜೆಟ್ ಇದಾಗಿದೆ. ಮಿಷನ್ ಮೋಡ್ ಈಗ ಚಾಲೆಂಜ್ ರೂಟ್ ಆಗಿದೆ. ರಿಫಾರ್ಮ್ ಎಕ್ಸ್‌ಪ್ರೆಸ್ ಈಗ ಜಂಕ್ಷನ್‌ಗಳಲ್ಲಿ ನಿಲ್ಲುತ್ತಿದೆ. ಯಾವುದೇ ದೂರದೃಷ್ಟಿ, ರಾಜಕೀಯ ಇಚ್ಛಾಶಕ್ತಿ ಈ ಬಜೆಟ್‌ನಲ್ಲಿ ಇಲ್ಲ ಎಂದು ಖರ್ಗೆ ಟೀಕಿಸಿದ್ದಾರೆ.

ರೈತರು ಆದಾಯ ಭದ್ರತಾ ಯೋಜನೆಗಳನ್ನು ನಿರೀಕ್ಷಿಸುತ್ತಿದ್ದರು. ಬಜೆಟ್ ನಲ್ಲಿ ಎಸ್‌ಸಿ, ಎಸ್‌ಟಿ, ಒಬಿಸಿ ಸೇರಿದಂತೆ ಯಾವ ಪುಟ 3ಕ್ಕೆ

## ಕರ್ನಾಟಕಕ್ಕೆ ಕೇಂದ್ರದ ಚೊಂಬು: ಸಿಎಂ ಸಿದ್ದರಾಮಯ್ಯ ವಾಗ್ದಾಳಿ

**ಕಲಬುರಗಿ:** ಕರ್ನಾಟಕ ಸೇರಿದಂತೆ ದಕ್ಷಿಣ ಭಾರತಕ್ಕೆ ಬಜೆಟ್‌ನಲ್ಲಿ ಏನೂ ಕೊಟ್ಟಿಲ್ಲ. ಕರ್ನಾಟಕಕ್ಕೆ ಒಂದು ಚೊಂಬು ಕೊಟ್ಟಿದ್ದಾರೆ ಅಷ್ಟೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ರಾಜ್ಯಕ್ಕೆ ನೀರಾವರಿ ಯೋಜನೆಗೆ ಹಣ ಕೇಳಿದ್ದೇವೆ. ಆದರೆ, ನೀರಾವರಿ ಯೋಜನೆಗೆ ಒಂದೇ ಒಂದು ರೂಪಾಯಿ ಕೊಟ್ಟಿಲ್ಲ. ಅಪ್ಪರ್ ಕೃಷ್ಣಾ ಹಾಗೂ ಅಪ್ಪರ್ ಭದ್ರಾ ಯೋಜನೆಗೆ ಸಹಾಯ ಕೇಳಿದರೂ ಕೊಟ್ಟಿಲ್ಲ. ಈ ಹಿಂದೆ ಬಜೆಟ್ ನಲ್ಲಿ ಯೋಜನೆಗೆ 5,200 ಕೋಟಿ ಹಣ ಕೊಡ್ತೀವಿ ಎಂದು ಹೇಳಿದ್ದರು. ಆದರೆ,



ಒಂದು ರೂಪಾಯಿ ಸಹ ಕೊಟ್ಟಿಲ್ಲ. ಮೇಕೆದಾಟು ಯೋಜನೆ ಪ್ರಕರಣ ಸಂಬಂಧ ತಮಿಳನಾಡು ಅರ್ಜಿ ವಜಾ ಆಗಿದೆ. ಆದರೂ ಸಹ ಆ ಯೋಜನೆಗೆ ಬಜೆಟ್ ನಲ್ಲಿ ಹಣ ಕೊಟ್ಟಿಲ್ಲ ಎಂದು ಅಸಮಾಧಾನ ಹೊರಹಾಕಿದರು.

ಬೆಂಗಳೂರು– ಪುಟ 3ಕ್ಕೆ

# 17 ಕ್ಯಾನ್ಸರ್ ಔಷಧಿಗಳ ಸುಂಕ ಇಳಿಕೆ

## ಮಾನಸಿಕ ಆರೋಗ್ಯ, ಆಸ್ಪತ್ರೆಗಳ ಮೂಲಸೌಕರ್ಯ ಅಭಿವೃದ್ಧಿಗೆ ಕ್ರಮ



ನವದೆಹಲಿ: ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಬಜೆಟ್‌ನಲ್ಲಿ 17 ಕ್ಯಾನ್ಸರ್ ಔಷಧಿಗಳ ಮೇಲಿನ ಕಸ್ಟಮ್ಸ್ ಸುಂಕ ವಿನಾಯಿತಿ ಮತ್ತು ಏಳು ಅಪರೂಪದ ಕಾಯಿಲೆಗಳಿಗೆ ಔಷಧಿಗಳ ಮೇಲಿನ ಸುಂಕ ವಿನಾಯಿತಿ ಸೇರಿದಂತೆ ಹಲವಾರು ಪ್ರಮುಖ ಆರೋಗ್ಯ ಕ್ರಮಗಳನ್ನು ಘೋಷಿಸಿದ್ದಾರೆ.

ಐದು ವರ್ಷಗಳಲ್ಲಿ 10,000 ಕೋಟಿ ರೂ. ವೆಚ್ಚದಲ್ಲಿ ಬಯೋಫಾರ್ಮಾ ಶಕ್ತಿ ಉಪಕ್ರಮವನ್ನು ಪ್ರಾರಂಭಿಸಲಾಗಿದೆ. ಈ ಕಾರ್ಯಕ್ರಮವು ಜೈವಿಕ ತಂತ್ರಜ್ಞಾನ ಮತ್ತು ಔಷಧಗಳಲ್ಲಿ ಸಂಶೋಧನೆ, ಉತ್ಪಾದನೆ ಮತ್ತು ನಾವೀನ್ಯತೆಯನ್ನು ವೇಗಗೊಳಿಸುತ್ತದೆ.

ವೈದ್ಯಕೀಯ ವೆಚ್ಚವನ್ನು ಕಡಿಮೆ ಮಾಡಲು, ಸರ್ಕಾರವು 17 ಕ್ಯಾನ್ಸರ್ ಔಷಧಿಗಳ ಮೇಲಿನ ಮೂಲ ಕಸ್ಟಮ್ಸ್ ಸುಂಕವನ್ನು ಮನ್ನಾ ಮಾಡಿದೆ. ವೈಯಕ್ತಿಕವಾಗಿ ಆಮದು ಮಾಡಿಕೊಳ್ಳುವ ಔಷಧಿಗಳು ಮತ್ತು ವಿಶೇಷ ವೈದ್ಯಕೀಯ ಆಹಾರಕ್ಕಾಗಿ ಏಳು ಹೆಚ್ಚುವರಿ ಅಪರೂಪದ ಕಾಯಿಲೆಗಳಿಗೆ ಆಮದು ಸುಂಕ ವಿನಾಯಿತಿಗಳನ್ನು ಬಜೆಟ್‌ನಲ್ಲಿ ವಿಸ್ತರಿಸಲಾಗಿದೆ.

ಸರ್ಕಾರದ ಮಿತ್ರ ಆರೋಗ್ಯ ವೃತ್ತಿಪರರಿಗೆ ಈಗ ಇರುವ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲು, ಸಾರ್ವಜನಿಕ ಮತ್ತು ಖಾಸಗಿ ವಲಯಗಳಲ್ಲಿ ಹೊಸ ಸಂಸ್ಥೆಗಳನ್ನು ಸ್ಥಾಪಿಸಲು ಯೋಜಿಸಿದೆ. ಮುಂದಿನ ಐದು ವರ್ಷಗಳಲ್ಲಿ 1 ಲಕ್ಷ ಮಿತ್ರ ಆರೋಗ್ಯ ವೃತ್ತಿಪರರಿಗೆ ಆಪ್ಟೋಮೆಟ್ರಿ, ರೇಡಿಯಾಲಜಿ, ಅರಿವಳಿಕೆ ಮತ್ತು ಅನ್ವಯಿಕ ಮನೋವಿಜ್ಞಾನದಂತಹ ವಿಭಾಗಗಳಲ್ಲಿ ತರಬೇತಿ ನೀಡಲಾಗುವುದು. ಹಿರಿಯರ ಆರೈಕೆ ಮತ್ತು ಸಂಬಂಧಿತ ಸೇವೆಗಳನ್ನು ಬಲಪಡಿಸಲು, 1.5 ಲಕ್ಷ ಬಹು-ಕೌಶಲ್ಯ ಹೊಂದಿರುವ ಆರೈಕೆದಾರರಿಗೆ ರಾಷ್ಟ್ರೀಯ ಕೌಶಲ್ಯ ಅರ್ಹತಾ ಚೌಕಟ್ಟಿನೊಂದಿಗೆ ಕಾರ್ಯಕ್ರಮಗಳ ಮೂಲಕ ತರಬೇತಿ ನೀಡಲಾಗುವುದು.

ಭಾರತವನ್ನು ವೈದ್ಯಕೀಯ ಪ್ರವಾಸೋದ್ಯಮದ ಕೇಂದ್ರವಾಗಿಸಲು, ಖಾಸಗಿ ವಲಯದ ಸಹಭಾಗಿತ್ವದಲ್ಲಿ ಐದು ಪ್ರಾದೇಶಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಕೇಂದ್ರ ಸರ್ಕಾರ ರಾಜ್ಯಗಳಿಗೆ ಬೆಂಬಲ ನೀಡುತ್ತದೆ. ಈ ಸಂಯೋಜಿತ ಸಂಕೀರ್ಣಗಳು ಆಯುಷ್ ಕೇಂದ್ರಗಳು, ವೈದ್ಯಕೀಯ ಮೌಲ್ಯ ಪ್ರವಾಸೋದ್ಯಮ ಸೌಲಭ್ಯ ಕೇಂದ್ರಗಳು, ರೋಗನಿರ್ಣಯ ಮತ್ತು ಪುನರ್ವಸತಿ ಮೂಲಸೌಕರ್ಯ ಮತ್ತು ಸಂಶೋಧನೆ, ಶೈಕ್ಷಣಿಕ ಸೌಲಭ್ಯಗಳನ್ನು ಒಳಗೊಂಡಿರುತ್ತವೆ. ಇದು ವೈದ್ಯರು, ಮಿತ್ರ ಆರೋಗ್ಯ ವೃತ್ತಿಪರರು ಮತ್ತು ಆರೈಕೆದಾರರಿಗೆ ಗಮನಾರ್ಹ ಉದ್ಯೋಗವನ್ನು ಸೃಷ್ಟಿಸುತ್ತದೆ.

ಮೂರು ಹೊಸ ಅಖಿಲ ಭಾರತ ಆಯುರ್ವೇದ ಸಂಸ್ಥೆಗಳ ಸ್ಥಾಪನೆ, ಆಯುಷ್ ಔಷಧಾಲಯಗಳು ಮತ್ತು ಔಷಧ ಪರೀಕ್ಷಾ ಪ್ರಯೋಗಾಲಯಗಳನ್ನು ಮೇಲ್ದರ್ಜೆಗೇರಿಸುವುದು, ಜಾಮ್‌ನಗರದಲ್ಲಿರುವ ಜಾಗತಿಕ ಸಾಂಪ್ರದಾಯಿಕ ಔಷಧ ಕೇಂದ್ರವನ್ನು ಹೆಚ್ಚಿಸುವ ಪ್ರಸ್ತಾಪವನ್ನು ಬಜೆಟ್‌ನಲ್ಲಿ ಮಂಡಿಸಲಾಗಿದೆ. ಈ ಉಪಕ್ರಮಗಳು ಸಾಂಪ್ರದಾಯಿಕ ಔಷಧದ ಜಾಗತಿಕ ಬೇಡಿಕೆಯನ್ನು ಪೂರೈಸುವ ಮತ್ತು ಈ ವಲಯದಲ್ಲಿ ನುರಿತ ವೃತ್ತಿಪರರ ಲಭ್ಯತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿವೆ. ಮಾನಸಿಕ ಆರೋಗ್ಯದ ಮೇಲೆ ಗಮನ ಹರಿಸುವುದರಲ್ಲಿ ಉತ್ತರ ಭಾರತದ ಪ್ರಮುಖ ಮಾನಸಿಕ ಆರೋಗ್ಯ ಸಂಸ್ಥೆಯಾದ ನಿಮ್ಹಾನ್ಸ್ 2.0 ರಚನೆಯೂ ಸೇರಿದೆ. ಹೊಸ ತುರ್ತು ಮತ್ತು ಆಘಾತ ಆರೈಕೆ ಕೇಂದ್ರಗಳ ಮೂಲಕ ಜಿಲ್ಲಾ ಆಸ್ಪತ್ರೆಗಳ ಸಾಮರ್ಥ್ಯವನ್ನು ಶೇ.50ರಷ್ಟು ಹೆಚ್ಚಿಸಲಾಗುವುದು ಘೋಷಿಸಿದ್ದಾರೆ.

## ಫಾಸ್ಟ್ಯಾಗ್ ನಿಯಮ ಸಡಿಲ

ನವದೆಹಲಿ: ದೇಶದ ಆರ್ಥಿಕ ವಲಯದಲ್ಲಿ ಮತ್ತು ಸಾಮಾನ್ಯ ಜನರ ದೈನಂದಿನ ಬದುಕಿನಲ್ಲಿ ಫೆ.1ರಿಂದ ಹಲವು ಮಹತ್ವದ ಬದಲಾವಣೆಗಳು ಜಾರಿಗೆ ಬರಲಿವೆ. ಫಾಸ್ಟ್ಯಾಗ್ ನಿಯಮಗಳು, ತಂಬಾಕು ಉತ್ಪನ್ನಗಳ ಬೆಲೆಯಲ್ಲಿ ಬದಲಾವಣೆ, ಎಲ್‌ಪಿಜಿ ಗ್ಯಾಸ್ ದರದಲ್ಲಿ ಬದಲಾವಣೆ ಕಂಡಿವೆ.

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ವಾಹನ ಸವಾರರಿಗೆ ದೊಡ್ಡ ರಿಲೀಫ್ ನೀಡಿದೆ. ಫಾಸ್ಟ್ ಟ್ಯಾಗ್ ಗೆ ಸಂಬಂಧಿಸಿದ ಕೆವೈಸಿ ಪರಿಶೀಲನಾ ಪ್ರಕ್ರಿಯೆಯನ್ನ ಸಂಪೂರ್ಣವಾಗಿ ತೆಗೆದುಹಾಕಿರುವುದಾಗಿ ಘೋಷಿಸಿದೆ. ವಾಹನದ ಮಾಹಿತಿಯನ್ನು ಪರಿಶೀಲಿಸುವ ಸಂಪೂರ್ಣ ಜವಾಬ್ದಾರಿಯನ್ನ ಫಾಸ್ಟ್ಯಾಗ್ ವಿತರಿಸುವ ಬ್ಯಾಂಕ್‌ಗಳೇ ತೆಗೆದುಕೊಳ್ಳಲಿವೆ. ಇದರಿಂದ ಗ್ರಾಹಕರಿಗೆ ಪದೇ ಪದೇ ಕೆವೈಸಿ ಅಪ್‌ಡೇಟ್ ಮಾಡುವ ಕಿರಿಕಿರಿ ತಪ್ಪಲಿದೆ.

### ನಿರಾಶದಾಯಕ ಬಜೆಟ್

ಕೇಂದ್ರ ಸರ್ಕಾರದ ಬಜೆಟ್ ನಲ್ಲಿ ಹಿಂದುಳಿದ ಜಿಲ್ಲೆಗಳಲ್ಲಿ ಸಣ್ಣ ಕೈಗಾರಿಕೆಗಳನ್ನು(ಒಖಒಇ) ಸ್ಥಾಪನೆ ಮಾಡಲು ಐದು ವರ್ಷಗಳ ಕಾಲ ಜಿಎಸ್‌ಟಿ, ಪ್ರಾವಿಡೆಂಟ್ ಫಂಡ್ ವಿನಾಯಿತಿ ಬ್ಯಾಂಕ್ ಸಾಲದ ಮೇಲಿನ ಬಡ್ಡಿ ಇಳಿಕೆ.... ಆದಾಯ ತೆರಿಗೆ ವಿನಾಯಿತಿ ಮಿತಿ ಹೆಚ್ಚಳ ಇದಾವುದು ಮಾನ್ಯ ವಿತ್ತ ಸಚಿವರು ಗಣನೆಗೆ ತೆಗೆದುಕೊಂಡಿಲ್ಲ. ವಿಶೇಷವಾಗಿ ನಮ್ಮ ಚಾಮರಾಜನಗರ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಉದ್ಯಮಿಗಳು ಆಸಕ್ತಿ ತೋರುವುದಿಲ್ಲ.

▶▶ **ಎ.ಜಯಸಿಂಹ**
ಅಧ್ಯಕ್ಷ ಚಾಮರಾಜನಗರ ಸಣ್ಣ ಕೈಗಾರಿಕೆಗಳ ಸಂಘ

## ಕೇಂದ್ರ ಬಜೆಟ್ । ಜಿಲ್ಲೆಯಲ್ಲಿ ಮತ್ತೊಮ್ಮೆ ಹುಸಿಯಾದ ನಿರೀಕ್ಷೆ

# ಎಂದಿನಂತೆ ಜಿಲ್ಲೆಯಲ್ಲಿ ನಿರಸ ಪ್ರತಿಕ್ರಿಯೆ


ರಾಮನಗರ: ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಭಾನುವಾರ ಮಂಡಿಸಿದ ಕೇಂದ್ರ ಸರ್ಕಾರದ ಆಯವ್ಯಯ ಎಂದಿನಂತೆ ನಿರೀಕ್ಷೆಗಳು ಹುಸಿಯಾಗಿವೆ ಎಂದು ಜಿಲ್ಲೆಯ ಜನತೆ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಅಷ್ಟಕ್ಕೂ ಕೇಂದ್ರ ಸರ್ಕಾರದ ಆಯವ್ಯಯದ ಬಗ್ಗೆ ಹೆಚ್ಚೇನು ನಿರೀಕ್ಷೆಗಳು ಇರಲಿಲ್ಲ ಎಂದು ಜನರು ಪ್ರತಿಕ್ರಯಿಸಿದ್ದಾರೆ. ಕಳೆದ ಬಜೆಟ್‌ನಲ್ಲಿ ಅಟಿಕೆ ಉದ್ಯಮವನ್ನು ಪ್ರಸ್ತಾಪಿಸಲಾಗಿತ್ತು. ಚನ್ನಪಟ್ಟಣದ ಗೊಂಬೆ ಉದ್ಯಮಕ್ಕೆ ಪೂರಕವಾಗಲಿದೆ ಎಂಬ ವಿಶ್ವಾಸವಿತ್ತು. ಆದರೆ ಚನ್ನಪಟ್ಟಣದ ಗೊಂಬೆ ಉದ್ಯಮಕ್ಕೆ ಎಷ್ಟು ಲಾಭವಾಯಿತು ಎಂಬ ಲೆಕ್ಕಾಚಾರಗಳು ಇನ್ನು ನಡೆಯುತ್ತಲೇ ಇದೆ. ಕಳೆದ ಬಜೆಟ್‌ನಲ್ಲಿ ಪ್ರಕಟವಾಗಿದ್ದ ಆದಾಯ ತೆರಿಗೆ ಸ್ಲಾಬ್ ಪರಿಷ್ಕರಣೆ ಈಗಲೂ ಮುಂದುವರೆದಿದೆ. ಹೀಗಾಗಿ ವೇತನದಾರರಿಂದಲೂ ಯಾವ ಪ್ರತಿಕ್ರಿಯೆಗಳು ವ್ಯಕ್ತವಾಗಿಲ್ಲ.

### ರೇಷ್ಮೆ ಕೃಷಿಕರು ಮತ್ತು ಉದ್ಯಮಿಗಳಿಗೆ ನಿರಾಸೆ

ಜವಳಿ ಉದ್ಯಮದ ಬಗ್ಗೆ ಗಮನ ಹರಿಸಿರುವ ವಿತ್ತ ಸಚಿವರು, ಜಿಲ್ಲೆಯ ಆರ್ಥಿಕ ಚಟುವಟಿಕೆಗೆ ಕೊಡುಗೆ ನೀಡುತ್ತಿರುವ ರೇಷ್ಮೆ ಕೃಷಿ ಮತ್ತು ಉದ್ಯಮದ ಉದ್ಯಮದ ಬಗ್ಗೆ ಗಮನ ಹರಿಸಿಲ್ಲ ಎಂದು ರೀಲರ್‌ಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

### ರೈತರಿಂದ ಮಿಶ್ರ ಪ್ರತಿಕ್ರಿಯೆ

ಕೇಂದ್ರ ಸರ್ಕಾರದ ಆಯವ್ಯಯಕ್ಕೆ ರೈತ ಸಮುದಾಯದಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ರಾಜ್ಯ ರೈತ ಸಂಘದ ಬೆಂಗಳೂರು ದಕ್ಷಿಣ ಜಿಲ್ಲೆಯ ಅಧ್ಯಕ್ಷ ಎ. ಎಲ್.ಬೈರೇಗೌಡ ಪ್ರತಿಕ್ರಯಿಸಿ, ಕೇಂದ್ರ ಸರ್ಕಾರ ತನ್ನ ಆಯವ್ಯಯದಲ್ಲಿ ಕೃಷಿ ಕ್ಷೇತ್ರಕ್ಕೆ 1.62 ಲಕ್ಷ ಕೋಟಿ ರೂ ಮಾತ್ರ ಮೀಸಲಿಟ್ಟಿದೆ. ಬಹುಸಂಖ್ಯಾತ ರೈತರಿಗೆ ಕೊಟ್ಟಿರುವುದು ಅಲ್ಪಮೊತ್ತ ಎಂದು ಪ್ರತಿಕ್ರಿಯೆ ನೀಡಿದ್ದಾರೆ. ರೈತರಿಗೆ ಆರ್ಥಿಕ ಭದ್ರತೆಯ ಬಗ್ಗೆ ಈ ಆಯವ್ಯಯ ವಿಶ್ವಾಸ ಮೂಡಿಸಿಲ್ಲ. ರೈತರ



ಎಲ್ಲ ನಿರೀಕ್ಷೆಗಳು ಹುಸಿಯಾಗಿವೆ. ಕನಿಷ್ಠ ಬೆಂಬಲ ಬೆಲೆ ಕಾನೂನು ಜಾರಿಯ ಬಗ್ಗೆಯೂ ವಿಶ್ವಾಸ ವಿತ್ತು. ಅದು ಕೂಡ ಹುಸಿಯಾಗಿದೆ ಎಂದಿದ್ದಾರೆ.

ಕೇಂದ್ರ ಸರ್ಕಾರ ತನ್ನ ಬಜೆಟ್‌ನಲ್ಲಿ ತೆಂಗು ಕೃಷಿಗೆ ಪ್ರೋತ್ಸಾಹ ಘೋಷಿಸಿದೆ ಎಂದು ಶ್ಲಾಘಿಸಿದ್ದಾರೆ. ಆದರೆ ಜಿಲ್ಲೆಯ ಬಹುಮುಖ್ಯವಾದ ಆರ್ಥಿಕ ಬೆಳೆಯಾದ ಮಾವಿಗೆ ಯಾವ ಆದ್ಯತೆಯನ್ನು ನೀಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಶ್ರೀಗಂಧದ ಕೃಷಿಯ ಬಗ್ಗೆಯೂ ಗಮನ ಹರಿಸಿದ್ದಾರೆ. ಶ್ರೀಗಂಧದ ಬೆಳೆ ಹೆಚ್ಚಿಸಲು ರಾಜ್ಯ ಸರ್ಕಾರಗಳೊಂದಿಗೆ ಕ್ರಮ ವಹಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ. ಈ ವಿಚಾರದಲ್ಲಿ ಸಂಸದ ಡಾ.ಸಿ.ಎನ್.ಮಂಜುನಾಥ್ ಅವರು ಕಾಫಿ ಮತ್ತು ಸ್ಪೈಸಸ್ ಬೋರ್ಡ್ ಮಾದರಿಯಲ್ಲೇ ಶ್ರೀಗಂಧದ ಬೋರ್ಡ್ ಸ್ಥಾಪನೆಯಾಗಬೇಕು ಎಂದು ಆಗ್ರಹಿಸಿದ್ದರು ಎಂಬುದು ಇಲ್ಲಿ ಉಲ್ಲೇಖಾರ್ಹ.

### ಮೇಕೆದಾಟು ಯೋಜನೆಗೂ ಇಲ್ಲ ಗಮನ

ಮೇಕೆದಾಟು ಯೋಜನೆ ಬಹುದಿನಗಳ ಬಯಕೆ. ಈ ವಿಚಾರದಲ್ಲಿ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಕಡೆಗೆ ಬೊಟ್ಟು ಮಾಡುತ್ತಿದೆ. ಈ ಬಾರಿಯೂ ಮೇಕೆದಾಟು ಯೋಜನೆ ವಿಚಾರದಲ್ಲಿ ಕೇಂದ್ರ ಸರ್ಕಾರ ಯಾವ ಕ್ರಮವನ್ನುವಹಿಸಿಲ್ಲ ಎಂಬ ಅಸಮಾಧಾನ ವ್ಯಕ್ತವಾಗಿದೆ.

### ಬಜೆಟ್‌ನಿಂದ ರಾಜ್ಯಕ್ಕೇನಿಲ್ಲ ಅನುಕೂಲ

▶▶ **ಡಿ.ಕೆ.ಶಿವಕುಮಾರ್, ಡಿಸಿಎಂ**

ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಕೇಂದ್ರ ಬಜೆಟ್‌ನಿಂದ ನಮ್ಮ ರಾಜ್ಯಕೆ ಏನೂ ಅನುಕೂಲ ಆಗಿಲ್ಲ. ರಾಜ್ಯಕ್ಕೆ ಯಾವ ದೊಡ್ಡ ಪಾಲನ್ನು ನೀಡಿಲ್ಲ. ಕೃಷಿಯ ಎಲ್ಲ ಬೆಳೆಗಳನ್ನು ಎಂ.ಎಸ್.ಪಿ ಅಡಿಗೆ ತಂದಿಲ್ಲ. ರೈತರಿಗೆ ಏನೂ ಸಹಾಯವಾಗಿಲ್ಲ. ಮಹಾತ್ಮ ಗಾಂಧಿ ನರೇಗಾ ಯೋಜನೆಯ ಹೆಸರು ಮುಂದುವರೆಯಬೇಕು. ಹಳೆಯ ಯೋಜನೆಯನ್ನೇ ಮುಂದುವರೆಸಬೇಕು ಎಂದು ಆಗ್ರಹಿಸಿದ್ದೇವೆ. ಆದರೆ ಈ ಬಗ್ಗೆ ಯಾವ ಕ್ರಮವೂ ಆಗಿಲ್ಲ. ರಾಜ್ಯದ 5 ಜಿಲ್ಲೆಗಳಲ್ಲಿ ಕಬ್ಬು ಬೆಳೆಯಲಾಗುತ್ತಿದೆ. ಕೇಂದ್ರ ಮೊಲಸಸ್ ಬೆಲೆ ಏರಿಸಿಲ್ಲ. ಸಕ್ಕರೆ ಬೆಲೆ ಹಲವಾರು ವರ್ಷಗಳಿಂದ ಒಂದೇ ರೀತಿ ಇದೆ. ರೈತರಿಗೆ ನಷ್ಟವಾಗುತ್ತಿದೆ. ಇದು ಸಹಕಾರಿ ಬ್ಯಾಂಕುಗಳಿಗೂ ಸಮಸ್ಯೆ ಆಗಲಿದೆ. ಹೈಸ್ಪೀಡ್ ರೈಲು ಬರೋಲ್ಲ. ಕೇಂದ್ರ ಸರ್ಕಾರ ಕೇಳಿದಂತೆ ಶೇ 50-50 ಅನುಪಾತ ಕೊಡಲು ರಾಜ್ಯಗಳು ಸಿದ್ಧವಿಲ್ಲ. ಶೇ 90-10 ಅನುಪಾತವಾದರೆ ನಮ್ಮ ರಾಜ್ಯವೂ ಸಹಕಾರ ನೀಡುತ್ತೆ. ಗ್ಲೋಬಲ್ ಸಿಟಿಗೆ ಪ್ರೋತ್ಸಾಹ ಅಂತಾರೆ ಬೆಂಗಳೂರಿಗೆ ಏನು ಒತ್ತು ಕೊಟ್ಟಿದ್ದಾರೆ?

### ಕನಕಪುರ ರೈಲು ಮಾರ್ಗಕ್ಕೆ ಸಿಗಲಿಲ್ಲ ಹಸಿರು ನಿಶಾನೆ

ಬೆಂಗಳೂರಿನಿಂದ ಕನಕಪುರದ ಮೂಲಕ ಚಾಮರಾಜನಗರಕ್ಕೆ ರೈಲು ಮಾರ್ಗ ಸೃಜಿಸಲು ಹಲವಾರು ವರ್ಷಗಳಿಂದ ಆಗ್ರಹಿಸಲಾಗುತ್ತಿದೆ. ಆದರೆ ಈ ಬಾರಿಯೂ ಈ ವಿಚಾರದಲ್ಲಿ ಕೇಂದ್ರ ಸರ್ಕಾರ ಗಮನ ಹರಿಸಿಲ್ಲ ಎಂದು ಕನಕಪುರದ ನಿವಾಸಿಗಳು ಬೇಸರ ವ್ಯಕ್ತಪಡಿಸಿದ್ದಾರೆ.

ಮೊದಲ ಪುಟದಿಂದ

## ಆರ್ಥಿಕ ಸಮತೋಲನಕ್ಕೆ 'ಸರ್ಕಸ್'

ಸ್ಥಿರತೆಯಿಂದ ಗುರುತಿಸಲ್ಪಟ್ಟಿದೆ. ನಮ್ಮ ಸರ್ಕಾರವೂ ವಾಕ್ಚಾತುರ್ಯಕ್ಕಿಂತ ಸುಧಾರಣೆಗೆ ಆದ್ಯತೆ ನೀಡಿದೆ. 2026ರ ಬಜೆಟ್ ಅನ್ನು ಯುವಶಕ್ತಿ ಮುನ್ನಡೆಸಲಿದೆ ಎಂದು ನಿರ್ಮಲಾ ತಿಳಿಸಿದ್ದಾರೆ.

ಮಹಿಳೆಯರ ಅಭಿವೃದ್ಧಿಗೆ ಹಲವು ಯೋಜನೆ ಘೋಷಿಸಿದೆ. ಲಕ್‌ಪತಿ ದೀದಿ ಯೋಜನೆಯಡಿ ಸ್ವ-ಸಹಾಯ ಗುಂಪುಗಳಲ್ಲಿ ತೊಡಗಿರುವ ಮಹಿಳೆಯರು ಆರ್ಥಿಕವಾಗಿ ಸ್ವತಂತ್ರರಾಗಲು ಸಬಲೀಕರಣಗೊಳಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯಡಿಯಲ್ಲಿ, ಸ್ವಸಹಾಯ ಗುಂಪುಗಳೊಂದಿಗೆ ಸಂಬಂಧ ಹೊಂದಿರುವ ಮಹಿಳೆಯರಿಗೆ 5 ಲಕ್ಷ ರೂ.ಗಳವರೆಗೆ ಬಡ್ಡಿರಹಿತ ಸಾಲವನ್ನು ನೀಡಲಾಗುತ್ತಿದೆ. ಈ ಯೋಜನೆಯಡಿಯಲ್ಲಿ ಪಡೆದ ಸಾಲಗಳಿಗೆ ಸರ್ಕಾರವು ಬಡ್ಡಿ ಸಬ್ಸಿಡಿಯನ್ನು ನೀಡುತ್ತದೆ.

## ಆದಾಯ ತೆರಿಗೆ ಕಾಯ್ದೆ ಜಾರಿ

ಚೌಕಟ್ಟಿಗೆ ತರುತ್ತದೆ. ತೆರಿಗೆದಾರರು ಯಾವುದೇ ದಂಡ ಶುಲ್ಕಗಳಿಲ್ಲದೆ, ಗಡುವಿನ ನಂತರ ಐಟಿಆರ್ ಸಲ್ಲಿಸಿದಾಗಲೂ ಟಿಡಿಎಸ್ ಮರುಪಾವತಿ ಪಡೆಯಲು ಇದು ಅನುವು ಮಾಡಿಕೊಡುತ್ತದೆ ಎಂದು ಹೇಳಿದರು.

## ರಾಜ್ಯದ ಪಾಲು ಸಿಕ್ಕಿಲ್ಲ: ಡಿಕೆಶಿ

ಮೋದಿಯವರೇ ಗ್ಲೋಬಲ್ ಸಿಟಿ ಅಂತ ಹೇಳಿದರು. ಆ ಗ್ಲೋಬಲ್ ಸಿಟಿಗೆ ಏನು ಒತ್ತು ಕೊಟ್ಟಿದ್ದಾರೆ ಎಂದು ಪ್ರಶ್ನಿಸಿದರು. ಯಾವುದೋ ಯೋಜನೆಗೆ ಮಹಾತ್ಮ ಗಾಂಧಿ ಹೆಸರಿಟ್ಟಿದ್ದಾರೆ. ಬದಲಿಗೆ ಮನರೇಗಾ ಬದಲಾವಣೆ ವಾಪಸ್ ತೆಗೆದುಕೊಳ್ಳಲಿ. ಹಿಂದೆ ಯಾವ ಸ್ಕೀಂ ಇತ್ತು ಅದೇ ಸ್ಕೀಂ ಮುಂದುವರೆಯಲಿ ಎಂದರು.

## ಕುರುಡು ಬಜೆಟ್: ರಾಗಾ

ಎದುರಾಗುತ್ತಿವೆ. ಆದರೆ ಈ ಬಜೆಟ್‌ನಲ್ಲಿಇದಾವುದನ್ನೂ ಗಮನಿಸಿದೇ ಎಲ್ಲ ಕ್ಷೇತ್ರಗಳನ್ನು ನಿರ್ಲಕ್ಷಿಸಲಾಗಿದೆ. ದೇಶದ ನಿಜವಾದ ಬಿಕ್ಕಟ್ಟುಗಳನ್ನು ಗಮನಿಸದೆ, ಸರಿಯಾದ ಮಾರ್ಗವನ್ನು ಅನುಸರಿಸದೆ ವ್ಯರ್ಥ ಬಜೆಟ್ ಅನ್ನು ಮಂಡಿಸಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

## ಮೈಸೂರಿಗೆ ನಿರಾಸೆ

ಆದರೆ, ಮೈಸೂರಿಗೂ ಯಾವುದೇ ಯೋಜನೆ ಘೋಷಣೆ ಮಾಡದಿರುವುದು ಸ್ಥಳೀಯರ ಅಸಮಾಧಾನಕ್ಕೆ ಕಾರಣವಾಗಿದೆ

### ವಿಫಲ ಬಜೆಟ್

ಕೇಂದ್ರ ಬಜೆಟ್ 2025-26 ಭಾರತದ ಜನರ ಮಾಡಿದ ಕ್ರೂರ ದ್ರೋಹವಾಗಿದೆ.ಈ ಬಜೆಟ್‌ನಲ್ಲಿ ಜನರ ಕೊಂಡುಕೊಳ್ಳುವ ಶಕ್ತಿಯನ್ನು ಹೆಚ್ಚಿಸುವ ಬಗ್ಗೆ ಆ ಮೂಲಕ ಆರ್ಥಿಕತೆಯನ್ನು ಉತ್ತೇಜಿಸುವಲ್ಲಿ ಬಜೆಟ್ ವಿಫಲವಾಗಿದೆ. ಮೋದಿ ಸರ್ಕಾರವು ಬಜೆಟ್ ಮೂಲಕ ಹೆಚ್ಚಿನ ಆದಾಯ ಹೊಂದಿರುವ ಸಣ್ಣ ಅಲ್ಪಸಂಖ್ಯಾತರಿಗೆ ತೆರಿಗೆ ಕಡಿತವನ್ನು ನೀಡುವ ಮೂಲಕ ಆರ್ಥಿಕತೆಯನ್ನು ಉತ್ತೇಜಿಸಲು ಪ್ರಯತ್ನಿಸುತ್ತಿದೆ. ಖಾಸಗಿ ಹೂಡಿಕೆಯನ್ನು ಉತ್ತೇಜಿಸುವ ಮೂಲಕ ಶ್ರೀಮಂತರಿಗೆ ಹೆಚ್ಚಿನ ಸಂಪತ್ತು ಸಂಗ್ರಹವನ್ನು ಉತ್ತೇಜಿಸಲು ಪ್ರಯತ್ನಿಸುತ್ತದೆ.ಇದು ಶ್ರೀಮಂತರಿಗಾಗಿ ಶ್ರೀಮಂತರ ಬಜೆಟ್ ಆಗಿದೆ.

▶▶ – **ಜಗದೀಶ್ ಸೂರ್ಯ** ಭಾರತ ಕಮ್ಯೂನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಮೈಸೂರು ಜಿಲ್ಲಾ ಕಾರ್ಯದರ್ಶಿ.

### ಪೂರಕ ಯೋಜನೆಗಳಿಲ್ಲ

ಕೇಂದ್ರ ಸರ್ಕಾರದ ಬಜೆಟ್ ಕೃಷಿ ಕ್ಷೇತ್ರಕ್ಕೆ ಯಾವುದೇ ಪರಿಣಾಮ ಕಾರಿ ಯೋಜನೆ ಗಳಿಲ್ಲ. ಕೃಷಿ ಕ್ಷೇತ್ರದ ಅಭಿವೃದ್ಧಿಗೆ ಯಾವುದೇ ಪೂರಕ ಯೋಜನೆ ಗಳಿಲ್ಲ. ರೈತರ ಪಾಲಿಗೆ ನಿರಾಶ ದಾಯಕ ಬಜೆಟ್. ಗ್ರಾಮೀಣ ಭಾಗದಲ್ಲಿ ಹೈನುಗಾರಿಕೆ ಸಬ್ಸಿಡಿ ಮೂಲಕ ಒತ್ತು ನೀಡಿರುವುದು ಉತ್ತಮ ಸ್ವಲ್ಪ ಮಟ್ಟಿಗೆ ಸಹಕಾರಿ.

▶▶ – **ಕುರುಬೂರು ಶಾಂತಕುಮಾರ್**, ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ

### ಭರವಸೆ ಹುಟ್ಟು ಹಾಕದ ಬಜೆಟ್

9ನೇ ಬಾರಿಗೆ ದೇಶದ ಬಜೆಟ್ ಅನ್ನು ಮಂಡಿಸಿರುವ ನಿರ್ಮಲಾ ಸೀತಾರಾಮನ್ ಮತ್ತೊಂದು ಠುಸ್ ಪಟಾಕಿ ಹಾರಿಸಿದ್ದಾರೆ. 2026-27 ಸಾಲಿನ ಬಜೆಟ್ ದೇಶದ ಅಭಿವೃದ್ಧಿಗೆ ಪೂರಕವಾಗಿಲ್ಲ. ಈ ಸಾಲಿನ ಬಜೆಟ್ ನಲ್ಲೂ ಕೃಷಿಯನ್ನು ಸಂಪೂರ್ಣವಾಗಿ ನಿರ್ಲಕ್ಷ ಮಾಡಲಾಗಿದೆ ಕಳೆದ ಸಾಲಿನ ಬಜೆಟ್ ನಲ್ಲಿ ಕೃಷಿಗೆ 1.70 ಲಕ್ಷ ಕೋಟಿ ರೂ. ನೀಡಲಾಗಿತ್ತು ಆದರೆ ಈ ಸಾಲಿನಲ್ಲಿ ಕೇವಲ 1.62 ಲಕ್ಷಕ್ಕೆ ಇಳಿಸಿ ಕೃಷಿ ಕ್ಷೇತ್ರಕ್ಕೆ ಅನ್ಯಾಯ ಮಾಡಲಾಗಿದೆ.

▶▶ – **ಬಡಗಲಪುರ ನಾಗೇಂದ್ರ** ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ

ಯಾವುದೇ ಪರಿಣಾಮಕಾರಿ ಯೋಜನೆಗಳಿಲ್ಲದೇ ಕೇವಲ ಒಣ ಘೋಷಣೆಗಳಿಂದ ಕೂಡಿರುವ ಈ ಬಾರಿಯ ಕೇಂದ್ರ ಬಜೆಟ್ ನಿಸ್ಸತ್ವವಾಗಿ ಜನವಿರೋಧಿಯಾಗಿದೆ. ಅಲ್ಲದೇ ಈ ಬಾರಿಯ ಬಜೆಟ್ ಪ್ರಸ್ತಾವನೆಯು ಯಾವುದೇ ಲಕ್ಷ್ಯವಿಲ್ಲದೇ ರಾಜ್ಯಗಳ ತೆರಿಗೆ ಪಾಲಿನ ಆದಾಯವನ್ನು ಕಬಳಿಸುವ ಒಳ ಯೋಜನೆಯನ್ನೂ ಹೊಂದಿದೆ. ಜೊತೆಗೆ ಸಾಮಾನ್ಯ ಜನರ ರಕ್ತ ಹೀರುತ್ತಿರುವ ತೆರಿಗೆ ಭಯೋತ್ಪಾದನೆಗೆ ಕಡಿವಾಣ ಹಾಕಲು ಸಹ ಕೇಂದ್ರ ಸರ್ಕಾರ ಮುಂದಾಗಿಲ್ಲ ಎನ್ನುವುದು ಈ ಬಜೆಟ್‌ನಲ್ಲಿ ಸ್ಪಷ್ಟವಾಗುತ್ತಿದೆ. ಈಗಾಗಲೇ ಬಿಡುಗಡೆಯಾಗಿರುವ ಆರ್ಥಿಕ ಸಮೀಕ್ಷೆಯಲ್ಲಿ ಎನ್‌ಡಿಎ ಸರ್ಕಾರ ಎಲ್ಲಾ ರಂಗಗಳಲ್ಲಿಯೂ ವಿಫಲವಾಗಿರುವುದು ಖಚಿತವಾಗಿತ್ತು. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಬಹಳ ನಿಸ್ಸಹಾಯಕವಾಗಿದೆ.ಹೀಗಾಗಿ ಇದೊಂದು ಕಡು ಜನವಿರೋಧಿ ಬಜೆಟ್ ಎನ್ನುವುದರಲ್ಲಿ ಯಾವ ಅನುಮಾನವೂ ಇಲ್ಲ.

▶▶ – **ಎಚ್.ಎ. ವೆಂಕಟೇಶ್** ವಕ್ತಾರ, ಕೆಪಿಸಿಸಿ

### ವಿಕಸಿತ ಭಾರತದ ದೂರದೃಷ್ಟಿಯ ಬಜೆಟ್

ವಿಕಸಿತ ಭಾರತದ ಕನಸನ್ನೂ ನನಸು ಮಾಡುವ ದೂರ ದೃಷ್ಟಿಯ ಬಜೆಟ್ ಆಗಿದೆ. ಮುಂದಿನ ವರ್ಷಕ್ಕೆ ಸರ್ಕಾರದ ಆದಾಯ-ಖರ್ಚು ಯೋಜನೆ, ಆರ್ಥಿಕ ಬೆಳವಣಿಗೆ ಮತ್ತು ಉದ್ಯೋಗ ಮೇಲ್ವಿಚಾರಣೆ, ಸರ್ಕಾರದ ಉದ್ಯೋಗ ಸೃಷ್ಟಿ ಮತ್ತು ಆರ್ಥಿಕ ಸ್ಥಿತಿಯನ್ನು ಬಲಪಡಿಸುವುದಾಗಿದೆ. ಕೈಗಾರಿಕೆ ಉತ್ಪಾದನೆಯ ಮತ್ತು ಮೂಲಭೂತ ಅಧಾರಿತ ಕ್ಷೇತ್ರಗಳಲ್ಲಿ ಹೆಚ್ಚಿನ ಪ್ರೋತ್ಸಾಹ ನೀಡಲಾಗಿದೆ. ದೇಶದ ಜಿಡಿಪಿ ಬೆಳವಣಿಗೆ ಸ್ಥಿರವಾಗಿರುವಂತೆ ಮುಂದುವರಿಸಲು ಯೋಜನೆ ಮಾಡಲಾಗಿದೆ ಹಾಗೂ ಮೂಲ ಭೂತ ಖರ್ಚು ಹೆಚ್ಚಸಲಾಗಿದೆ. 7 ಹೊಸ ವೇಗದ ರೈಲು ಮಾರ್ಗಗಳನ್ನು ಘೋಷಣೆ ಮಾಡಲಾಗಿದೆ. (ಮೈಸೂರು-ಬೆಂಗಳೂರು, ಹೈದರಾಬಾದ್-ಚೆನ್ನೈ ಸೇರಿದಂತೆ). ಲಾಜಿಸ್ಟಿಕ್ಸ್ ಮತ್ತು ನೀರಿನ ಮಾರ್ಗಗಳನ್ನು ವಿಸ್ತರಿಸುವ ಯೋಜನೆಗಳನ್ನೂ ರೂಪಿಸಲಾಗಿದೆ.

▶▶ **ಡಾ.ಈ.ಸಿ.ನಿಂಗರಾಜ್ ಗೌಡ**
ಮೈಸೂರು ವಿವಿ ಮಾಜಿ ಸಿಂಡಿಕೇಟ್ ಸದಸ್ಯ

ದೇಶದ ಯುವಜನರು ಮತ್ತು ಮಹಿಳೆಯರ ಕೇಂದ್ರ ಕೃತವಾದ 2026-27ನೇ ಸಾಲಿನ ಬಜೆಟ್ ಮಂಡಿಸಿದ್ದಾರೆ. ಜನರಿಗಾಗಿ ಮಂಡಿಸಿರುವ ಈ ಬಜೆಟ್‌ನ್ನು ಸ್ವಾಗ ತಿಸುತ್ತೇನೆ. ರೈತರಿಗಾಗಿ ವಿಶೇಷವಾಗಿ ತೆಂಗಿನ ಕಾಯಿ ಮತ್ತು ಶ್ರೀಗಂಧ ಬೆಳವಣಿಗೆ ಮತ್ತು ಮಾರಾಟ, ಕೃಷಿ ಉತ್ಪಾದನೆಗೆ ಭಾರತ್ ವಿಸ್ತಾರ್ ಯೋಜನೆ, ಮಹಿಳೆಯರಿಗಾಗಿ ಲಕ್‌ಪತಿ ದೀದಿ ಮತ್ತು ಮಹಿಳೆಯರು ದಿನಸಿ ಅಂಗಡಿಗಳನ್ನು ತೆರೆಯಲು ಉದ್ದೇಶಿಸಿರುವ ಶೀ ಮಾರ್ಟ್ ಯೋಜನೆಗಳು ಸ್ವಾಗತಾರ್ಹ. ಕಳೆದ ಬಜೆಟ್‌ಗಳಲ್ಲಿ ಎಂಎಸ್‌ಎಂಇ ಗಳಿಗೆ ಉತ್ತೇಜನ ನೀಡಿದ್ದು, ಅದನ್ನು ಬಲಿಷ್ಠಗೊಳಿಸಲು ಕಾರ್ಪೋರೇಟ್ ಮಿತ್ರ ಯೋಜನೆ ಸ್ವಾಗತಾರ್ಹ. ಒಟ್ಟಾರೆ ಈ ಬಜೆಟ್ ಭಾರತವನ್ನು ಮತ್ತು ಭಾರತದ ಆರ್ಥಿಕತೆಯನ್ನು ಮುಂದಿನ ಮಟ್ಟಕ್ಕೆ ಕರೆದೊಯ್ಯಲು ಸಹಕಾರಿಯಾಗಿದೆ.

▶▶ – **ಎಂ.ಎ. ಮೋಹನ್** ಬಿಜೆಪಿ ವಕ್ತಾರ

### ಕೇಂದ್ರ ಬಜೆಟ್ ಬಂಪರ್ ಕೊಡುಗೆ

ಅಭಿವೃದ್ಧಿ ಪೂರಕ ಬಜೆಟ್ ನಲ್ಲಿ ಎಂ ಎಸ್ ಎಂ ಇ ಗಳಿಗೆ ವಿಶೇಷ ಒತ್ತು ನೀಡಲಾಗಿದೆ. ಸೆಮಿ ಕಂಡಕ್ಟರ್ ಕ್ಷೇತ್ರದ ಉತ್ತೇಜನಕ್ಕೆ 40000 ಕೋಟಿ ರೂಪಾಯಿ, ಕಂಟೈನರ್ ತಯಾರಿಕ ನೀತಿ ಜೊತೆಗೆ ಮುಂದಿನ ಐದು ವರ್ಷದಲ್ಲಿ ಬಜೆಟ್ ಅನುದಾನ 10000 ಕೋಟಿ ರೂಪಾಯಿ. ರಾಷ್ಟ್ರೀಯ ಜವಳಿ ನೀತಿ ಮೆಗಾ ಜವಳಿ ಪಾರ್ಕ್ ಅಭಿವೃದ್ಧಿ, ಭಾರೀ ಮೊತ್ತದ ನಿರ್ಮಾಣ ಮತ್ತು ಮೂಲ ಭೂತ ಸೌಕರ್ಯ ಅಭಿವೃದ್ಧಿ ಉಪಕರಣಗಳ ತಯಾರಿಕಾ ವಲಯ ಉನ್ನತೀಕರಣ ನೀತಿ, 200 ಕೈಗಾರಿಕಾ ಹಬ್ ಗಳ ಮೂಲಭೂತ ಸೌಕರ್ಯ ಮತ್ತು ತಂತ್ರಜ್ಞಾನ ಉನ್ನತೀಕರಣ ದ ಮೂಲಕ ಎಸ್ ಎಂ ಇ ಚಾಂಪಿಯನ್ ಘೋಷಣೆ. 6500 ಎಕರೆ ಪ್ರದೇಶದ ಮೈಸೂರು ಹೆಬ್ಬಾಳು ವಿಶೇಷ ಹೂಡಿಕೆ ವಲಯ ಈ ಯೋಜನೆ ಯಲ್ಲಿ ಸೇರಬಹುದಾಗಿದೆ. ಬೆಂಗಳೂರು - ಹೈದರಾಬಾದ್, ಬೆಂಗಳೂರು ಚೆನ್ನೈ ಹೈಸ್ಪೀಡ್ ರೈಲು ಸೇವೆ ಅಭಿವೃದ್ಧಿ ಗೆ ಪೂರಕವಾಗಿವೆ.

▶▶ – **ಸುರೇಶ್ ಕುಮಾರ್ ಜೈನ್ ಪ್ರದಾನ ಕಾರ್ಯದರ್ಶಿ**
ಮೈಸೂರು ಕೈಗಾರಿಕೆಗಳ ಸಂಘ

ಕೃಷಿಯಲಿ ಹೆಚ್ಚು ಇಳುವರಿ ಮತ್ತು ರೋಗ ನಿರೋಧಕ ಶಕ್ತಿ ಉಳ್ಳ ಬಿತ್ತನೆ ಬೀಜಗಳನ್ನು ಕೊಡುತ್ತೇವೆ ಎಂಬ ಹೆಸರಿನಲ್ಲಿ ಪಶ್ಚಿಮಾತ್ಯ ದೇಶಗಳ ಜೊತೆಗೆ ಕೈ ಜೋಡಿಸಿ ಮತ್ತು ದೇಶದ ಮೊಟ್ಟ ಮೊದಲ ಸಾವಯುವ ರಾಜ್ಯವಾದ ಸಿಕ್ಕಿಂ ಭಾಗದಲ್ಲಿ 7 ಲಕ್ಷ ಮೆಟ್ರಿಕ್ ಟನ್ ಸಾಮರ್ಥ್ಯದ ಮಲ್ಟಿ ನ್ಯಾಷನಲ್ ಯೂರಿಯಾ ಫ್ಯಾಕ್ಟರಿ ಸ್ಥಾಪನೆ ಮಾಡುವುದರ ಮೂಲಕ ರಾಷ್ಟ್ರ ವಾದಕ್ಕೆ ತಿಲಾಂಜಲಿ ಇಟ್ಟ ಕೇಂದ್ರ ಸರಕಾರ. ಮಾರುಕಟ್ಟೆಯಲ್ಲಿ ಬೆಳೆಗಳ ಬೆಲೆ ಕುಸಿತದ ಪರಿಸ್ಥಿತಿಯಲ್ಲಿ, ರೈತರ ಹಿತಾಶಕ್ತಿ ಕಾಪಾಡಲು ಆರ್ಥಿಕ ಸಿದ್ಧತೆ ಬಗ್ಗೆ ನಿಶಬ್ದ.ರಾಜ್ಯ ಸರ್ಕಾರಗಳಿಗೆ ಕೊಡಬೇಕಾದ ಜಿ.ಎಸ್.ಟಿ ಭಾಗದ ವಿಚಾರದಲ್ಲಿ ಮೌನ. ಒಟ್ಟಾರೆಯಾಗಿ ನೀರಸ ಕೃಷಿ ಬಜೆಟ್ ಆಗಿದೆ.

▶▶ –**ಮಂಜು ಕಿರಣ್, ರಾಜ್ಯ ಕಾರ್ಯದರ್ಶಿ** ಸಾಮೂಹಿಕ ನಾಯಕತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ

## ಭವಿಷ್ಯಮುಖಿ ಬಜೆಟ್



ರಾಮನಗರ: ಭಾನುವಾರ ಕೇಂದ್ರದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ 2026-27ನೇ ಸಾಲಿ ಬಜೆಟ್‌ಗೆ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನ ಕಾರ್ಯದರ್ಶಿ ಕೆ.ಎಸ್.ಪ್ರಶಾಂತ್, ಅಭಿವೃದ್ಧಿ ಕೇಂದ್ರೀಕೃತ ಮತ್ತು ಭವಿಷ್ಯಮುಖಿ ಬಜೆಟ್ ಎಂದು ಪ್ರತಿಕ್ರಿಯಿಸಿದ್ದಾರೆ.

ಕೇಂದ್ರ ಬಜೆಟ್ ತಂತ್ರಜ್ಞಾನ ಮತ್ತು ಉತ್ಪಾದನಾ ವಲಯಕ್ಕೆ ಹೆಚ್ಚಿನ ಒತ್ತು ನೀಡಿರುವುದು ಸ್ವಾಗತಾರ್ಹ. ಇಂಡಿಯಾ ಸೆಮಿಕಂಡಕ್ಟರ್ ಮಿಷನ್ 2.0, ಎಲೆಕ್ಟ್ರಾನಿಕ್ಸ್ ಉತ್ಪಾದನೆಗೆ ಹೆಚ್ಚುವರಿ ಹೂಡಿಕೆ, ಜವಳಿ ಕ್ಷೇತ್ರಕ್ಕೆ ಸಮಗ್ರ ಕಾರ್ಯಕ್ರಮ, ಕೈಗಾರಿಕಾ ಕ್ಲಸ್ಟರ್‌ಗಳ ಅಭಿವೃದ್ಧಿ ಹಾಗೂ ಹೈ-ಸ್ಪೀಡ್ ರೈಲು ಕಾರಿಡಾರ್‌ಗಳಂತಹ ಮೂಲಸೌಕರ್ಯ ಯೋಜನೆಗಳು ಹೂಡಿಕೆ ಮತ್ತು ಉದ್ಯೋಗ ಸೃಷ್ಟಿಗೆ ನೆರವಾಗಲಿವೆ ಎಂದು ಅಭಿಪ್ರಾಯ ಪಟ್ಟಿದ್ದಾರೆ. ಆದರೆ, ಎಂ.ಎಸ್.ಎಂ.ಇ ಹಾಗೂ ಸಣ್ಣ ವ್ಯಾಪಾರಿಗಳಿಗೆ ನೇರ ತೆರಿಗೆ ರಿಯಾಯಿತಿ, ಸುಲಭ ಸಾಲ ಸೌಲಭ್ಯ ಮತ್ತು ತ್ವರಿತ ಹಣಕಾಸು ಬೆಂಬಲ ಇನ್ನಷ್ಟು ನೀಡಿದ್ದರೆ ನೆಲಮಟ್ಟದ ಉದ್ಯಮಿಗಳಿಗೆ ಹೆಚ್ಚು ಪ್ರಯೋಜನವಾಗುತ್ತಿತ್ತು ಎಂದಿರುವ ಅವರು, ಸಣ್ಣ ಉದ್ಯಮಗಳಿಗೆ ಹೆಚ್ಚುವರಿ ಸಹಾಯ ಅಗತ್ಯವಿದೆ ಎಂದು ತಿಳಿಸಿದ್ದಾರೆ.

## ನಿರಾಸೆಯ ಬಜೆಟ್ – ಕುಮಾರಸ್ವಾಮಿ, ಜಯಕರ್ನಾಟಕ



ಜಯಕರ್ನಾಟಕ ಜನಪರ ವೇದಿಕೆಯ ರಾಜ್ಯ ಸಲಹೆಗಾರ ಕುಮಾರಸ್ವಾಮಿ ಪ್ರತಿಕ್ರಿಯೆ ನೀಡಿ, ಈ ಬಾರಿಯ ಕೇಂದ್ರ ಸರ್ಕಾರ ಬಜೆಟ್ ದೇಶದ ಈಶಾನ್ಯ ರಾಜ್ಯಗಳು, ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ ರಾಜ್ಯಗಳಿಗೆ ಒತ್ತುಕೊಟ್ಟಿದ್ದಾರೆ. ಆದರೆ ಕರ್ನಾಟಕಕ್ಕೆ ಮತ್ತೆ ನಿರಾಸೆ ಮೂಡಿಸಿದ್ದಾರೆ. ರೈತ ಸಮುದಾಯಕ್ಕೆ ಕೇವಲ 1.62 ಲಕ್ಷ ಕೋಟಿ ಅನುದಾನ ಮೀಸಲಿಟ್ಟಿರುವುದು ಸರಿಯಲ್ಲ ಎಂದಿದ್ದಾರೆ. ಮೇಕೆದಾಟು ಅಣೆಕಟ್ಟು ಬಗ್ಗೆ ನಿರ್ಲಕ್ಷ ತೋರಿದ್ದಾರೆ. ನೀರಾವರಿ ಯೋಜನೆಗಳಿಗೆ ಅನುದಾನದ ಬಗ್ಗೆಯೂ ಬಜೆಟ್‌ನಲ್ಲಿ ಪ್ರಸ್ತಾಪವಾಗಿಲ್ಲ ಎಂದು 5 ಸಾವಿರದ 300 ಕೋಟಿ ಅನುದಾನದ ಬಗ್ಗೆಯೂ ಪ್ರಸ್ತಾಪವಾಗಿಲ್ಲ ಎಂದು ತಿಳಿಸಿದ್ದಾರೆ.

### ಕೇಂದ್ರ ಬಜೆಟ್ ಉಳ್ಳವರ ಪರವಾಗಿದೆ

ಕೇಂದ್ರ ಸರ್ಕಾರದ ವಿತ್ತ ಸಚಿವೆ ನಿರ್ಮಲ ಸೀತಾರಾಮನ್ ಮಂಡಿಸಿದ 26 -27 ನೇ ಸಾಲಿನ ಬಜೆಟ್ ಉಳ್ಳವರು, ಶ್ರೀಮಂತ ಉದ್ಯಮಿಗಳ ಪರವಾಗಿದೆಯೇ ವಿನಃ ಬಡತನ ಮತ್ತು ನಿರುದ್ಯೋಗ ಸಮಸ್ಯೆ ತೊಡೆದು ಹಾಕುವ ಬಜೆಟ್ ಆಗಿಲ್ಲದಿರುವುದು ವಿಷಾದನೀಯ. ವಿದೇಶಿ ಬಂಡವಾಳ ಹೂಡಿಕೆಗೆ ಸಂಪೂರ್ಣ ತೆರಿಗೆ ವಿನಾಯಿತಿ ನೀಡುವ ಮೂಲಕ ದೇಶೀಯ ಬಂಡವಾಳವು ವಿದೇಶಿ ಕಂಪನಿಗಳ ಮೂಲಕ ಹರಿದುಬರುವ ವಾಮಾಮಾರ್ಗಕ್ಕೆ ಪರವಾನಿಗೆ ನೀಡುತ್ತಾ, ಉಳ್ಳವರು ಮತ್ತು ಶ್ರೀಮಂತ ಬಂಡವಾಳಶಾಹಿಗೆ ಮನ್ನಣೆ ನೀಡಲಾಗಿದೆ. ತಮಿಳುನಾಡು, ಪಶ್ಚಿಮಬಂಗಾಳ ಮುಂತಾದ ರಾಜ್ಯಗಳ ಬಗ್ಗೆ ಕಾಳಜಿ ವಹಿಸಿ ಚುನಾವಣಾ ಗಿಮಿಕ್ ಮುಂದುವರೆಸಿದೆ. ಕರ್ನಾಟಕ ರಾಜ್ಯದ ಅಭಿವೃದ್ಧಿಗೆ ಯಾವುದೇ ಹಣಕಾಸು ನೆರವು ಹಾಗೂ ಯೋಜನೆ ನೀಡಿಲ್ಲ. ಬಹಳ ಮುಖ್ಯವಾಗಿ ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಯಾವುದೇ ಯೋಜನೆ ರೂಪಿಸದೇ ಕೇವಲ ಉತ್ತರ ಭಾರತದ ರಾಜ್ಯಗಳ ಪರವಾದ ಬಜೆಟ್ ಮಂಡಿಸಿರುವ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಕನ್ನಡಿಗರಿಗೆ ದ್ರೋಹ ಬಗೆದಿದ್ದಾರೆ. ಗ್ರಾಮೀಣ ಭಾಗದ ಜನರು, ರೈತರು, ಕೃಷಿ ಕಾರ್ಮಿಕರ ಆರ್ಥಿಕ ಅಭಿವೃದ್ಧಿ ಆಗದೆ ದೇಶದ ಅಭಿವೃದ್ಧಿ ಸಾಧ್ಯವಿಲ್ಲ. ಒಟ್ಟಾರೆ ಕೇಂದ್ರ ಬಜೆಟ್ ಜನಸಾಮಾನ್ಯರ ವಿರೋಧಿ ಬಜೆಟ್ ಆಗಿದೆ.

▶▶ **ಎನ್ ನಾಗಯ್ಯ.** ರಾಜ್ಯ ಕಾರ್ಯದರ್ಶಿ.ಬಿ ಎಸ್ ಪಿ.

### ಕೇಂದ್ರ ಸರ್ಕಾರ ರೈತರ ಮೂಗಿಗೆ ತುಪ್ಪ ಸವರುವ ಕೆಲಸ ಮಾಡಿದೆ

ರೈತರ ಅಭಿವೃದ್ಧಿಗೆ ಪೂರಕವಲ್ಲದ ಬಜೆಟ್ ಆಗಿದೆ ರೈತ ಬೆಳೆದ ಬೆಳೆಗಳಿಗೆ ಎಂಎಸ್‌ಪಿ ಖಾತ್ರಿ ಕಾಯ್ದೆಯ ಜಾರಿ ಬಗ್ಗೆ ಕ್ರಮ ಕೈಗೊಂಡಿಲ್ಲ ಎಮ್ ಎಸ್ ಸ್ವಾಮಿನಾತನ್ ವರದಿ ಜಾರಿಯ ಬಗ್ಗೆ ಕ್ರಮ ಕೈಗೊಂಡಿಲ್ಲ ರೈತರ ಸಾಲ ಮನ್ನದ ಪ್ರಸ್ತಾಪವಿಲ್ಲ ಕೃಷಿ ಸಾಲದ ನೀತಿ ರೈತನ ಹೊಲದಲ್ಲಿನ ಕಬ್ಬಿನ ದರದ ಬಗೆ ಪ್ರಸ್ತಾಪವಿಲ್ಲ ರೈತರಬೆಳೆ ವಿಮೆ ನೀತಿಯು ವೈಯಕ್ತಿಕ ವಿಮೆ ರೀತಿ ಜಾರಿಗೆ ತರಬೇಕಾಗಿತ್ತು ರೈತರ ಕೃಷಿ ಉತ್ಪನ್ನಗಳನ್ನು ವರ್ಷಪೂರ್ತಿ ಖರೀದಿ ಕೇಂದ್ರಗಳ ಆರಂಭಕ್ಕೆ ಕ್ರಮ ಕೈಗೊಂಡಿಲ್ಲ ಎಲ್ಲಾ ಕೃಷಿ ಬೆಳೆಗಳಿಗೆ ಬೆಂಬಲ ಬೆಲೆ ನೀಡಿ ಬೆಲೆ ಕುಸಿತವಾದಾಗ ಖರೀದಿ ಮಾಡುವ ಯೋಜನೆಯನ್ನು ಪ್ರಕಟಣೆ ಮಾಡಿಲ್ಲ. ಕೇವಲ ತೆಂಗು ಗೋಡಂಬಿ ಶ್ರೀಗಂಧ ಬೆಳೆಗೆ ಮಾತ್ರ ವಿಶೇಷ ಗಮನಹರಿಸಿ ರೈತರ ಮೂಗಿಗೆ ತುಪ್ಪ ಸವರೋ ಕೆಲಸವನ್ನು ಕೇಂದ್ರ ಸರ್ಕಾರ ಮಾಡಿದೆ.

▶▶ **ಹಳ್ಳಿಕೆರೆಹುಂಡಿ ಭಾಗ್ಯರಾಜ್**
ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ರಾಜ್ಯ ಅಧ್ಯಕ್ಷರು

### ದೇಶ ರಾಜ್ಯ ಜಿಲ್ಲೆಗೆ ಯಾವುದೇ ಅನುಕೂಲ ಇಲ್ಲದ ಒಂದು ನಿರಾಶಾದಾಯಕ ಬಜೆಟ್ ಇದಾಗಿದೆ.

ಜಾಗತಿಕ ಏರಿಳಿತ ಗಳ ನಡುವೆ ದೇಶದ ಆರ್ಥಿಕ ವ್ಯವಸ್ಥೆಯಲ್ಲಿ ಸ್ಥಿರತೆ ಕಾಪಾಡಿಕೊಳ್ಳುವಲ್ಲಿ ಕೇಂದ್ರದ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಮಂಡಿಸಿರುವ ಬಜೆಟ್ ವಿಫಲ ವಾಗಿದೆ. ಜಗತ್ತಿನಲ್ಲಿ ಅಮೆರಿಕದಂಥ ದೊಡ್ಡ ದೇಶಗಳು ಸುಂಕದ ಬರೆಯನ್ನೇ ಭಾರತದಂತಹ ದೇಶಗಳ ಮೇಲೆ ಎಳೆಯುತಿದೆ ಇಂತಹ ಪರಿಸ್ಥಿಯಲ್ಲಿ ಕೇವಲ ವಿಕಸಿತ ಭಾರತ ಕೌಶಲ್ಯಾಭಿವೃದ್ಧಿ ರೈತರ ಆದಾಯ ದ್ವಿಗುಣ ಎಂದು ಮಂತ್ರ ಜಪಿಸುತ್ತಾ ವಾಸ್ತವವಾಗಿ ಈ ಕ್ಷೇತಗಳನ್ನೇ ಈ ಬಜೆಟ್ ನಲ್ಲಿ ಮರೆತಂತಿದೆ ಜನರ ಕೊಳ್ಳುವ ಶಕ್ತಿಗೆ ಬಲ ತುಂಬಿಲ್ಲ ಕೃಷಿಗೆ ಯಾವುದೇ ಹೆಚ್ಚಿನ ಮಹತ್ವ ನೀಡಿಲ್ಲ ಮುಂಬರುವ ರಾಜ್ಯಗಳ ಚುನಾವಣೆ ಗಳ ನ್ನು ಗಮನದ ಲಿಟ್ಟುಕೊಂಡು ಆ ರಾಜ್ಯಗಳಿಗೆ ಹೆಚ್ಚು ಅನುದಾನ ನೀಡಿದ್ದಾರೆ ಮತ್ತೆ ಕರ್ನಾಟಕಕ್ಕೆ ಯಾವುದೇ ಹೊಸ ಯೋಜನೆ ಘೋಷಿಸಿದೆ ಮಲೆತಾಯಿ ಧೋರಣೆ ಅನುಸರಿಸಲಾಗಿದೆ. ಒಂದು ಜಿಲ್ಲೆ ಒಂದು ಉತ್ಪನ್ನ ಎಂದು ಹರಿಷಿಣ ಬೆಲೆಯನ್ನು ಕೇಂದ್ರ ಸರ್ಕಾರ ಘೋಷಿಸಿ ಹಲವು ವರ್ಷಗಳೇ ಕಳೆಯಿತು ಇದಕ್ಕೆ ಪೂರಕವಾದ ಅರಿಶಿಣದಿಂದ ಉಪ ಉತ್ಪನ್ನಗಳನ್ನು ತಯಾರಿಸುವ ಕೈಗಾರಿಕೆ ಗಳಿಗೆ ಅನುದಾನ ನೀಡ ಬಹುದಿತ್ತು ಚಾಮರಾಜನಗರದಿಂದ ಕೊಳ್ಳೇಗಾಲ ಮಳವಳ್ಳಿ ಮೂಲಕ ಹೆಜ್ಜಾಲ ರೈಲು ಯೋಜನೆಗೆ ಹಣ ನೀಡಿ ಜಿಲ್ಲೆಯ ಅಭಿವೃದ್ಧಿಗೆ ಒತ್ತು ನೀಡ ಬಹುದಿತ್ತು.

▶▶ **ಬಿ ಕೆ ರವಿಕುಮಾರ** ಎಪಿಎಂಸಿ ಮಾಜಿ ಅಧ್ಯಕ್ಷ

### ವಿಕಸಿತ ಭಾರತ ಕನಸಿಗೆ ಪೂರಕ ಬಜೆಟ್

ದೇಶದ ಆರ್ಥಿಕ ಪ್ರಗತಿಯ ಜೊತೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸಲು ಸಚಿವರು ಒತ್ತು ನೀಡಿರುವುದು ಮತ್ತು ಏಳು ಅಪರೂಪದ ರೋಗಗಳ ಔಷಧಿಗಳ ದರ ಕಡಿತ ಮಾಡಿರುವುದು ಬಡವರ ಪಾಲಿಗೆ ವರದಾನವಾಗಿದೆ ಕೃಷಿ.ಕೈಗಾರಿಕೆ. ಆರೋಗ್ಯ.ಸಮಾಜ ಕಲ್ಯಾಣ ಇಲಾಖೆಗಳನ್ನು ಗಮನದಲ್ಲಿಟ್ಟುಕೊಂಡು ಉತ್ತಮ ಬಜೆಟ್ ಮಂಡಿಸಿದ್ದಾರೆ ವಿಕಸಿತ ಭಾರತದ ಕನಸು ನಿಜವಾಗಿಸಲು ಪೂರಕವಾದ ಬಜೆಟ್ ಆಗಿದೆ.

▶▶ **ಮೂಡ್ನಾಕೂಡು ಪ್ರಕಾಶ್**
ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ

# ಕ್ಷಣದ ನಿರ್ಲಕ್ಷ್ಯದಿಂದ ಬದುಕು ದುಸ್ತರ: ಜಿಲ್ಲಾಧಿಕಾರಿ

ರಾಮನಗರ: ವಾಹನ ಚಾಲನೆ ಮಾಡುವಾಗ ಮೊಬೈಲ್ ಬಳಸಬಾರದು, ವೇಗದ ಮಿತಿ ಅನುಸರಿಸಬೇಕು, ಕಡ್ಡಾಯವಾಗಿ ರಸ್ತೆ ಸುರಕ್ಷಿತ ನಿಯಮಗಳನ್ನು ಪಾಲಿಸಬೇಕು ಎಂದು ವಾಹನ ಚಾಲಕರಿಗೆ ಸಲಹೆ ನೀಡಿದ ಜಿಲ್ಲಾಧಿಕಾರಿ ಯಶವಂತ್ ವಿ ಗುರುಕರ್, ಒಂದು ಕ್ಷಣದ ನಿರ್ಲಕ್ಷತೆ ಇಡೀ ಬದುಕನ್ನೇ ದುಸ್ತರ ಮಾಡುತ್ತದೆ ಎಂದು ಎಚ್ಚರಿಸಿದ್ದಾರೆ.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪ್ರಾದೇಶಿಕ ಸಾರಿಗೆ ಕಚೇರಿ ವತಿಯಿಂದ 37ನೇ ರಾಷ್ಟ್ರೀಯ ರಸ್ತೆ ಸುರಕ್ಷಿತಾ ಮಾಸಾಚರಣೆ ಕಾರ್ಯಕ್ರಮದ ಅಂಗವಾಗಿ ಇಲ್ಲಿರುವ ಜಿಲ್ಲಾ ಸರ್ಕಾರಿ ಕಚೇರಿಗಳ ಸಂಕಿರ್ಣದ ಆವರಣದಲ್ಲಿ ಆಯೋಜಿಸಲಾಗಿದ್ದ ಜಾಥಾ ಹಾಗೂ ಹೆಲ್ಮೆಟ್ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಶಾಲಾ ಹಾಗೂ ಕಾಲೇಜು ಮಕ್ಕಳಲ್ಲಿಯೂ ರಸ್ತೆ ಸುರಕ್ಷತೆಯ ಬಗ್ಗೆ ಜಾಗೃತಿ ಮೂಡಿಸಬೇಕು, ರಾಷ್ಟ್ರೀಯ ರಸ್ತೆ ಸುರಕ್ಷಿತ ಮಾಸಾಚರಣೆ ಕಾರ್ಯಕ್ರಮಗಳ ಮೂಲಕ ರಸ್ತೆ ಸುರಕ್ಷತೆ ಹಾಗೂ ಚಾಲನಾ ನಿಯಮಗಳ ಮೂಲಕ ವಾಹನಗಳ ಸವಾರರಿಗೆ ಹಾಗೂ ಪಾದಾಚಾರಿಗಳಿಗೆ ಅರಿವು ಮೂಡಿಸುವಂತೆ ತಿಳಿಸಿದರು.

ಅಪರ ಪೊಲೀಸ್ ವರಿಷ್ಠಾಧಿಕಾರಿ ರಾಜೇಂದ್ರ




ಮಾತನಾಡಿ, ಪ್ರಾದೇಶಿಕ ಸಾರಿಗೆ ಅಧಿಕಾರಿ ಸತೀಶ್ ಬಾಬು ಮಾತನಾಡಿದರು. ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ನಿವೃತ್ತ ಸಾರಿಗೆ ಅಧೀಕ್ಷಕ ಎಂಜಿಎಂ ಪ್ರಸಾದ್, ಆರ್‌ಟಿಒ ಇನ್ಸ್‌ಪೆಕ್ಟರ್ ವಿದ್ಯಾ, ಕುಮಾರಸ್ವಾಮಿ, ಬಾಲಾಜಿ ಡ್ರೈವಿಂಗ್ ಸ್ಕೂಲ್‌ನ ಪ್ರಾಂಶುಪಾಲ ವಾಸುದೇವ್, ವಂಡರ್‌ಲಾ ಸಿಬ್ಬಂದಿಗಳು ಸೇರಿದಂತೆ ಪ್ರಾದೇಶಿಕ ಸಾರಿಗೆ ಇಲಾಖೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

### ಜಾಗೃತಿ ಜಾಥಾ. ಹೆಲ್ಮೆಟ್ ವಿತರಣೆ

ಸುರಕ್ಷತೆ ಮತ್ತು ಹೆಲ್ಮೆಟ್ ಕಡ್ಡಾಯ ಕುರಿತು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ "ಡ್ರೈವ್" ಬೈಕ್ ಹಾಗೂ ಕಾರ್ ಜಾಥಾ ನಡೆಯಿತು. ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿದ ಬೈಕ್ ಮತ್ತು ಕಾರ್ ಜಾಥಾ ಸಾರ್ವಜನಿಕರ ಗಮನ ಸೆಳೆಯಿತು. ಇದಕ್ಕೂ ಮುನ್ನ ಬಾಲಾಜಿ ಡ್ರೈವಿಂಗ್ ಸ್ಕೂಲ್‌ನಿಂದ ಉಚಿತ ಟೀಶರ್ಟ್, ಟೋಪಿಗಳನ್ನು ಜತೆಗೆ ವಂಡರ್ ಲಾ ವತಿಯಿಂದ ಉಚಿತ ಹೆಲ್ಮೆಟ್ ಗಳನ್ನು ಜಾಥದಲ್ಲಿ ಪಾಲ್ಗೊಂಡವರಿಗೆ ವಿತರಿಸಿದರು.

# ಕಾಂಗ್ರೆಸ್ ಸರ್ಕಾರದಿಂದ ಮಾತ್ರ ಅಭಿವೃದ್ಧಿ ಸಾಧ್ಯ: ಎಂಎಲ್‌ಸಿ ಕೆ.ಶಿವಕುಮಾರ್

ಬೆಂಗಳೂರು: ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರವು ಇತಿಹಾಸದಲ್ಲಿಯೇ ಮೊದಲ ಬಾರಿಗೆ ಮಲೆ ಮಹದೇಶ್ವರ ಬೆಟ್ಟದಲ್ಲಿ ವಿಶೇಷ ಸಚಿವ ಸಂಪುಟ ಸಭೆ ನಡೆಸಿದ್ದರಿಂದ ಗಡಿಜಿಲ್ಲೆಯ ಸಮಗ್ರ ಅಭಿವೃದ್ಧಿ ಸಾಧ್ಯವಾಗಿದೆ ಎಂದು ವಿಧಾನ ಪರಿಷತ್ ಸದಸ್ಯರಾದ ಕೆ.ಶಿವಕುಮಾರ್ ಅವರು ತಿಳಿಸಿದರು.



ವಿಧಾನ ಪರಿಷತ್ತಿನ ಕಲಾಪದಲ್ಲಿ ರಾಜ್ಯಪಾಲರ ಭಾಷಣ ಕುರಿತ ವಂದನಾ ನಿರ್ಣಯದ ಮೇಲೆ ಶುಕ್ರವಾರ ಸುದೀರ್ಘವಾಗಿ ಮಾತನಾಡಿದ ಅವರು, ಒಟ್ಟು 3,647 ಕೋಟಿ ರೂ.ಗೂ ಹೆಚ್ಚು ಮೊತ್ತದ ವಿವಿಧ ಯೋಜನೆಗಳಿಗೆ ಅನುದಾನ ಘೋಷಿಸಲಾಗಿದೆ. ಇದರಿಂದ ಮೂಲಸೌಕರ್ಯ, ರಸ್ತೆಗಳು, ನೀರಾವರಿ ಮತ್ತು ಪ್ರವಾಸಿ ತಾಣಗಳ ಅಭಿವೃದ್ಧಿಯಾಗಲಿದೆ ಎಂದರು.

ಕಬಿನಿ ಜಲಾಶಯದಿಂದ ನೀರು ಹರಿಸಿ ಹನೂರು ತಾಲ್ಲೂಕಿನ ಎಲ್ಲಾ ಭಾಗದಲ್ಲಿ ವ್ಯವಸಾಯ ಮಾಡಲು ಯೋಜನೆ ರೂಪಿಸಿರುವುದು ಸರ್ಕಾರಕ್ಕಿರುವ ಬದ್ಧತೆಯಾಗಿದೆ. ಮುಂದಿನ ಬಜೆಟ್‌ನಲ್ಲಿಯೂ ನೀರಾವರಿ ಯೋಜನೆಗೆ ಹೆಚ್ಚಿನ ಅನುದಾನ ನೀಡುವುದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿದ್ದಾರೆ ಎಂದು ತಿಳಿಸಿದರು. ಕೋಲಾರ ಭಾಗದ ಭೂಮಿಯಲ್ಲಿ ಹುರುಳಿ ಬೆಳೆಯಲು ಸಾಧ್ಯವಾಗುತ್ತಿರಲಿಲ್ಲ. ಕೆ.ಸಿ. ವ್ಯಾಲಿ ಯೋಜನೆ ತಂದ ಸಿದ್ದರಾಮಯ್ಯ ಅವರು 140 ಕೆರೆಗಳನ್ನು ತುಂಬಿಸಿದರು. ಎರಡನೇ ಹಂತದಲ್ಲಿ 240 ಕೆರೆ ತುಂಬಿಸಲಾಗುತ್ತಿದೆ. 160 ಹೆಕ್ಟೇರ್‌ನಲ್ಲಿ ಬಾಳೆ ಬೆಳೆಯಲಾಗುತ್ತಿದೆ. ಇಂದು ಎಲ್ಲಿ ನೋಡಿದರು ಹಸಿರನ್ನು ಕಾಣಬಹುದು. ಮುಂದಿನ ಬಜೆಟ್‌ನಲ್ಲಿ ಮೂರನೇ ಹಂತದ ಯೋಜನೆ ತರಬೇಕು ಎಂದು ತಿಳಿಸಿದರು.

ಇಡೀ ದೇಶದಲ್ಲಿಯೇ ಸಾಮಾಜಿಕ ನ್ಯಾಯವನ್ನು ಎತ್ತಿಹಿಡಿದು ಉತ್ತಮ ಆಡಳಿತ ನೀಡುತ್ತಿರುವುದು ಕರ್ನಾಟಕ ಸರ್ಕಾರ ಮಾತ್ರ. ಕಂದಾಯ ಇಲಾಖೆ ಸೇರಿದಂತೆ ಎಲ್ಲಾ ಇಲಾಖೆಯಲ್ಲಿ ಪಾರದರ್ಶಕತೆ ತರಲಾಗಿದೆ ಎಂದು ಹೇಳಿದರು. ನಮ್ಮ ಸರ್ಕಾರವು ನೀಡಿದ ಕಾರ್ಯಕ್ರಮಗಳು ರಾಜ್ಯದ ಜನತೆಯ ಮೇಲೆ ಸಕಾರಾತ್ಮಕ ಪರಿಣಾಮ ಬೀರಿವೆ. ಇದು ದೇಶಕ್ಕೆ ಮಾದರಿಯಾದ ಸರ್ಕಾರ. ಗುತ್ತಿಗೆ ಪದ್ಧತಿಯಲ್ಲಿ, ಬಡ್ತಿಯಲ್ಲಿ ಮೀಸಲಾತಿ ಜಾರಿ ಮಾಡಿದೆ. ಜನರ ಆರ್ಥಿಕ ಬದುಕಿನಲ್ಲಿ ಸುಧಾರಣೆಯನ್ನು ತಂದಿರುವ ಕೀರ್ತಿ ರಾಜ್ಯ ಸರ್ಕಾರಕ್ಕೆ ಸಲ್ಲಬೇಕಿದೆ ಎಂದರು. ಸರ್ಕಾರವು ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಯ ಅನುದಾನವನ್ನು ದುರುಪಯೋಗ ಮಾಡುತ್ತಿದೆ ಎಂದು ವಿರೋಧ ಪಕ್ಷದವರು ಅಪಾದಿಸುತ್ತಾರೆ. ದೇಶದ ವಿವಿಧ ರಾಜ್ಯಗಳಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿಯು ಈ ಕಾಯ್ದೆಯನ್ನು ಯಾಕೆ ಇನ್ನೂ ಜಾರಿಮಾಡಿಲ್ಲ ಎಂದು ಪ್ರಶ್ನಿಸಿದರು. ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಯಲ್ಲಿ ಇದುವರೆಗೂ 3.5 ಲಕ್ಷ ಕೋಟಿ ರೂ. ಬಳಕೆ ಮಾಡಲಾಗಿದೆ. ಈ ಅನುದಾನದಲ್ಲಿ ಪರಿಶಿಷ್ಟರ ಸಂಪೂರ್ಣವಾಗಿ ಏಳಿಗೆಯಾಗಿದೆ ಎಂದು ನಾನು ಹೇಳುವುದಿಲ್ಲ. ಆದರೆ ಪರಿಶಿಷ್ಟ ಸಮುದಾಯ ವಾಸಿಸುವ ಪ್ರತೀ ಹಳ್ಳಿಗಳು ಮೂಲಭೂತ ಸೌಕರ್ಯ ಕಂಡಿವೆ. ಮಕ್ಕಳ ಉನ್ನತ ವ್ಯಾಸಂಗಕ್ಕೆ ಅನುಕೂಲವಾಗಿದೆ ಎಂದರು. ಮೀಸಲಾತಿ ಪ್ರಮಾಣವನ್ನು ಶೇ.56 ರಷ್ಟು ಹೆಚ್ಚಿಸಿದ ಬಸವರಾಜ ಬೊಮ್ಮಾಯಿ ನೇತೃತ್ವದ ಅಂದಿನ ಬಿಜೆಪಿ ಸರ್ಕಾರವು ಶಾಸನ ರಚಿಸಿದೆ ಪರಿಶಿಷ್ಟರನ್ನು ಬಾವಿಗೆ ತಳ್ಳುವ ಕೆಲಸ ಮಾಡಿತು. ವರ್ಷಕ್ಕೆ ಎರಡು ಕೋಟಿ ಉದ್ಯೋಗ ನೀಡುವುದಾಗಿ ಭರವಸೆ ಕೊಟ್ಟ ಕೇಂದ್ರ ಬಿಜೆಪಿ ಸರ್ಕಾರವು "ಅಚ್ಚೇದಿನ್" ತರುತ್ತೇವೆ ಎಂದು ನಂಬಿಸಿದರು. ದುರಾದೃಷ್ಟವೆಂದರೆ ಜನರಿಗೆ ಇನ್ನೂ ಒಳ್ಳೆಯದಿನ ಬಂದಿಲ್ಲ ಎಂದು ಹೇಳಿದರು.

# ಬೆಟ್ಟ ಉಳಿಸಿ ಹೋರಾಟ: ರಾಜಮಾತೆ ಬೆಂಬಲ

## ಚಾಮುಂಡಿ ಬೆಟ್ಟದ ಮೇಲಿನ ಕಾಮಗಾರಿಗಳನ್ನು ತಡೆಯುವಂತೆ ಆಗ್ರಹ

ಮೈಸೂರು:ಚಾಮುಂಡಿ ಬೆಟ್ಟದ ಮೇಲಿನ ಕಾಮಗಾರಿಗಳನ್ನು ತಡೆಯುವಂತೆ ಆಗ್ರಹಿಸಿ ನಡೆಯುತ್ತಿರುವ ಹೋರಾಟದಲ್ಲಿ ರಾಜಮಾತೆ ಪ್ರಮೋದ ದೇವಿ ಒಡೆಯರ್ ಪಾಲ್ಗೊಂಡು ಬೆಂಬಲ ಸೂಚಿಸಿದರು.

ಚಳಿಯನ್ನು ಲೆಕ್ಕಿಸಿದರೇ ಚಾಮುಂಡಿಬೆಟ್ಟದ ರಕ್ಷಣೆಗಾಗಿ ಚಾಮುಂಡಿಬೆಟ್ಟದ ಸಾವಿರ ಮೆಟ್ಟಿಲುಗಳನ್ನು ಹತ್ತುವ ಮೂಲಕ ಧಾರ್ಮಿಕ, ಆಧ್ಯಾತ್ಮಕ ಮತ್ತು ಪರಂಪರೆ ಉಳಿಸುವಂತೆ ಆಗ್ರಹಿಸಿದರು.

ಪ್ರಸಾದ್ ಯೋಜನೆ ಅಡಿ ಚಾಮುಂಡಿ ಬೆಟ್ಟದ ಮೇಲೆ ನಡೆಯುತ್ತಿರುವ ಕಾಮಗಾರಿಯನ್ನು ವಿರೋಧಿಸಿ ಪರಿಸರಕ್ಕಾಗಿ ನಾವು ಬಳಗದ ವತಿಯಿಂದ ಆಯೋಜಿಸಿದ್ದ ಚಾಮುಂಡಿ ಬೆಟ್ಟದ ಸಂರಕ್ಷಣೆಗಾಗಿ ನಡಿಗೆಯಲ್ಲಿ




ಮೈಸೂರಿನ ರಾಜವಂಶಸ್ಥರು, ಪರಿಸರ ಪ್ರೇಮಿಗಳು, ಪ್ರಗತಿಪರ ಚಿಂತಕರು, ವಿವಿಧ ಶಾಲೆಯ ನೂರಾರು ಮಕ್ಕಳು ಮೆಟ್ಟಿಲು ಹತ್ತಿ ಚಾಮುಂಡಿ ಬೆಟ್ಟದ ಮಹತ್ವ ಸಾರಿದರು. ವಿದ್ಯಾರ್ಥಿಗಳು ಅಭಿವೃದ್ಧಿ ಮೇಲಕ್ಕೆ ಪರಿಸರ ಪಾತಾಳಕ್ಕೆ, ಪರಿಸರ ಸ್ನೇಹಿ ಅಭಿವೃದ್ಧಿ ಬೇಕು ವಿನಾಶದ ಅಭಿವೃದ್ಧಿ ಸಾಕು ಬೇಡವೇ ಬೇಡ ಬೆಟ್ಟವು ಕಾಂಕ್ರೀಟ್ ಕಾಡಾಗುವುದು ಬೇಡ, ಬೆಟ್ಟದ ಮೇಲೆ ಅತಿ ನಿರ್ಮಾಣ ಭೂಕುಸಿತಕ್ಕೆ ಕಾರಣ ಎಂಬ ವಿವಿಧ ಫ್ಲೇಕಾರ್ಡ್‌ಗಳನ್ನು ಹಿಡಿದು ಕಾಮಗಾರಿ ವಿರುದ್ಧ ಘೋಷಣೆ ಕೂಗಿದರು.

ಈ ವೇಳೆ ರಾಜವಂಶಸ್ಥೆ ಪ್ರಮೋದ ದೇವಿ ಒಡೆಯರ್ ಮಾತನಾಡಿ, ಬೆಟ್ಟ ಉಳಿಸ ಬೇಕಿರುವುದು ಎಲ್ಲರ ಕರ್ತವ್ಯ. ನಮ್ಮ ಕುಟುಂಬದಿಂದ ವೈಕ್ತಿಕವಾಗಿ ಕಳೆದ 30 ಮಾಡುತ್ತಿದ್ದೇವೆ. ಅದು ವೈಯಕ್ತಿವಾಗಿ ಮಾತ್ರ ಇತ್ತು. ಈಗ ಜನರಿಗೆ ತಲುಪಿದ್ದು, ಜನರು ಸಹ ನಮ್ಮೊಟ್ಟಿಗೆ ಸೇರಿದ್ದಾರೆ. ಚಾಮುಂಡಿಬೆಟ್ಟ ಬೆಟ್ಟವಾಗಿ ಉಳಿದುಕೊಳ್ಳಲಿ ಎಂಬುದೇ ಎಲ್ಲರ ಮುಖ್ಯ ಉದ್ದೇಶವಾಗಿದೆ ಎಂದರು.

ಬೆಟ್ಟದ ಮೇಲ್ಭಾಗದಲ್ಲಿ ಕಾಂಕ್ರೀಟೀಕರಣ ಮಾಡುವ ಅವಶ್ಯತೆ ಇಲ್ಲ. ಭಕ್ತಧಿಕಗಳಿಗೆ ಬೇಕಿರುವ ಕುಡಿಯುವ ನೀರು, ಶೌಚಾಲಯ, ಹಿರಿಯ ನಾಗರಿಕರಿಗೆ ಸೌಲಭ್ಯ ನೀಡು ವುದಕ್ಕೆ ಯಾರಿಗೂ ಅಸಮಧಾನವಿಲ್ಲ. ಮೂಲ ಸೌಕರ್ಯ ಸೌಲಭ್ಯವನ್ನು ಒದಗಿಸಬೇಕು. ಆದರೆ, ದೇವಸ್ಥಾನದ ಪಕ್ಕದಲ್ಲಿಯೇ ಕಾಮಗಾರಿ ಆರಂಭವಾ ಗಿದೆ. ವರ್ಷಕ್ಕೊಮ್ಮೆ ರಥೋತ್ಸವದ ಸಂದರ್ಭದಲ್ಲಿ ತೇರು ಬರುಲು ಸಾಕಷ್ಟು ಇಕ್ಕಟು ಆಗಲಿದೆ. ಜನರಿಗೂ ಸಮಸ್ಯೆ ಆಗಲಿದೆ ಎಂದು ತಿಳಿಸಿದರು.ಜನರು ಚಾಮುಂಡಿ ಬೆಟ್ಟ ಬರು ವುದೇ ಚಾಮುಂಡೇಶ್ವರಿ ದರ್ಶನ ಪಡೆ ದುಕೊಳ್ಳಲು. ಅದಕ್ಕೂ ಅವಕಾಶವಿಲ್ಲದೆ. ಈ ರೀತಿ ಕಟ್ಟಡ ನಿರ್ಮಾಣ ಮಾಡು ವುದರಿಂದ ಎಲ್ಲರಿಗೂ ತೊಂದರೆ ಆಗಲಿದೆ. ಉತ್ಸವಕ್ಕೂ ಅಡ್ಡಲಾಗುತ್ತದೆ ಎಂಬ ಭಾವನೆ ಇದೆ. ಕಾಮಗಾರಿಯ ಪ್ಲಾನ್ ನೋಡಿದರೆ ಅದು ತಾತ್ಕಾಲಿಕ ಎಂದು ಅನಿಸುತ್ತಿಲ್ಲ. ಇದರಿಂದ ಎಲ್ಲ ರಿಗೂ ತೊಂದರೆ ಆಗುತ್ತದೆ ಬೆಟ್ಟಕ್ಕೂ ಹಾನಿಯಾಗುತ್ತದೆ. ಈಗಾಗಲೇ ನಂದಿ ಮಾರ್ಗದ ರಸ್ತೆ ಕುಸಿದು ನಾಲ್ಕು ವರ್ಷಗಳಾಗಿ ಈಗ ತಾತ್ಕಾಲಿಕವಾಗಿ ರಸ್ತೆ ತೆರಯಲಾಗಿದೆ. ಅದನ್ನು ಸರಿ ಪಡಿಸಲು ಇಷ್ಟು ವರ್ಷ ಬೇಕಾಯಿತು.

ಈ ಹಿಂದೆ ಬೆಟ್ಟದಲ್ಲಿ ಪಾರ್ಕಿಗೂ ಕಾಮಗಾರಿ ಮಾಡಿದ್ದಾಗ ರಾಜೇಂದ್ರ ವಿಲಾಸ್ ಅರಮನೆಗೂ ಸಾಕಷ್ಟು ಹಾನಿಯಾಗಿದೆ. ಗಾಳಿ ಸಮಸ್ಯೆಯಿಂದ ಕಾಮಗಾರಿ ಮಾಡಲು ಸಾಧ್ಯವಿಲ್ಲ. ಮತ್ತೆ ಗುಮ್ಮಟ್ಟ ಕಾಮಗಾರಿಯನ್ನು ನಡೆಸಲು ಕಷ್ಟವಾಯಿತು ಎಂದು ಬೇಸರ ವ್ಯಕ್ತಪಡಿಸಿದರು. ನಡಿಗೆಯಲ್ಲಿ ಶಾಸಕ ದರ್ಶನ್ ಪುಟ್ಟಣಯ್ಯ, ಮೇಯರ್ ಜನರಲ್ ಒಂಬತ್ಕೆರೆ, ಭಾಮಿಶಣೈ, ಪ್ರೊ. ರಂಗರಾಜು, ಧರ್ಮೇಂದ್ರ, ಪರಿಸರ ಬಳಗದ ಪರಶುರಾಮೇಗೌಡ ಸೇರಿ ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು ಭಾಗವಹಿಸಿದರು.

### ನಾನು ಯಾವುದೇ ಪಕ್ಷ ಸದಸ್ಯೆ ಅಲ್ಲ

ಇಂದಿನ ಕಾರ್ಯಕ್ರಮಕ್ಕೆ ಬೆಂಬಲ ಕೇಳಿದ್ದಾರೆ ಭಾಗವಹಿಸಿದ್ದೇನೆ. ಇಂದು ಸ್ಪಷ್ಟವಾಗಿ ಹೇಳುತ್ತಿದ್ದೇನೆ ನಾನು ಯಾವುದೇ ಪಕ್ಷದ ಸದಸ್ಯೆ ಅಲ್ಲ. ನನ್ನ ಪತಿ ಶ್ರೀಕಂಠದತ್ತ ಚಾಮರಾಜ ಒಡೆಯರ್ ಕಾಂಗ್ರೆಸ್‌ನಲ್ಲಿ ಇದ್ದರು. ಈಗ ಮಗ ಯದು ವೀರ್ ಕೃಷ್ಣದತ್ತ ಒಡೆಯರ್ ಬಿಜೆಪಿಯಲ್ಲಿ ಇದ್ದಾರೆ. ಎರಡು ಪಕ್ಷದಲ್ಲಿಯೂ ನಾನು ಸದಸ್ಯೆ ಆಗಿಲ್ಲ. ನಾನು ಜನರ ಪರ ಅವರೊಟ್ಟಿಗೆ ಇರುತ್ತೇನೆ. ಯಾವುದೇ ಪಕ್ಷದೊಂದಿಗೆ ನನ್ನನೂ ಸೇರಿಸಬೇಡಿ. ಆ ರೀತಿ ಭಾವನೆ ಇಟ್ಟುಕೊಳ್ಳಬೇಡಿ ಜನರೊಟ್ಟಿಗೆ ನನ್ನ ಸೇರಿಸಿ ಎಂದು ಪ್ರಶ್ನೆಯೊಂದಕ್ಕೆ ಪ್ರಮೋದದೇವಿ ಒಡೆಯರ್ ಪ್ರತಿಕ್ರಿಯಿಸಿದರು.

### ಪತ್ರಿಕೆಗಳಿಗೆ ಮತ್ತಷ್ಟು ಜಾಹೀರಾತು ನೀಡಬೇಕು

ಪತ್ರಿಕಾ ಸಂಸ್ಥೆಗಳು ಸಕ್ಕರೆ ಕಾರ್ಖಾನೆಯಲ್ಲ. ದೊಡ್ಡ ದೊಡ್ಡ ರಾಜಕಾರಣಿಗಳು ಪತ್ರಿಕೆ ಆರಂಭಿಸಿ ನಷ್ಟದಿಂದ ಮುಚ್ಚಿದ್ದಾರೆ. ಸಾವಿರಾರು ಪತ್ರಕರ್ತರು ಜೀವನ ಜಾಹೀರಾತಿನ ಮೇಲೆ ನಿಂತಿದೆ. ಜಾಹೀರಾತು ನೀಡುವುದರಿಂದ ಸರ್ಕಾರಗಳು ಬದಲಾಗುವುದಿಲ್ಲ. ಹೀಗಾಗಿ ವಿರೋಧ ಪಕ್ಷದ ನಾಯಕರ ಕಣ್ಣು ಪತ್ರಿಕೆಗಳಿಗೆ ನೀಡುವ ಜಾಹೀರಾತಿನ ಮೇಲೆ ಬೀಳಬಾರದು. ಪತ್ರಿಕೆಗಳು ಉಳಿಯಲು ಸರ್ಕಾರವು ಮತ್ತಷ್ಟು ಜಾಹೀರಾತು ನೀಡಬೇಕು ಎಂದು ಒತ್ತಾಯಿಸಿದರು.

# ಕೇಂದ್ರ ಎನ್‌ಸಿಬಿಯೂ ಬಿಜೆಪಿ ಏಜೆಂಟ್: ಎಂ.ಲಕ್ಷ್ಮಣ್

ಮೈಸೂರು: ನಗರದ ಕೆಮಿಕಲ್ ಫ್ಯಾಕ್ಟರಿಯಲ್ಲಿ ವಶಪಡಿಸಿಕೊಳ್ಳಲಾಗದೆ ಎನ್ನಲಾದ ವಸ್ತುಗಳನ್ನು ಕುರಿತು ಎನ್‌ಸಿಬಿಯೂ ಘನ ನ್ಯಾಯಾಲಯಕ್ಕೆ ಕೊಟ್ಟಿರುವ ಅಫಿಡೇವಿಟ್ ಬೇರೆ. ಮಾಧ್ಯಮಗಳಿಗೆ ನೀಡಿರುವ ಹೇಳಿಕೆ ಬೇರೆಯಾಗಿದ್ದೂ, ಜನರನ್ನು ದಿಕ್ಕುತಪ್ಪಿಸುವ ಕೆಲಸ ಮಾಡಿ, ಬಿಜೆಪಿ ಏಜೆಂಟ್ ರೀತಿ ವರ್ತಿಸುತ್ತಿದೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಆರೋಪಿಸಿದರು.

ನಗರದ ಇಂದಿರಾ ಕಾಂಗ್ರೆಸ್ ಭವನದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾದಕ ದ್ರವ್ಯ ನಿಯಂತ್ರಣ ಬ್ಯೂರೋ(ಎನ್‌ಸಿಬಿ) ಕೂಡ ಬಿಜೆಪಿಯ ಏಜೆಂಟ್ ರೀತಿ ವರ್ತಿಸುತ್ತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೆಟ್ಟ ಹೆಸರು ತರುವ ದುರುದ್ದೇಶದಿಂದ ಮೈಸೂರನ್ನೇ ಗುರಿಯಾಗಿಟ್ಟುಕೊಂಡು ಡ್ರಗ್ಸ್ ತಯಾರಿಕಾ ಘಟಕ ನಡೆಯುತ್ತಿವೆ ಎಂದು ಷಡ್ಯಂತ ಮಾಡುತ್ತಿದ್ದಾರೆ ಎಂದರು.

ಫ್ಯಾಕ್ಟರಿಯ ಮಾಲೀಕ ಗಣಪತ್ ಲಾಲ್ ಎಂಬುವರನ್ನು ಹೆಚ್ಚಿನ ವಿಚಾರಣೆಗೆ ತನ್ನ ವಶಕ್ಕೆ ನೀಡಬೇಕು ಎಂದು ಎನ್‌ಸಿಬಿಯು ಮೈಸೂರಿನ ಮೂರನೇ ಜೆಎಂಎಫ್‌ಸಿ ನ್ಯಾಯಾಲಯಕ್ಕೆ ಹಾಜರು ಪಡಿಸಿರುವ ಸಂದರ್ಭದಲ್ಲಿ ಘನ ನ್ಯಾಯಾಲಯಕ್ಕೆ ನೀಡಿರುವ



ಅಫಿಡೇವಿಟ್‌ನಲ್ಲಿ 41.218 ಕೆಜಿ ಕ್ರಿಸ್ಟಲಿನ್ ವಶ ಪಡಿಸಿಕೊಂಡಿದ್ದೇವೆ. ಅಲ್ಲದೇ ಮೆಫೆಡ್ರಾನ್‌ಗೆ ಬದಲಿಯಾಗಿ ಬಳಕೆ ಮಾಡಲಾಗುತ್ತದೆ ಎನ್ನುವ ಶಂಕೆಯ ಮೇರೆಗೆ 1.28 ಕೆಜಿ ಕ್ರಿಸ್ಟಲ್ ಪೌಡರ್ ವಶಕ್ಕೆ ತಗೆದುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಈ ಕ್ರಿಸ್ಟಲಿನ್ ಎನ್ನುವ ವಸ್ತುವನ್ನು ಸೆಮಿಕಂಡಕ್ಟರ್ ತಯಾರಿಕೆ, ಮೈಕ್ರೋಚಿಪ್ ತಯಾರಿಕೆ ಸೋಲಾರ್ ಸೆಲ್‌ಗಳ ತಯಾರಿಕೆಯಲ್ಲಿ ಸಾಮಗ್ರಿಯಾಗಿ ಉಪಯೋಗಿಸಲಾಗುತ್ತದೆ ಎನ್ನುವ ಪ್ರಾಥಮಿಕ ಮಾಹಿತಿ ಎಲ್ಲರಿಗೂ ಸಿಗುತ್ತದೆ. ಆದರೆ ಇದನ್ನು ಮುಚ್ಚಿಟ್ಟು ಮಾದಕ ವಸ್ತುಗಳನ್ನು ವಶ ಪಡಿಸಿಕೊಂಡಿದ್ದಾರೆ ಎಂದು ಬಿಜೆಪಿಯವರು ಬಾಯಿ ಬಡಿದುಕೊಳ್ಳುತ್ತಿದ್ದಾರೆ ಎಂದು ದೂರಿದರು.

ಎನ್‌ಸಿಬಿಯೂ ಕೋರ್ಟ್ ಗೆ ನೀಡಿರುವ ಅಫಿಡೇವಿಟ್ ನಲ್ಲಿ ಎಲ್ಲಿಯೂ ಮೈಸೂರಿನಲ್ಲಿ ಮಾದಕ ವಸ್ತು ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿಲ್ಲ. ಆದರೆ, ಪತ್ರಿಕಾ ಪ್ರಕಟಣೆಯಲ್ಲಿ ಮಾತ್ರ ಮೈಸೂರಿನ ಹೆಬ್ಬಾಳ ಕೈಗಾರಿಕಾ ಪ್ರದೇಶದಲ್ಲಿ ಉತ್ಪಾದನಾ ಘಟಕ ನಡೆಸುತ್ತಿರುವ ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ ಎನ್‌ಸಿಬಿ ಅಧಿಕಾರಿಗಳು ಇಲ್ಲಿನ ರಾಸಾಯನಿಕ ಉತ್ಪಾದನಾ ಕೈಗಾರಿಕೆ ಮೇಲೆ ದಾಳಿ ನಡೆಸಿ, ಅತ್ಯಾಧುನಿಕ ಉಪಕರಣಗಳನ್ನು ಒಳಗೊಂಡ ರಾಸಾಯನಿಕಗಳನ್ನು ತಯಾರಿಸುವ ಸೋಗಿನಲ್ಲಿ ಮಾದಕ ದ್ರವ್ಯ ತಯಾರಿಸುತ್ತಿದ್ದ ಶಂಕೆ ಮೇಲೆ ಸುಮಾರು500 ಕೆಜಿ ರಾಸಾಯನಿಕವನ್ನು ವಶಕ್ಕೆ ಪಡಿಸಿಕೊಳ್ಳಲಾಗಿದೆ ಎಂದು ಸುಳ್ಳು ಮಾಹಿತಿ ನೀಡಿ ಮೈಸೂರಿಗೆ ಕೆಟ್ಟ ಹೆಸರು ತರುತ್ತಿದ್ದಾರೆ ಎಂದು ಆರೋಪಿಸಿದರು.

ಸಂಸದರಿಂದ ಸುಳ್ಳು:

ಈ ಪ್ರತಿಕಾ ಪಕ್ರಟಣೆಯನ್ನು ಇಟ್ಟುಕೊಂಡು ಮೈಸೂರು ಸಂಸದರಿಗೆ ತಲೆಬುಡ ಗೊತ್ತಿಲ್ಲದೇ ಸುಳ್ಳು ಮಾಹಿತಿ ನೀಡುತ್ತಾರೆ. ಅವರ ಹಿರಿಯರು ಮೈಸೂರಿಗೆ ಸಾಕಷ್ಟು ಕೊಡುಗೆ ನೀಡಿದ್ದಾರೆ. ಅವರ ಮರ್ಯಾದೆಯನ್ನು ಇವರು ಕಳೆಯುತ್ತಾರೆ. ಇವರು ಬಂದ ನಂತರ ಮೈಸೂರು-ಕೊಡಗಿಗೆ ಬಂದ ಕುಶಾಲನಗರ ರೈಲ್ವೆ ಯೋಜನೆ, ಪ್ರಸಾದ್ ಯೋಜನೆ, ಯೂನಿಟಿ ಮಾಲ್ ಸೇರಿದಂತೆ ಅನೇಕ ಯೋಜನೆಗಳು ಸ್ಥಗಿತಗೊಂಡಿವೆ. ಡ್ರಗ್ ಹಬ್ ಇರುವುದು ಉತ್ತರ ಭಾರತದಲ್ಲಿ. ಆದರೆ ಮೈಸೂರು ಎಂದು ಸುಳ್ಳು ಹೇಳುತ್ತಿದ್ದಾರೆ. ಈ ಹಿಂದಿನ ಎಂಪಿಗಿಂತ ಇವರು ಸುಳ್ಳು ಹೇಳುವುದರಲ್ಲಿ ಮುಂದೆ ಸಾಗುತ್ತಿದ್ದಾರೆ ಎಂದು ಕಿಡಿಕಾರಿದರು.

ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ರಾಮು, ಮುಖಂಡರಾದ ಗಿರೀಶ್, ಜಿಲ್ಲಾ ಕಾಂಗ್ರೆಸ್ ಮಾಧ್ಯಮ ವಕ್ತಾರ ಮಹೇಶ್ ಸುದ್ದಿಗೋಷ್ಠಿಯಲ್ಲಿದ್ದರು.

ಮೊದಲ ಪುಟದಿಂದ

### ಕರ್ನಾಟಕಕ್ಕೆ ಚೊಂಬು

ಹೈದರಾಬಾದ್ ಹಾಗೂ ಬೆಂಗಳೂರು-ಚೆನ್ನೈ ಹೈಸ್ಪಿಡ್ ರೈಲು ಕೊಟ್ಟಿದ್ದಾರೆ. ಅದು ಸಹ 5 ವರ್ಷ ಸಮಯ ಬೇಕು. ನಮಗೆ ಬ ೆಂ ಗ ಳ ೂ ರ ು - ಮ ಂ ಗ ಳ ೂ ರ ು , ಬೆಂಗಳೂರು-ಪುಣೆ ರೈಲು ಬೇಕಾಗಿತ್ತು.

ಮಹದಾಯಿ ಯೋಜನೆಗೆ ಕೇಂದ್ರ ಸರ್ಕಾರ ಪರಿಸರ ಇಲಾಖೆ ಅನುಮತಿ ಕೊಟ್ಟಿಲ್ಲ. ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ನಾವು ಕ್ಲಿಯರ್ ಮಾಡುವುದಾಗಿ ಯಡಿಯೂರಪ್ಪ ರಕ್ತದಲ್ಲಿ ಬರೆದು ಕೊಡುವುದಾಗಿ ಹೇಳಿದ್ದರು. ಈ ಮೂಲಕ ಕರ್ನಾಟಕದ ಜನತೆಗೆ ಕೇಂದ್ರ ಅನ್ಯಾಯ ಮಾಡಿದೆ ಎಂದು ವಾಗ್ದಾಳಿ ನಡೆಸಿದರು.

ರಾಜ್ಯವಾರು ಹಣ ಹಂಚಿಕೆ ನೋಡಿದರೆ ಬಿಹಾರ 9.948, ಯುಪಿ-17.691, ಗುಜರಾತ್ 3.755, ಕರ್ನಾಟಕಕ್ಕೆ 4.131, ಆಂಧ್ರಪ್ರದೇಶಕ್ಕೆ- 4.271 ಇದೆ. ನಾವು ತಲಾ ಆದಾಯದಲ್ಲಿ ನಂಬರ್ 1, ಜಿಎಸ್‌ಟಿ ಸಂಗ್ರಹದಲ್ಲಿ ಎರಡನೇ ಸ್ಥಾನ ಪಡೆದಿದ್ದೇವೆ. ಹೀಗಿದ್ದರೂ ನಮಗೆ ಅನುದಾನ ಬಂದಿಲ್ಲ. 2026-27 ಬಜೆಟ್ ಕರ್ನಾಟಕಕ್ಕೆ ಅನ್ಯಾಯ ಮಾಡಿದೆ ಎಂದು ಟೀಕಿಸಿದರು.

### ಪಂಚ ರಾಜ್ಯಗಳಿಗೆ ಭರಪೂರ

ರಚಿಸಲು ಯೋಜನೆ ರೂಪಿಸುತ್ತಿರುವುದಾಗಿ ತಿಳಿಸಿದ್ದಾರೆ.

ಮುಂಬೈ-ಪುಣೆ, ಪುಣೆ-ಹೈದರಾಬಾದ್, ಹೈದರಾಬಾದ್-ಬೆಂಗಳೂರು, ಹೈದರಾಬಾದ್-ಚೆನ್ನೈ, ಚೆನ್ನೈ-ಬೆಂಗಳೂರು, ದೆಹಲಿ-ವಾರಣಾಸಿ ಮತ್ತು ವಾರಣಾಸಿ-ಸಿಲಿಗುರಿಗಳನ್ನು ಸಂಪರ್ಕಿಸುವ ನಗರಗಳ ನಡುವೆ ಹೈಸ್ಪೀಡ್ ರೈಲು ಕಾರಿಡಾರ್‌ಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಯೋಜಿಸಿದೆ ಎಂದು ಸೀತಾರಾಮನ್ ಮಾಹಿತಿ ನೀಡಿದ್ದಾರೆ. ದುರ್ಗಾಪುರದಲ್ಲಿ ಉತ್ತಮ ಸಂಪರ್ಕ ಹೊಂದಿರುವ ಸಮಗ್ರ ಪೂರ್ವ ಕರಾವಳಿ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿಯನ್ನೂ ಅವರು ಪ್ರಸ್ತಾಪಿಸಿದರು. ಅವರು ಈಶಾನ್ಯ ರಾಜ್ಯಗಳಲ್ಲಿ ಐದು ಪ್ರವಾಸಿ ತಾಣಗಳನ್ನು ನಿರ್ಮಿಸುವು ಗುರಿ ಹೊಂದಲಾಗಿದೆ.

### ಸ್ಪಷ್ಟ ಮಾರ್ಗಸೂಚಿ

ವಲಯಕ್ಕೆ ಉತ್ತಮ ಬೆಂಬಲ ನೀಡಲಿದೆ. ಇದೊಂದು ಅಭೂತಪೂರ್ವ ಬಜೆಟ್ ಆಗಿದೆ ಎಂದು ಮೋದಿ ಶ್ಲಾಘಿಸಿದ್ದಾರೆ.

ಈ ಬಾರಿಯ ಬಜೆಟ್ ಭಾರತದ ಜಾಗತಿಕ ಪಾತ್ರವನ್ನು ಮತ್ತಷ್ಟು ಬಲಪಡಿಸುತ್ತದೆ. ಭಾರತ ಸಾಧ್ಯವಾದಷ್ಟು ಬೇಗ ಮೂರನೇ ಅತಿದೊಡ್ಡ ಜಾಗತಿಕ ಆರ್ಥಿಕತೆಯಾಗಬೇಕು ಎಂಬುದು 140 ಕೋಟಿ ಜನರ ಬಯಕೆಯಾಗಿದೆ. ವಿಶ್ವದಲ್ಲಿ ವಿಶ್ವಾಸಾರ್ಹ, ಗುಣಮಟ್ಟದ ಪೂರೈಕೆದಾರನಾಗಿ ಭಾರತ ತನ್ನ ಪಾತ್ರವನ್ನು ಯಶಸ್ವಿಯಾಗಿ ವಿಸ್ತರಿಸುತ್ತಿದೆ. ಈಚೆಗೆ ಸಹಿ ಹಾಕಲಾದ ಭಾರತ ಮತ್ತು ಐರೋಪ್ಯ ಒಕ್ಕೂಟದ (ಇ.ಯು) ನಡುವಿನ ಮುಕ್ತ ವ್ಯಾಪಾರ ಒಪ್ಪಂದದಿಂದ ದೇಶದ ಯುವ ಜನರು, ಸಣ್ಣ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಿಗೆ ಹೆಚ್ಚು ಪ್ರಯೋಜನವಾಗಲಿದೆ ಎಂದೂ ಮೋದಿ ತಿಳಿಸಿದ್ದಾರೆ.

### ಶೇ.4.13ರಷ್ಟು ತೆರಿಗೆ ಪಾಲು

ಹಣಕಾಸು ಆಯೋಗ ಕರ್ನಾಟಕಕ್ಕೆ ಶೇ.4.13ರಷ್ಟು ತೆರಿಗೆ ಪಾಲು ಹಂಚಿಕೆಗೆ ಶಿಫಾರಸು ಮಾಡಿದೆ. 15ನೇ ಹಣಕಾಸು ಆಯೋಗವು ಶೇ.3.64 ಹಂಚಿಕೆ ಮಾಡಿತ್ತು. ಹೊಸದಾಗಿ ಹಂಚಿಕೆ ಆಗಿರುವುದರ ಮೂಲಕ ರಾಜ್ಯಕ್ಕೆ 2026-27ನೇ ಸಾಲಿನಲ್ಲಿ 63,049 ಕೋಟಿ ರೂ. ತೆರಿಗೆ ಪಾಲು ದೊರೆಯಲಿದೆ ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಈ ಬಜೆಟ್‌ನಲ್ಲಿ ಕರ್ನಾಟಕಕ್ಕೆ ನಿರಾಶೆಯೇನೂ ಆಗಿಲ್ಲ. ತೆಂಗು ಪ್ರೋತ್ಸಾಹ ಯೋಜನೆಯಡಿ ತೆಂಗಿನ ಉತ್ಪಾದನೆ ಹೆಚ್ಚಳಕ್ಕೆ ಉತ್ತೇಜನ ಕೊಡಲಾಗಿದೆ. ಗೋಡಂಬಿ ಮತ್ತು ಕೋಕೋವನ್ನು 2030ರ ವೇಳೆಗೆ ಪ್ರೀಮಿಯಂ ಗ್ಲೋಬಲ್ ಬ್ರಾಂಡ್ ಆಗಿ ರೂಪಿಸುವ ಅಂಶವು ಮುಂಗಡ ಪತ್ರದಲ್ಲಿ ಸೇರಿದೆ. ಶ್ರೀಗಂಧ, ತೆಂಗು ಬೆಳೆ, ಕೋಕೋ ಬೆಳೆಗೆ ವಿಶೇಷ ಯೋಜನೆ ಮೂಲಕ ರಾಜ್ಯದ ಹಲವಾರು ಜಿಲ್ಲೆಗಳಿಗೆ ಉಪಯೋಗ ಆಗುತ್ತದೆ ಎಂದು ತಿಳಿಸಿದರು.

### ಪರಿಹಾರ ನೀಡದ ಬಜೆಟ್

ಸಮುದಾಯಗಳಿಗೂ ಯಾವುದೇ ಬೆಂಬಲ ಒದಗಿಸಿಲ್ಲ. ಈ ಬಜೆಟ್‌ನಿಂದ ರಾಜ್ಯ ಸರ್ಕಾರಗಳಿಗೆ ಅನುಕೂಲ ಆದಂತೆ ಕಾಣುತ್ತಿಲ್ಲ. ಒಕ್ಕೂಟ ವ್ಯವಸ್ಥೆ ಬಲಿಪಶುವಾಗಿದೆ ಎಂದು ಖರ್ಗೆ ಕಿಡಿಕಾರಿದ್ದಾರೆ.

### ಬುಲೆಟ್ ರೈಲು

ಒಂಬತ್ತನೇ ಕೇಂದ್ರ ಬಜೆಟ್ ಅನ್ನು ಭಾನುವಾರ ಮಂಡಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಭಾರತದ ಹೈಸ್ಪೀಡ್ ರೈಲು ಮಹತ್ವಾಕಾಂಕ್ಷೆಗಳ ಮಹತ್ವಾ ಕಾಂಕ್ಷೆಯ ವಿಸ್ತರಣೆಯನ್ನು ಘೋಷಿಸಿದರು. ಟೈಯರ್ -2 ಮತ್ತು ಟೈಯರ್ -3 ನಗರಗಳನ್ನು ಪ್ರಮುಖ ನಗರ ಕೇಂದ್ರಗಳೊಂದಿಗೆ ಸಂಪರ್ಕಿಸುವ, ರಸ್ತೆ ಮತ್ತು ಅಲ್ಪಾವಧಿಯ ವಿಮಾನ ಪ್ರಯಾಣಕ್ಕೆ ವೇಗದ ಪರ್ಯಾಂ ಯವಾಗಿ ರೈಲ್ವೆಗಳನ್ನು ಮರುಸ್ಥಾಪಿಸುವ ಗುರಿಯನ್ನು ಬಜೆಟ್ ಹೊಂದಿದೆ. ಎಲ್ಲೆಲ್ಲಿಗೆ ಹೈಸ್ಪೀಡ್ ರೈಲು ಕಾರಿಡಾರ್: ಪುಣೆ- ಮುಂಬೈ, ಪುಣೆ-ಹೈದರಾಬಾದ್, ಹೈದರಾಬಾದ್- ಬೆಂಗಳೂರು., ಬೆಂಗಳೂರು- ಚೆನ್ನೈ, ಹೈದರಾಬಾದ್- ಚೆನ್ನೈ, ದೆಹಲಿ-ವಾರಣಾಸಿ, ವಾರಣಾಸಿ-ಸಿಲಿಗುರಿ.

### ಆದಾಯ-ವೆಚ್ಚ ಯಾ-ರಿಗೆ, ಎಷ್ಟು?

ಸರ್ಕಾರವು ಪ್ರತಿ ರೂಪಾಯಿ ಆದಾಯದಲ್ಲಿ ಅಬಕಾರಿ ಸುಂಕದಿಂದ 6 ಪೈಸೆ ಮತ್ತು ಕಸ್ಟಮ್ಸ್ ಸುಂಕದಿಂದ 4 ಪೈಸೆ ಗಳಿಸಲು ಯೋಜಿಸಿದೆ.

ಬಜೆಟ್ ದಾಖಲೆಗಳ ಪ್ರಕಾರ, ವೆಚ್ಚದ ಭಾಗದಲ್ಲಿ, ಬಡ್ಡಿ ಪಾವತಿ ಮತ್ತು ತೆರಿಗೆಯಲ್ಲಿ ರಾಜ್ಯಗಳ ಪಾಲು ಹಂಚಿಕೆಯನ್ನೂ ಒಳಗೊಂಡು ಪ್ರತಿ ರೂಪಾಯಿಯಲ್ಲಿ ಕ್ರಮವಾಗಿ 20 ಪೈಸೆ ಹಾಗೂ 22 ಪೈಸೆಯಷ್ಟಿದೆ. ರಕ್ಷಣಾ ಕ್ಷೇತ್ರಕ್ಕೆ ಪ್ರತಿ ರೂಪಾಯಿಯಲ್ಲಿ 11 ಪೈಸೆ ಹಂಚಿಕೆ ಮಾಡಲಾಗಿದೆ. ಕೇಂದ್ರ ವಲಯದ ಯೋಜನೆಗಳಿಗೆ ಪ್ರತಿ ರೂಪಾಯಿಯಲ್ಲಿ 17 ಪೈಸೆ ವೆಚ್ಚವಾಗಿದ್ದರೆ, ಕೇಂದ್ರ ಪ್ರಾಯೋಜಿತ ಯೋಜನೆಗಳಿಗೆ 8 ಪೈಸೆ ಹಂಚಿಕೆಯಾಗಿದೆ. ಹಣಕಾಸು ಆಯೋಗ ಮತ್ತು ಇತರ ವರ್ಗಾವಣೆಗಳ ವೆಚ್ಚವನ್ನು 7 ಪೈಸೆ ಎಂದು ನಿಗದಿಪಡಿಸಲಾಗಿದೆ. ಸಬ್ಸಿಡಿಗಳು ಮತ್ತು ಪಿಂಚಣಿಗಳು ಕ್ರಮವಾಗಿ 6 ಪೈಸೆ ಮತ್ತು 2 ಪೈಸೆಯಾಗಿರುತ್ತವೆ. ಸರ್ಕಾರವು ಪ್ರತಿ ರೂಪಾಯಿಯಲ್ಲಿ 7 ಪೈಸೆಯನ್ನು ಇತರ ವೆಚ್ಚಗಳಿಗೆ ಖರ್ಚು ಮಾಡುತ್ತದೆ ಎಂದು ಉಲ್ಲೇಖಿಸಲಾಗಿದೆ.

# ವಿಜ್ಞಾನದ ಕಣ್ಣಲ್ಲಿ ವೇದಾಂತದ ದರ್ಶನ: ಜನಮನ ಗೆದ್ದ 'ದಕ್ಷಿಣಾಸ್ಯ ದರ್ಶಿನಿ'ಗೆ ಅದ್ದೂರಿ ತೆರೆ

**ಬೆಂಗಳೂರು:** ಭಾರತೀಯ ಸನಾತನ ಜ್ಞಾನ ಪರಂಪರೆ ಮತ್ತು ಅತ್ಯಾಧುನಿಕ ವಿಜ್ಞಾನಗಳು ಬೇರೆ ಬೇರೆಯಲ್ಲ, ಅವೆರಡೂ ಸತ್ಯಾನ್ವೇಷಣೆಯ ಎರಡು ಮುಖಗಳು ಎಂಬುದನ್ನು ಸಾಬೀತುಪಡಿಸಿದ 'ದಕ್ಷಿಣಾಸ್ಯ ದರ್ಶಿನಿ' ವಸ್ತು ಪ್ರದರ್ಶನವು ಅರಮನೆ ಮೈದಾನದಲ್ಲಿ ಅದ್ದೂರಿಯಾಗಿ ಸಂಪನ್ನಗೊಂಡಿತು.

ಪರಮ್ ಫೌಂಡೇಶನ್ ಹಾಗೂ ವೇದಾಂತ ಭಾರತಿ ಜಂಟಿಯಾಗಿ ಆಯೋಜಿಸಿದ್ದ ಈ ನಾಲ್ಕು ದಿನಗಳ ಕಾರ್ಯಕ್ರಮವು ಜ್ಞಾನಾಸಕ್ತರ ಪಾಲಿಗೆ ಹಬ್ಬವಾಗಿ ಪರಿಣಮಿಸಿತು. ವಿಶೇಷವಾಗಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ 'ವೇದಾಂತ ಮೇಕಥಾನ್' ಈ ಪ್ರದರ್ಶನದ ಪ್ರಮುಖ ಆಕರ್ಷಣೆಯಾಗಿತ್ತು. ವೇದಾಂತದ ಕ್ಲಿಷ್ಟಕರವಾದ ಪರಿಕಲ್ಪನೆಗಳಾದ ಮಾಯೆ, ಪಂಚಭೂತಗಳು ಹಾಗೂ ಚೈತನ್ಯದಂತಹ





ವಿಷಯಗಳನ್ನು ವಿದ್ಯಾರ್ಥಿಗಳು ರೋಬೋಟಿಕ್ಸ್, ಎಐ (ಂಖ) ಮತ್ತು ಸೆನ್ಸಾರ್ಗಳ ಮೂಲಕ ಸರಳವಾಗಿ ವಿವರಿಸಿದ್ದು ನೋಡುಗರ ಹುಬ್ಬೇರಿಸಿತು. ಸುಮಾರು 80ಕ್ಕೂ ಹೆಚ್ಚು ಶಾಲೆಗಳ ವಿದ್ಯಾರ್ಥಿಗಳು ತಯಾರಿಸಿದ 50ಕ್ಕೂ ಅಧಿಕ ವಿಶಿಷ್ಟ ಮಾದರಿಗಳು ಜನಸಾಮಾನ್ಯರಿಗೆ ವೇದಾಂತವನ್ನು ವಿಜ್ಞಾನದ ಮೂಲಕ ಅರ್ಥ ಮಾಡಿಕೊಳ್ಳಲು ನೆರವಾದವು.

### ರೋಮಾಂಚನಗೊಳಿಸಿದ ದ್ವಾರಕಾ

ಈ ಪ್ರದರ್ಶನದ ಹೈಲೈಟ್ ಆಗಿದ್ದು ಸಮುದ್ರದಲ್ಲಿ ಮುಳುಗಿದ ದ್ವಾರಕಾ ನಗರದ ಮರುಸೃಷ್ಟಿ. ತ್ರೀಡಿ (3ಆ) ತಂತ್ರಜ್ಞಾನದ ಮೂಲಕ ದ್ವಾರಕಾ ನಗರ ಮರುಜೀವ ಪಡೆದಂತೆ ವಿನ್ಯಾಸಗೊಳಿಸಲಾದ ವಿಡಿಯೋ ಪ್ರದರ್ಶನವು ಪ್ರೇಕ್ಷಕರನ್ನು ಭಾವುಕಗೊಳಿಸಿತು. ಶ್ರೀಕೃಷ್ಣನ ದ್ವಾರಕೆ ಕಣ್ಣಮುಂದೆ ಬಂದಂತೆ ಭಾಸವಾಗಿ, ಜನರಲ್ಲಿ ದೈವಿಕ ಅನುಭೂತಿಯನ್ನು ಉಂಟುಮಾಡಿತು.

ಇಸ್ರೋ ಮಾಜಿ ಅಧ್ಯಕ್ಷ ಎಸ್. ಸೋಮನಾಥ್, ಇತಿಹಾಸ ತಜ್ಞ ವಿಕ್ರಮ್ ಸಂಪತ್ ಸೇರಿದಂತೆ ಹಲವು ಗಣ್ಯರು ಮತ್ತು ಮಠಾಧೀಶರು ಈ ಪ್ರದರ್ಶನಕ್ಕೆ ಸಾಕ್ಷಿಯಾದರು. ಚಿಕ್ಕ ಮಕ್ಕಳಿಂದ ಹಿಡಿದು ಹಿರಿಯರವರೆಗೂ ಸಾವಿರಾರು ಜನರು ಯಾವುದೇ ವಯಸ್ಸಿನ ಹಂಗಿಲ್ಲದೆ ವಿಜ್ಞಾನದ ಕೌತುಕಗಳನ್ನು ಕಂಡು ಬೆರಗಾದರು. ಆಧುನಿಕ ತಂತ್ರಜ್ಞಾನ ಮತ್ತು ಪ್ರಾಚೀನ ಸಂಸ್ಕೃತಿ ಹೇಗೆ ಒಂದಕ್ಕೊಂದು ಪೂರಕವಾಗಿ ಕೆಲಸ ಮಾಡಬಲ್ಲವು ಎಂಬುದಕ್ಕೆ ಈ ಕಾರ್ಯಕ್ರಮ ಸಾಕ್ಷಿಯಾಯಿತು.




## ಪ್ರಮುಖ ಅಂಶಗಳು

### ವಿಜ್ಞಾನ ಲೋಕ

ವಿಜ್ಞಾನಕ್ಕೆ ಸಂಬಂಧಿಸಿದ 50ಕ್ಕೂ ಹೆಚ್ಚು ಮಳಿಗೆಗಳಿದ್ದು, ಪ್ರತಿಯೊಂದು ಮಳಿಗೆಯೂ ಹೊಸ ಆವಿಷ್ಕಾರ ಮತ್ತು ಮಾಹಿತಿಯ ಕಣಜವಾಗಿತ್ತು. ಸುಮಾರು 70ಕ್ಕೂ ಹೆಚ್ಚು ಶಾಲೆಗಳ 7000ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಪ್ರದರ್ಶನದಲ್ಲಿ ಭಾಗವಹಿಸಿ, ವೇದಾಂತದ ಆಳವಾದ ತತ್ವಗಳಿಗೆ ವೈಜ್ಞಾನಿಕ ರೂಪವನ್ನು ಕಂಡುಕೊಂಡರು.

### ರೋಬೋಟಿಕ್ ಕಣ್ಣು

ಮನುಷ್ಯನ ಕಣ್ಣಿನ ಸೂಕ್ಷ್ಮತೆಯನ್ನು ವಿವರಿಸುವ ಬೃಹತ್ ಗಾತ್ರದ 'ರೋಬೋಟಿಕ್ ಕಣ್ಣು' ಮತ್ತು ವರ್ಚುವಲ್ ರಿಯಾಲಿಟಿ (ಗಿಖ) ಹೆಡ್ಸೆಟ್ಗಳ ಮೂಲಕ ವೇದಾಂತವನ್ನು ಅನುಭವಕ್ಕೆ ತಂದುಕೊಟ್ಟಿದ್ದು ಮಕ್ಕಳ ಅಚ್ಚುಮೆಚ್ಚಾಗಿತ್ತು.

### ಜ್ಞಾನ ಒಪ್ಪಂದ

ವಿಜ್ಞಾನ ಮತ್ತು ವೇದಾಂತದ ಹೆಚ್ಚಿನ ಸಂಶೋಧನೆಗಾಗಿ ಮತ್ತು ಭವಿಷ್ಯದಲ್ಲಿ ಇಂತಹ ಆವಿಷ್ಕಾರಗಳನ್ನು ಪ್ರೋತ್ಸಾಹಿಸಲು 'ಪರಮ್ ಫೌಂಡೇಶನ್' ಮತ್ತು 'ವೇದಾಂತ ಭಾರತಿ' ಸಂಸ್ಥೆಗಳ ನಡುವೆ ಮಹತ್ವದ ಒಪ್ಪಂದಕ್ಕೆ ಸಹಿ ಹಾಕಲಾಯಿತು.

# ಎತ್ತಿನಹೊಳೆ ಕಾಮಗಾರಿ ಕಳಪೆ ಸೂರಜ್ ರೇವಣ್ಣ ಆರೋಪ



**ಆಲೂರು:** ಬಯಲು ಸೀಮೆಗೆ ನೀರೊದಗಿಸುವ ಮಹತ್ವಾಕಾಂಕ್ಷೆಯ ಎತ್ತಿನಹೊಳೆ ಯೋಜನೆಯ ಕಾಮಗಾರಿಯು ಸಂಪೂರ್ಣ ಕಳಪೆ ಗುಣಮಟ್ಟದಿಂದ ಕೂಡಿದ್ದು, ಸಾವಿರಾರು ಕೋಟಿ ರೂಪಾಯಿ ಸಾರ್ವಜನಿಕರ ತೆರಿಗೆ ಹಣವು ನೀರಿನಲ್ಲಿ ಹೋಮ ಮಾಡಿದಂತಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಡಾ.ಸೂರಜ್ ರೇವಣ್ಣ ಅಸಮಾಧಾನ ವ್ಯಕ್ತಪಡಿಸಿದರು.

ಆಲೂರು ತಾಲೂಕಿನಲ್ಲಿ ಹಾದು ಹೋಗಿರುವ ಎತ್ತಿನಹೊಳೆ ಯೋಜನೆ ನಾಲೆ ಪ್ರದೇಶದಲ್ಲಿ ಚಾನಲ್ ತಡೆಗೋಡೆ ಕುಸಿದಿರುವ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರ ಜೊತೆ ಮಾತನಾಡಿದರು. ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ರಾಮನಗರ, ಬೆಂಗಳೂರು ಗ್ರಾಮಾಂತರ, ಹಾಸನ ಮತ್ತು ಚಿಕ್ಕಮಗಳೂರು ಜಿಲ್ಲೆಗಳ ಸುಮಾರು 68 ಲಕ್ಷ ಜನರಿಗೆ ಕುಡಿಯುವ ನೀರು ಒದಗಿಸುವುದು ಈ ಯೋಜನೆಯ ಮುಖ್ಯ ಗುರಿಯಾಗಿದೆ. ಆದರೆ, ಆಲೂರು ತಾಲೂಕಿನ ಕೆಲವು ಆಯ್ದ ಗ್ರಾಮಗಳಲ್ಲಿ ಈ ಯೋಜನೆಯ ಕಾಲುವೆಗಳಲ್ಲಿ ನೀರು ಹರಿಯುವ ಮುನ್ನವೇ ನಾಲೆಗಳು ಅಲ್ಲಲ್ಲಿ ಕುಸಿದು ಹೋಗಿರುವುದು, ಕಳಪೆ ಕಾಮಗಾರಿಗೆ ಹಿಡಿದ ಕೈಗನ್ನಡಿಯಂದಂತಿದೆ. ಈ ಪ್ರದೇಶಗಳಿಗೆ ಜಲ ಸಂಪನ್ಮೂಲ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಭೇಟಿ ನೀಡಿ ಕಾಮಗಾರಿಯಲ್ಲಿ ಆಗಿರುವ ಬೇಜವಾಬ್ದಾರಿತನಕ್ಕೆ ಹೊಣೆಗಾರರಾಗಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಮಾಜಿ ಸಚಿವ ಎಚ್.ಕೆ ಕುಮಾರಸ್ವಾಮಿ, ಎಚ್.ಡಿ.ಸಿ.ಸಿ ಬ್ಯಾಂಕ್ ನಿರ್ದೇಶಕ ಕೆ.ಎಸ್ ಮಂಜೇಗೌಡ, ಹಾಸನ ಕೆಎಂಎಫ್ ನಿರ್ದೇಶಕ ಪಿ.ಎಲ್ ನಿಂಗರಾಜು, ಹಾಸನ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಎಸ್.ಎನ್ ಪ್ರಕಾಶ್, ತಾ.ಪಂ ಮಾಜಿ ಸದಸ್ಯ ಸಿ.ವಿ ಲಿಂಗರಾಜು, ಮುಖಂಡರಾದ ಓಂಕಾರ ಮೂರ್ತಿ, ಶಾಂತರಾಜು, ನಿಂಗರಾಜು, ರಾಜಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಿರಿಧಾನ್ಯ ಹಬ್ಬ, ವಾಣಿಜ್ಯ ಮೇಳ




**ಹಾಸನ:** ಆಲೂಗೆಡ್ಡೆ ಬೆಳೆಗೆ ಹಾಸನ ಜಿಲ್ಲೆ ದೇಶದಲ್ಲೇ ಪ್ರಸಿದ್ಧಿ ಪಡೆದಿದ್ದರೂ ಕಳೆದ 10 ವರ್ಷಗಳಿಂದ ಈ ಬೆಳೆ ವಿಸ್ತೀರ್ಣ ಗಣನೀಯವಾಗಿ ಕುಸಿದಿದೆ. ಆಲೂಗಡ್ಡೆ ಬೆಳೆಗೆ ಪುನಶ್ಚೇತನ ನೀಡುವ ಉದ್ದೇಶದಿಂದ ಮೇಳವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಹಾಗೂ ಕಂದಾಯ ಸಚಿವ ಕೃಷ್ಣಬೈರೇಗೌಡ ಹೇಳಿದರು.

ನಗರದ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಸಮೀಪ ಜಿಲ್ಲಾಡಳಿತ, ಜಿಪಂ ಹಾಗೂ ತೋಟಗಾರಿಕೆ ಇಲಾಖೆಯಿಂದ ಆಯೋಜಿಸಲಾದ ಆಲೂಗಡ್ಡೆ ಮೇಳ ಮತ್ತು ಕೃಷಿ ಇಲಾಖೆಯಿಂದ ಸಿರಿಧಾನ್ಯ ಹಬ್ಬ ಹಾಗೂ ವಾಣಿಜ್ಯ ಮೇಳವನ್ನು ಉದ್ಘಾಟಿಸಿ ಮಾತನಾಡಿದ ಅವರು, ಆಲೂಗೆಡ್ಡೆ ಮೇಳ, ಸಿರಿಧಾನ್ಯ ಪ್ರದರ್ಶನ ಮತ್ತು ಕೃಷಿ ಯಂತ್ರೋಪಕರಣಗಳ ಪ್ರದರ್ಶನ ಒಂದೇ ಸೂರಿನಡಿ ರೈತರಿಗೆ ಅರಿವು, ಜಾಗೃತಿ ಹಾಗೂ ನವೀನ ತಂತ್ರಜ್ಞಾನಗಳ ಮಾಹಿತಿ ನೀಡುವ ವೇದಿಕೆಯಾಗಿದ್ದು,

ಸಂಸದ ಶ್ರೇಯಸ್ ಪಟೇಲ್, ಶಾಸಕ ಸ್ವರೂಪ್ ಪ್ರಕಾಶ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತ ಹಾಜರಿದ್ದರು.

# ಅರಣ್ಯ ಇಲಾಖೆ ವಸತಿಗೃಹ ಕಾಮಗಾರಿಗೆ ಚಾಲನೆ

**ಸಕಲೇಶಪುರ:** ಅರಣ್ಯ ಇಲಾಖೆಯ ಯಸಳೂರು ಪ್ರಾದೇಶಿಕ ವಲಯದಲ್ಲಿ ಮುಂಚೂಣಿ ಸಿಬ್ಬಂದಿಗಾಗಿ 40 ಲಕ್ಷ ರೂ. ವೆಚ್ಚದಲ್ಲಿ ಕೈಗೊಂಡಿರುವ ವಸತಿಗೃಹ ನಿರ್ಮಾಣ ಕಾಮಗಾರಿಗೆ ಶಾಸಕ ಸಿಮೆಂಟ್ ಮಂಜು ಭೂಮಿಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿ, ಅರಣ್ಯ ಇಲಾಖೆ ಸಿಬ್ಬಂದಿ ಕರ್ತವ್ಯ ನಿರ್ವಹಣೆ ಜೊತೆಗೆ ಸಾರ್ವಜನಿಕರೊಂದಿಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಗ್ರಾಮೀಣ ಪ್ರದೇಶಗಳಲ್ಲಿ ಅರಣ್ಯದ ಮೇಲೆ ಅವಲಂಬಿತವಾಗಿರುವ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮಾನವೀಯ ಮನೋಭಾವ ಅರಣ್ಯ ಸಿಬ್ಬಂದಿಗಳಲ್ಲಿ ಇರಬೇಕು. ಸಾರ್ವಜನಿಕರೊಂದಿಗೆ ಗೌರವಯುತವಾಗಿ ವರ್ತಿಸುವುದು, ಅವರ ಅಹವಾಲುಗಳನ್ನು ಸಹಾನುಭೂತಿಯಿಂದ ಆಲಿಸುವುದು ಹಾಗೂ ಸಮಸ್ಯೆಗಳಿಗೆ ಸಾಧ್ಯವಾದಷ್ಟು ತ್ವರಿತ ಪರಿಹಾರ ನೀಡುವುದರಿಂದ ಇಲಾಖೆಯ ಮೇಲಿನ ವಿಶ್ವಾಸ ಮತ್ತಷ್ಟು ಬಲವಾಗುತ್ತದೆ ಎಂದರು. ಯಸಳೂರು ಸಹಾಯಕ ಉಪ ಸಂರಕ್ಷಣಾಧಿ ಕಾರಿ ಹಾಗೂ ಯಸಳೂರು ವಲಯ ಅರಣ್ಯಾಧಿಕಾರಿ ರೇವಣ್ಣ ಸಿದ್ದಯ್ಯ ಬಿ. ಹಿರೇಮಠ್ ಸೇರಿದಂತೆ ಅರಣ್ಯ ಸಿಬ್ಬಂದಿ, ಮುಖಂಡರು ಉಪಸ್ಥಿತರಿದ್ದರು.



# ಗಾಂಜಾ ಮಾರಾಟಕ್ಕೆ ಯತ್ನ ಬಿಹಾರ ಮೂಲದ ಯುವಕ ಬಂಧನ

**ಬೇಲೂರು:** ತಾಲೂಕಿನ ಕಡೇಗರ್ಜೆ ಗ್ರಾಮದ ಬಸ್ ನಿಲ್ದಾಣ ಸಮೀಪ ಗಾಂಜಾ ಮಾರಾಟ ಮಾಡಲು ಯತ್ನಿಸುತ್ತಿದ್ದ ಆರೋಪದ ಮೇಲೆ ಬಿಹಾರ ಮೂಲದ ವ್ಯಕ್ತಿಯನ್ನು ಅರೇಹಳ್ಳಿ ಪೊಲೀಸರು ಬಂಧಿಸಿದ್ದಾರೆ.


ಶಿವಂಸಿಂಗ್ (22) ಬಂಧಿತ ವ್ಯಕ್ತಿ. ಈತನಿಂದ ಗಾಂಜಾ ಸೊಪ್ಪು ಹಾಗೂ 1500 ರೂ. ನಗದು ವಶಕ್ಕೆ ಪಡೆದಿದ್ದಾರೆ. ಈತ ಬಿಹಾರದ ಮೋತಿಹಾರಿ ಜಿಲ್ಲೆಯವನಾಗಿದ್ದು, ಪ್ರಸ್ತುತ ಬೇಲೂರು ಪಟ್ಟಣದಲ್ಲಿ ವಾಸವಾಗಿದ್ದಾನೆ.

ಬುಧವಾರ ಸಂಜೆ ಖಚಿತ ಮಾಹಿತಿ ಆಧರಿಸಿ ಪಿ.ಎಸ್.ಐ ಶೋಭಾ ಮತ್ತು ಸಿಬ್ಬಂದಿ ಸಂಶುದ್ದೀನ್ ಸೊನ್ನದ್, ರವಿಚಂದ್ರ, ಮಂಜುನಾಥ ಹಾಗೂ ದರ್ಶನ್ ಅವರು ಆರೋಪಿಯನ್ನು ತಡೆದು ವಿಚಾರಣೆಗೊಳಪಡಿಸಿದಾಗ ಗಾಂಜಾ ಮಾರಾಟ ಬೆಳಕಿಗೆ ಬಂದಿದೆ.



# ರೈತರ ಸಮಸ್ಯೆಗಳ ಪರಿಹರಿಸಿ

## ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಶ್ರೀರೂಪ ಸೂಚನೆ



ಚಾಮರಾಜನಗರ, ರೈತರ ಸಮಸ್ಯೆ ಪರಿಹರಿಸಲು ಸ್ಥಳಕ್ಕೆ ಖುದ್ದಾಗಿ ಭೇಟಿ ನೀಡಿ ಸಮಸ್ಯೆಗಳ ಬಗ್ಗೆ ಭೌತಿಕ ಪರಿಶೀಲನೆ ನಡೆಸಿ ಶೀಘ್ರ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಶ್ರೀರೂಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ರೈತರ ಸಮಸ್ಯೆಗಳ ಕುರಿತು ಚರ್ಚಿಸುವ ಸಂಬಂಧ ನಡೆದ ಜಿಲ್ಲಾಮಟ್ಟದ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲೆಯಲ್ಲಿ ರೈತರು, ಸಾರ್ವಜನಿಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರ ಕುಂದುಕೊರತೆಗಳನ್ನು ಆಲಿಸಿ ಪರಿಹರಿಸಲು ಮುಂದಾಗುವಂತೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಸಭೆಯ ಆರಂಭದಲ್ಲಿ ಜಿಲ್ಲಾಧಿಕಾರಿ ಯವರು ರೈತರ ಕುಂದುಕೊರತೆ, ಅಹವಾಲುಗಳನ್ನು ಆಲಿಸಿದರು.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಗೆ ಬರುವ ಹಿಮವದ್ ಗೋಪಾಲಸ್ವಾಮಿ ಬೆಟ್ಟದಲ್ಲಿ ಚಿತ್ರೀಕರಣಕ್ಕೆ ಹಾಗೂ ಕೆ.ಎಸ್.ಆರ್.ಟಿ.ಸಿ ಬಸ್‌ಗಳನ್ನು ಹೊರತುಪಡಿಸಿ ಬೆಟ್ಟಕ್ಕೆ ಅನಧಿಕೃತವಾಗಿ ಖಾಸಗಿ ವಾಹನಗಳ ಸಂಚರಿಸುತ್ತಿವೆ. ಸ್ಥಳೀಯ ವಾಹನಗಳಿಗೆ ಅವಕಾಶ ಇಲ್ಲದ್ದರಿಂದ ಜನರ ಧಾರ್ಮಿಕ ಭಾವನೆಗಳಿಗೆ ಧಕ್ಕೆಯಾಗುತ್ತಿದೆ. ಬೆಟ್ಟಕ್ಕೆ ಹೋಗುವ ಸಾರ್ವಜನಿಕರಿಗೆ ಬಸ್ ಹತ್ತುವ ಸ್ಥಳದಲ್ಲಿ ಕನಿಷ್ಠ ಮೂಲಸೌಲಭ್ಯಗಳನ್ನು ಒದಗಿಸುವಂತೆ ರೈತ ಮುಖಂಡರು ಸಭೆಯ ಗಮನಕ್ಕೆ ತಂದರು.

ಕೇರಳದಿಂದ ಜೈವಿಕ ತ್ಯಾಜ್ಯವನ್ನು ರೈತರ ಜಮೀನಿನಲ್ಲಿ ಸುರಿಯಲಾಗುತ್ತಿದೆ. ಜಮೀನಿನಲ್ಲಿ ಬೆಳೆದಿರುವ ತೇಗದ ಮರ ಕಡಿಯಲು ಅನುಮತಿಯಲ್ಲಿ ವಿಳಂಬ. ಕೋತಿ, ನವಿಲು, ಹಂದಿ ದಾಳಿಯನ್ನು ಮಾನವ–ಪ್ರಾಣ ಸಂಘರ್ಷಕ್ಕೆ ಸೇರ್ಪಡೆ ಮಾಡಿಲ್ಲದಿರುವುದು, ಸಣ್ಣ ರಸ್ತೆಗಳಲ್ಲಿ ಗಣಿಗಾರಿಕೆಯ ಅಧಿಕ ಭಾರದ ಟಿಪ್ಪರ್, ಕ್ರಶರ್ ಗಳ ಓಡಾಟದಿಂದ ಜನರಿಗೆ ತೊಂದರೆ ಸೇರಿದಂತೆ ಇತರೆ ಸಮಸ್ಯೆಗಳು ಸಭೆಯಲ್ಲಿ ರೈತರಿಂದ ಪ್ರಸ್ತಾಪವಾದವು.

ಸಮಸ್ಯೆಗಳನ್ನು ಆಲಿಸಿದ ಜಿಲ್ಲಾಧಿಕಾರಿ ಶ್ರೀರೂಪ ಬಳಿಕ ಮಾತನಾಡಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಯಲ್ಲಿ ಪ್ರಸ್ತಾಪವಾಗಿರುವ ಸಮಸ್ಯೆಗಳ ಕುರಿತು ಹಿಮವದ್ ಗೋಪಾಲಸ್ವಾಮಿ ಬೆಟ್ಟದಲ್ಲಿ ಸಭೆ ಏರ್ಪಡಿಸಿ ಚರ್ಚಿಸಿ ಶೀಘ್ರವಾಗಿ ಪರಿಹರಿಸಲು ಕ್ರಮ ವಹಿಸಲಾಗುವುದು. ರೈತರ ಜಮೀನಿನಲ್ಲಿ ಕೇರಳದವರು ತ್ಯಾಜ್ಯ ಸುರಿಯದಂತೆ ತಡೆಯಲು ಮದ್ದೂರು ಗ್ರಾಮದಲ್ಲಿ ಚೆಕ್‌ಪೋಸ್ಟ್ ತೆರೆದು ಸಿ.ಸಿ.ಟಿ.ವಿ ಅಳವಡಿಸಲಾಗುವುದು. ತೇಗದ ಮರ ಕಡಿಯುವ ಸಂಬಂಧ ಇರುವ ನಿಯಮಗಳನ್ನು ಸಡಿಲಗೊಳಿಸಲು ಉನ್ನತ ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು. ಅಕಾಲಿಕ ಮಳೆಯಿಂದ ಉಂಟಾದ ಬೆಳೆನಷ್ಟಕ್ಕೆ ಶೀಘ್ರ ಪರಿಹಾರ ಒದಗಿಸಬೇಕು ಎಂದರು.

ಅಗತ್ಯಕ್ಕಿಂತ ಹೆಚ್ಚಿನ ಭಾರದ ವಾಹನಗಳು ಸಾಮಾನ್ಯ ರಸ್ತೆಯಲ್ಲಿ ಸಂಚರಿಸುವುದರಿಂದ ರಸ್ತೆಗಳು ಬೇಗ ದುರಸ್ಥಿಗೊಳಗಾಗಲಿವೆ. ಇದನ್ನು ತಡೆಯಲು ಹಾಗೂ ಅಧಿಕ ಭಾರದ ಟಿಪ್ಪರ್ ಓಡಾಟ ನಿಯಂತ್ರಿಸಲು ರಸ್ತೆ ಭಾರ ಮಿತಿ ಫಲಕ ಅಳವಡಿಸಲು ಸಂಬಂಧಪಟ್ಟ ಅಧಿಕಾರಿಗಳು ಮುಂದಾಗಬೇಕು. ಅಕ್ರಮ ಗಣ ಗಾರಿಕೆಗೆ ಕಡಿವಾಣ ಹಾಕಲು ಕೊತ್ತಲವಾಡಿ ಹಾಗೂ ಹೆಗ್ಗೋತಾರ ನಡುವೆ ಆರ್.ಟಿ.ಓ ಚೆಕ್‌ಪೋಸ್ಟ್ ತೆರೆಯಬೇಕು. ಗಣ ಗಾರಿಕೆ ನಡೆಯುವ ಸುತ್ತಲಿನ ಪ್ರದೇಶಗಳಲ್ಲಿ ಜನರಿಗೆ ತೊಂದರೆಯಾಗದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಸಂಬಂಧ ಸದ್ಯದಲ್ಲಿಯೇ ಕ್ವಾರಿ ಹಾಗೂ ಕ್ರಷರ್ ಮಾಲೀಕರ ಸಭೆ ಕರೆದು ಚರ್ಚಿಸಲಾಗುವುದು ಎಂದು ತಿಳಿಸಿದರು. ಜಿಲ್ಲೆಯ ಗ್ರಾಮೀಣ ಪ್ರದೇಶಗಳಿಗೆ ಬಸ್ ಸೌಲಭ್ಯ ಸಮರ್ಪಕವಾಗಿರಬೇಕು. ಯಳಂದೂರಿನ ಅಂಬಳೆ ಗ್ರಾಮಕ್ಕೆ ಈವರೆಗೂ ಬಸ್ ಸೌಲಭ್ಯವಿರುವುದಿಲ್ಲ. ಇದರಿಂದ ಶಾಲಾ ಮಕ್ಕಳಿಗೆ ಹಾಗೂ ಕೆಲಸಕ್ಕೆ ಹೋಗಿ ಬರುವವರಿಗೆ ತೀವ್ರ ತೊಂದರೆಯಾಗುತ್ತಿದೆ. ಗುಂಡ್ಲುಪೇಟೆ ತಾಲೂಕಿನ ಬೆಟ್ಟಳ್ಳಿ ಗ್ರಾಮದಲ್ಲಿಯೂ ಇದೇ ಸಮಸ್ಯೆ ಎದುರಾಗಿದೆ. ಕೆ.ಎಸ್.ಆರ್.ಟಿ.ಸಿ ಅಧಿಕಾರಿಗಳು ಈ ಬಗ್ಗೆ ತುರ್ತಾಗಿ ಕ್ರಮ ವಹಿಸಬೇಕು ಎಂದು ಸೂಚಿಸಿದರು. ರೈತ ಮುಖಂಡರಾದ ಕಟ್ನವಾಡಿ ಗುರುಪ್ರಸಾದ್, ಮಹದೇವಪ್ಪ, ಸಂಪತ್, ಇತರೆ ರೈತ ಮುಖಂಡರು, ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# 4ರಂದು ಮಹದೇಶ್ವರಸ್ವಾಮಿ ದೇವಸ್ಥಾನದ ಗೋಲಕಗಳ ಎಣಿಕೆ

ಚಾಮರಾಜನಗರ, ಮಹದೇಶ್ವರ ಬೆಟ್ಟದ ಮಹದೇಶ್ವರಸ್ವಾಮಿ ದೇವಸ್ಥಾನದ ಗೋಲಕಗಳ ಎಣ ಕೆ ಕಾರ್ಯವನ್ನು ಫೆ 4 ರಂದು ಬೆಳಿಗ್ಗೆ ಬೆಟ್ಟದ ಬಸ್ ನಿಲ್ದಾಣದಲ್ಲಿರುವ ವಾಣ ಜ್ಯ ಸಂಕೀರ್ಣ ಕಟ್ಟಡದ ಮೊದಲ ಮಹಡಿಯ ವಿಶ್ರಾಂತಿ ಗೃಹದಲ್ಲಿ ಕೊಳ್ಳೇಗಾಲ ಶಾಖೆಯ ಬ್ಯಾಂಕ್ ಆಫ್ ಬರೋಡ ಸಿಬ್ಬಂದಿ ಸಹಯೋಗದೊಡನೆ ಸೂಕ್ತ ಪೊಲೀಸ್ ಬಂದೋ ಬಸ್ತ್‌ನೊಂದಿಗೆ ನಡೆಸಲಾಗುವುದು ಎಂದು ಮಲೈ ಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಗ್ಯಾರಂಟಿ ಸಾಧಕ ಬಾಧಕ ಪರಿಶೀಲಿಸಿ ವರದಿ ನೀಡಿ



ಚಾಮರಾಜನಗರ. ಬಡವರ ಮತ್ತು ಮಹಿಳೆಯರ ಅರ್ಥಿಕ ಸ್ವಾವಲಂಬನೆಗಾಗಿ ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದು, ಅವುಗಳು ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುತ್ತಿಯೋ ಎಂಬುದರ ಬಗ್ಗೆ ತಾಲ್ಲೂಕು ಮಟ್ಟದ ಯೋಜನಾಧಿಕಾರಿಗಳು ಪರಿಶೀಲಿಸಿ ಜಿಲ್ಲಾಮಟ್ಟದ ಅಧಿಕಾರಿಗಳಿಗೆ ವರದಿಸಲ್ಲಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಚಾಮರಾಜನಗರ ತಾಲ್ಲೂಕು ಅಧ್ಯಕ್ಷ ಎಸ್. ಸೋಮೇಶ್ವರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿಂದು ನಡೆದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕುಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಹೋಬಳಿ ಪಂಚಾಯಿತಿಮಟ್ಟದಲ್ಲಿ ಗ್ಯಾರಂಟಿ ಸಮಿತಿ ಸಭೆಗಳನ್ನು ನಡೆಸಿದ ಪರಿಣಾಮವಾಗಿ ತಳಮಟ್ಟದ ಸಮಸ್ಯೆಗಳು ತಿಳಿಯುತ್ತಿವೆ.

ಗೃಹಲಕ್ಷ್ಮೀ, ಶಕ್ತಿಯೋಜನೆ, ಗೃಹಜ್ಯೋತಿ, ಯುವನಿಧಿ, ಅನ್ನಭಾಗ್ಯ ಯೋಜನೆ ಕುರಿತು, ಫಲಾನುಭವಿಗಳ ಅಭಿಪ್ರಾಯ ಸಂಗ್ರಹ ಮಾಡಿ, ಅದರ ವಿಡಿಯೋ ತುಣುಕುಗಳನ್ನು ತುರ್ತಗಿ ಜಿಲ್ಲಾಅನುಷ್ಠಾನ ಸಮಿತಿಗೆ ಸಲ್ಲಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ಮಾಡಿದರು. ಚಾಮರಾಜನಗರ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರಾದ ಮಂಜುಳಾ, ಮರಿಯಾಲದಹುಂಡಿಕುಮಾರ್, ಮೂಡಳ್ಳಿ ರಾಜೇಶ್, ರಾಜು, , ಮಾದಾಪುರ ಕುಮಾರ್ಸ್ವಾಮಿ ಚಿನ್ನಸ್ವಾಮಿ, ಮಲ್ಲಿಕಾರ್ಜುನ್ ಲಿಂಗನಪುರ, ರಂಗಸ್ವಾಮಿ, ಚಂದುಕಟ್ಟೆಮೋಳೆಗಣೇಶ, ರಮೇಶ್, ತಾಪಂಇಒ ಗಿರಿಧರ್, ಯೋಜನಾ ಧಿಕಾರಿ ಕಿರಣ್ ಕುಮಾರ್, ವಿವಿಧ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳು, ಹಾಜರಿದ್ದರು.

### ಮಹಮದ್ ಅಸ್ಗರ್ ಹೇಳಿಕೆ

# ಸಾಧನೆ ಮಾಡಬೇಕಾದರೆ ಶಿಕ್ಷಣವೇ ಅಸ್ತ್ರ

ಚಾಮರಾಜನಗರ, ಮಕ್ಕಳ ಪ್ರತಿಭಾಪ್ರದರ್ಶನಕ್ಕೆ ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳು ಪೂರಕವಾಗಿವೆ ಎಂದು ಚಾಮರಾಜನಗರ–ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಹಮದ್ ಅಸ್ಗರ್ (ಮುನ್ನಾ) ಅಭಿಪ್ರಾಯಪಟ್ಟರು.

ನಗರದ ಗಾಳಿಪುರ ಬಡಾವಣೆಯಲ್ಲಿನ ಗ್ಯಾಲಕ್ಸಿ ಆಂಗ್ಲಮಾಧ್ಯಮ ಶಾಲೆಯ 15 ನೇ ಶಾಲಾವಾರ್ಷಿಕೋತ್ಸವ ಕಾರ್ಯಕ್ರಮವನ್ನು ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಬೇಕಾದರೆ ಶಿಕ್ಷಣಬೇಕೆಬೇಕು, ಸಮುದಾಯದವರು ತಮ್ಮ ಮಕ್ಕಳಿಗೆ ಉನ್ನತಮಟ್ಟದ ಶಿಕ್ಷಣಕೊಡಿಸಬೇಕು, ತಾವು ಮುಂದೇನಾಗಬೇಕು ಎಂಬುದರ ಬಗ್ಗೆ ವಿದ್ಯಾರ್ಥಿಗಳು ಈಗಿನಿಂದಲೇ ಗುರಿಯಿಟ್ಟುಕೊಳ್ಳಬೇಕು, ಗುರುಹಿರಿಯ ರಿಗೆ ಗೌರವ 'ಕೊಡಬೇಕು, ಕಲಿತಶಾಲೆಗೆ ಕೀರ್ತಿ ತರಬೇಕು ಎಂದು ಸಲಹೆ ನೀಡಿದರು. ಸಾಲುಮರದ ಸಿ.ಎಂ.ವೆಂಕಟೇಶ್ ಮಾತನಾಡಿ, ನಮಗೆ ಶುದ್ದಗಾಳಿನೀರುಸಿಗಬೇಕಾದರೆ ಪರಿಸರ ಸಂರಕ್ಷಣೆ ಮಾಡಬೇಕು, ಚಾಮರಾಜನಗರದಲ್ಲಿ



ನಮ್ಮ ಈಶ್ವರಿ ಮ್ಯೂಸಿಕಲ್ ಸಂಸ್ಥೆಯಿಂದ ಗಿಡಗಳನ್ನು ನೆಟ್ಟುಪೋಷಿಸುವ ಕಾರ್ಯ ಹಮ್ಮಿಕೊಳ್ಳುತ್ತ ಬರುತ್ತಿದ್ದೇವೆ ಎಂದರು. ಇದೇ ಸಂದರ್ಭದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಆರ್.ಎನ್.ಸಿದ್ದಲಿಂಗಸ್ವಾಮಿ, ಸಾಲುಮರದ ಸಿ.ಎಂ.ವೆಂಕಟೇಶ್ ಶಾರ್ಪ್ ಶೂಟರ್ ಸ್ಪರ್ಧೆಯಲ್ಲಿ ಚಿನ್ನದ ಪದಕ ವಿಜೇತರಾದ ಇಮ್ರಾನ್ ಅಹಮದ್ ಅವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಹೆಚ್ಚು ಅಂಕಪಡೆದ ಎಂಟಿಎಸ್ ಶಾಲಾ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಶಾಲಾವಿದ್ಯಾರ್ಥಿ ಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು, ಜಾಮೀಯಾಮಸೀದಿಯ ಮಹಮದ್ ಆಸಿಫ್, ಮಹಮದ್ ಕಲೀಂ, ಜಿಪಂ ಕೆಡಿಪಿ ಸದಸ್ಯ ಸಯ್ಯದ್ ಮುಸಾಯದ್ ನಗರಸಭೆ ಮಾಜಿ ಸದಸ್ಯ ಅತೀಕ್ ಅಹಮದ್, ಮೌಲಾನಾ ಆಜಾದ್ ಹಾಸ್ಟೆಲ್ ಸದಸ್ಯ ಶೋಯಬ್ ಖಾನ್, ನವಾಜ್ ಅಹಮದ್, ಸಿ.ಕೆ.ನಯಾಜುಲ್ಲ, ಮಹಮದ್ ವಾಸೀಂ, ಸಯ್ಯದ್ ಇಮ್ರಾನ್ ಜಬ್ಬಾರ್, ಮಹಮದ್ ಫುರ್ಖಾನ್, ಗ್ಯಾಲಕ್ಸಿ ಆಂಗ್ಲಮಾಧ್ಯಮ ಶಾಲಾ ಕಾರ್ಯದರ್ಶಿ ಮಹಮದ್ ಅಜೀಂ, ಮಕ್ಕಳ ಪೋಷಕರು, ಶಾಲಾಮುಖ್ಯಶಿಕ್ಷಕಿ ಮೆಹಬೂಬ್ ಸೇರಿದಂತೆ ಸಹಶಿಕ್ಷಕರು ಹಾಜರಿದ್ದರು,


# ಕಾಂಗ್ರೆಸ್ ತೊರೆದು ಜೆಡಿಎಸ್ ಸೇರ್ಪಡೆ

**ಕೆ.ಆರ್.ನಗರ:** ತಾಲೂಕಿನ ಬಡಕನ ಕೊಪ್ಪಲು ಗ್ರಾಮದ ಕುರುಬ ಸಮಯದಾಯದ 45ಕ್ಕೂ ಹೆಚ್ಚು ಮಂದಿ ಮಾಜಿ ಸಚಿವ ಸಾ.ರಾ.ಮಹೇಶ್ ಮತ್ತು ವಿಧಾನ ಪರಿಷತ್ ಸದಸ್ಯ ಅಡಗೂರು ವಿಶ್ವನಾಥ್ ಅವರ ಪುತ್ರ ಅಮಿತ್ ವಿ.ದೇವರಟ್ಟಿ ನೇತೃತ್ವದಲ್ಲಿ ಕಾಂಗ್ರೆಸ್ ತೊರೆದು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಂಡರು.

ಇದೇ ವೇಳೆ ಮಾತನಾಡಿದ ಜಿಪಂ ಮಾಜಿ ಸದಸ್ಯ ಅಮಿತ್ ವಿ.ದೇವರಹಟ್ಟಿ, 15 ವರ್ಷಗಳ ಶಾಸಕರಾಗಿದ್ದ ಸಾ.ರಾ.ಮಹೇಶ್ ಹತ್ತಾರು ಜನ ಪರ ಕೆಲಸ ಮಾಡಿ ರಾಜ್ಯಕ್ಕೆ ಮಾದರಿಯಾಗಿದ್ದಾರೆ ಎಂದರು.

ಮಾಜಿ ಸಚಿವ ಸಾ.ರಾ. ಮಹೇಶ್ ಮಾತನಾಡಿ, ನಾನು ಶಾಸಕ ಮತ್ತು ಸಚಿವನಾಗಿದ್ದ ಅವಧಿಯಲ್ಲಿ ಜಾತಿ ಮತ್ತು ಪಕ್ಷಪಾತ ಮಾಡದೆ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ್ದು, ಮುಂದೆಯು ನಿಮ್ಮನ್ನು ಗೌರವದಿಂದ ನೋಡಿಕೊಳ್ಳುತ್ತೆ ಎಂದು ಭರವಸೆ ನೀಡಿದರು.

ತಾಪಂ ಮಾಜಿ ಅಧ್ಯಕ್ಷ ನಾಗಣ್ಣ, ಹಂಪಾಪುರ ಗ್ರಾಪಂ ಮಾಜಿ ಅಧ್ಯಕ್ಷ ಗುರುಪ್ರಸಾದ್, ಬಡಕನ ಮಾಜಿ ಸದಸ್ಯ ಮಂಜುನಾಥ್, ಮುಖಂಡರಾದ ಜಲೇಂದ್ರ ರವಿಕುಮಾರ್ ಅವರ ಸಮ್ಮುಖದಲ್ಲಿ ಬಡಕನಕೊಪ್ಪಲು ಗ್ರಾಮದ ಕುರುಬ ಸಮಾಜದ ಮುಖಂಡರಾದ ಪ್ರಮೋದ್, ಪ್ರಸನ್ನ, ಗೋವಿಂದ, ಕಿರಣ್, ಮಹದೇವ, ಚಂದನ್, ಮಹೇಂದ್ರ, ಸಂಜಯ್, ರಾಜೇಶ್, ವಿನಯ್, ಪ್ರತಾಪ್, ಜಯ ರಾಮ್, ಮಹೇಶ್, ಅಕ್ಕಮಹದೇವಿ, ಮಂಜು, ಕುಮಾರ್, ಪ್ರದೀಪ್, ಶ್ರೀನಿವಾಸ್, ನಾಗೇಗೌಡ, ಜಯಪಾಲ, ಪುಟ್ಟೇಗೌಡ, ರೇಖಾ, ರುದ್ರೇಶ್, ಸಾಗರ್, ಬಸವ, ಗಿರೀಶ್, ದೇವರಾಜು, ಪ್ರವೀಣ, ಬಿ.ಎಸ್.ಮಹದೇವ, ಬಿ.ಎಸ್.ಮಹದೇವ, ಬಿ.ಕೆ.ಪ್ರಮೋದ, ಕಾರ್ತಿಕ್, ಮೋಹನ್, ಕೀರ್ತಿರಾಜ್, ಶಿವು, ಮಲ್ಲೇಗೌಡ, ರಾಘವ, ವಿಶ್ವನಾಥ, ಬಿ.ಎನ್.ಚೇತನ್, ಬಿ.ಆರ್. ಮಹೇಶ, ಅಶೋಕ, ಯೋಗೇಶ, ಕಾಂತರಾಜು, ನಾಗರಾಜು, ದರ್ಶನ್, ನಿತಿನ್, ಪುಟ್ಟೇಗೌಡ, ಲಂಕೇಶ್ ಕಾಂಗ್ರೆಸ್ ತೊರೆದು ಜೆಡಿಎಸ್ ಸೇರ್ಪಡೆಯಾದರು.



# ಶಿಕ್ಷಣದಿಂದ ಮಾತ್ರ ಅಭಿವೃದ್ಧಿ ಸಾಧ್ಯ



**ಹಾಸನ:** ಮ್ಯಾಗ್ನೆಟ್ ಶಾಲೆಗಳು ಎಂಬ ಪರಿಕಲ್ಪನೆಯು ಸಣ್ಣ ಸಣ್ಣ ಸರಕಾರಿ ಶಾಲೆಗಳನ್ನೆಲ್ಲಾ ಎಳೆದುಕೊಂಡು ನುಂಗುತ್ತಿದೆ ಎಂದು ವಿಶ್ರಾಂತ ಪ್ರಾಧ್ಯಾಪಕ ಹಾಗೂ ಸಾಹಿತಿ ಡಾ. ರಾಜಪ್ಪ ದಳವಾಯಿ ಸಲಹೆ ನೀಡಿ ಬೇಸರ ವ್ಯಕ್ತಪಡಿಸಿದರು.

ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ, ಹಿರಿಯ ಪ್ರಶಿಕ್ಷಣಾರ್ಥಿಗಳಿಂದ ಗುರುವಾರ ನಡೆದ ಡಾ. ಆರ್. ಓಬಳೇಶಘಟ್ಟಿಯವರ ನಾಲ್ಕು ಬೃಹತ್ ಕೃತಿಗಳ ಲೋಕಾರ್ಪಣೆ ಹಾಗೂ ಅಭಿನಂದನಾ ಗ್ರಂಥ ಬಿಡುಗಡೆ ಕಾರ್ಯಕ್ರಮದಲ್ಲಿ ಕನ್ನಡ ಭಾಷಾ ಬೋಧನೆ ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಯಾವುದೇ ದೇಶ ಅಭಿವೃದ್ಧಿಯಾಗಬೇಕಾದರೆ ಶಿಕ್ಷಣದಿಂದ ಮಾತ್ರ ಸಾಧ್ಯ. ಅದರಲ್ಲೂ ಹೆಣ್ಣು ಮಕ್ಕಳನ್ನು ಮನೆ ಕೆಲಸಕ್ಕೆ ಸೀಮಿತಗೊಳಿಸದೆ, ಓದಿಗೆ ಕಳುಹಿಸಬೇಕು. ಮದುವೆಯಾದ ಬಳಿಕ ಓದಲು ಅವಕಾಶ ಸಿಗುವುದಿಲ್ಲ ಎಂಬ ವಾಸ್ತವವನ್ನು ಅರಿತು, ಶಿಕ್ಷಣವನ್ನು ಮುಂದುವರಿಸಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಲತಾಕುಮಾರಿ ಗಿಡಕ್ಕೆ ನೀರು ಹಾಕುವುದರ ಮೂಲಕ ಉದ್ಘಾಟಿಸಿದರು. ಜಾಗತಿಕ ಶಿಕ್ಷಣ ಪರಿಕಲ್ಪನೆ, ಭಾಷಾ ಚಿಂತನೆ ಹಾಗೂ ಸಂವಿಧಾನಾತ್ಮಕ ಮೌಲ್ಯಗಳನ್ನು ಆಧಾರವಾಗಿಸಿಕೊಂಡು ರಚಿಸಲಾದ ಡಾ. ಆರ್. ಓಬಳೇಶ ಘಟ್ಟಿಯವರ ನಾಲ್ಕು ಬೃಹತ್ ಕೃತಿಗಳನ್ನು ಮುಖ್ಯಅತಿಥಿಗಳು ಲೋಕಾರ್ಪಣೆಗೊಳಿಸಿದರು.

ಭಾರತದಲ್ಲಿ ಶಿಕ್ಷಣ ಕೃತಿಯನ್ನು ಮೈಸೂರು ಪ್ರಾದೇಶಿಕ ಶಿಕ್ಷಣ ಸಂಸ್ಥೆಯ ನಿವೃತ್ತ ಪ್ರಾಧ್ಯಾಪಕ ಡಾ. ಎನ್.ಎನ್. ಪ್ರಹ್ಲಾದ್, ನಮ್ಮ ಸಂವಿಧಾನ ಮತ್ತು ನಮ್ಮ ಸರ್ಕಾರಗಳು ಕೃತಿಯನ್ನು ಹಾಸನದ ಸಹಾಯಕ ಆಯುಕ್ತ ಎಂ.ಬಿ. ಚನ್ನಕೇಶವ ಹಾಗೂ ಸಾರ್ಥಕ ಸಂತ ಡಾ. ಆರ್. ಓಬಳೇಶಘಟ್ಟಿ ಬದುಕು, ಬರಹ ಕೃತಿಯನ್ನು ಹಾಸನ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಟಿ.ಸಿ. ತಾರಾನಾಥ್ ಲೋಕಾರ್ಪಣೆಗೊಳಿಸಿದರು.

ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ, ಬೆಂಗಳೂರು ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್, ಮೈಸೂರು ಕಾಲೇಜಿನ ಪ್ರಾಂಶುಪಾಲ ಸಿ. ಆಂಟೋನಿ, ಲೇಖಕಿ ವಾಣಿಘಟ್ಟಿ, ವಕೀಲ ಜಿ.ಕೆ. ಸುದೀಪ್, ವಿಶ್ರಾಂತ ಪ್ರಾಧ್ಯಾಪಕ ಎಸ್.ಪಿ. ಪದ್ಮಪ್ರಸಾದ್, ಹಿರಿಯ ಪತ್ರಕರ್ತರಾದ ಲೀಲಾವತಿ, ಆರ್.ಪಿ. ವೆಂಕಟೇಶಮೂರ್ತಿ, ಎಚ್.ಬಿ. ಮದನಗೌಡ, ಉದಯರವಿ, ರವಿ ನಾಕಲಗೂಡು, ಮೋಹನ್ ಕುಮಾರ್, ಮಿನಿವರ್ಗೀಸ್, ದೇವರಾಜು, ನಂಜುಂಡಪ್ಪ, ವಿಶ್ರಾಂತ ಪ್ರಾಧ್ಯಾಪಕ ಹಂಪನಹಳ್ಳಿ ಕಾಳೇಗೌಡ, ಹಿರಿಯ ಪ್ರಶಿಕ್ಷಣಾರ್ಥಿಗಳ ಒಕ್ಕೂಟದ ಸಂಚಾಲಕ ತೊರಹಳ್ಳಿ ನಿಂಗರಾಜ್ ಇತರರು ಉಪಸ್ಥಿತರಿದ್ದರು. ಆಕಾಶವಾಣಿ ನಿರೂಪಕಿ ಸುಜಲಾದೇವಿ ಕಾರ್ಯಕ್ರಮ ನಿರ್ವಹಿಸಿದರು.

# ಫೆಬ್ರವರಿ ಅಂತ್ಯದೊಳಗೆ ಪ್ರಗತಿ ಸಾಧಿಸಿ

**ಮಡಿಕೇರಿ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉಪಯೋಜನೆ ಕಾರ್ಯಕ್ರಮಗಳನ್ನು ಫೆಬ್ರವರಿ ಅಂತ್ಯದೊಳಗೆ ಪ್ರಗತಿ ಸಾಧಿಸುವಂತೆ ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಅವರ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆ ಕಾರ್ಯಕ್ರಮಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆ ಕಾರ್ಯಕ್ರಮವನ್ನು ಗಂಭೀರವಾಗಿ ಪರಿಗಣಿಸಬೇಕು. ಕಾರ್ಯಕ್ರಮ ಅನುಷ್ಠಾನದಲ್ಲಿ ವಿಳಂಬ ಮಾಡಿದಲ್ಲಿ ಗಂಭೀರವಾಗಿ ಪರಿಗಣಿಸಲಾಗುತ್ತದೆ ಎಂದು ಎಚ್ಚರಿಸಿದರು.

ವಿವಿಧ ಇಲಾಖೆಗಳ ಕಾಮಗಾರಿ ಸಂಬಂಧಿಸಿದಂತೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಲಾಗುವುದು. ಪೌರಕಾರ್ಮಿಕರಿಗೆ ಖಾಸಗಿ ಆಸ್ಪತ್ರೆಯಲ್ಲಿ ಆರೋಗ್ಯ ತಪಾಸಣೆ ಸಂಬಂಧಿಸಿದಂತೆ ಮಾಹಿತಿ ಪಡೆದ ಜಿಲ್ಲಾಧಿಕಾರಿ ಅವರು ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ಜತೆಗೆ ಖಾಸಗಿ ಆಸ್ಪತ್ರೆಗೆ ಮನವಿ ಮಾಡಿದ್ದಲ್ಲಿ ಉಚಿತವಾಗಿ ಆರೋಗ್ಯ ತಪಾಸಣೆ ನಡೆಸಲಿದ್ದಾರೆ. ಆ ನಿಟ್ಟಿನಲ್ಲಿ ಮನವಿ ಮಾಡುವಂತಾಗಬೇಕು ಎಂದು ಸಲಹೆ ನೀಡಿದರು.

ನಗರಾಭಿವೃದ್ಧಿ ಯೋಜನಾ ಶಾಖೆಯ ಯೋಜನಾ ನಿರ್ದೇಶಕ ಬಿ.ಬಸಪ್ಪ ಅವರು ಪೌರಕಾರ್ಮಿಕರಿಗೆ ಉಪಾಹಾರ ಯೋಜನೆ, ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ಬಗ್ಗೆ ಮಾಹಿತಿ ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಶೇಖರ್, ಐಟಿಡಿಪಿ ಇಲಾಖಾ ಅಧಿಕಾರಿ ಎಸ್.ಹೊನ್ನೇಗೌಡ, ಪೌರಾಯುಕ್ತ ಎಚ್.ಆರ್.ರಮೇಶ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಚಂದ್ರಶೇಖರ್, ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ರೇಷ್ಮೆ ಕೃಷಿ ಬೆಳೆ ಕ್ಷೇತ್ರೋತ್ಸವ



**ಭಾರತೀನಗರ:** ರೈತರು ರೇಷ್ಮೆ ಬೆಳೆ ಬೆಳೆಯಬೇಕಾದರೆ ಮಣ್ಣಿನ ಪರೀಕ್ಷೆ ಮಾಡಿಸಿಕೊಳ್ಳುವುದು ಒಳ್ಳೆಯ ಬೆಳವಣಿಗೆ ಎಂದು ರೇಷ್ಮೆ ಕೃಷಿ ವಿಸ್ತರಣಾ ಧಿಕಾರಿ ಎ.ಎಲ್.ಭಾಸ್ಕರ್ ತಿಳಿಸಿದರು.

ಇಲ್ಲಿಗೆ ಸಮೀಪದ ಗೌಡಯ್ಯನದೊಡ್ಡಿ ಗ್ರಾಮದಲ್ಲಿ ದ್ವಿತಳಿ(ಬಿಳಿಗೂಡು) ರೇಷ್ಮೆ ಕೃಷಿ ಬೆಳೆ ಕ್ಷೇತ್ರೋತ್ಸ ವದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರೇಷ್ಮೆ ಬೆಳೆಗೆ ಮಣ್ಣಿನ ಪರೀಕ್ಷೆ ಮಾಡಿಸುವುದರಿಂದ ಮಣ್ಣಿನ ಗುಣಮಟ್ಟ ಮತ್ತು ಬೆಳೆಯ ಸಂರಕ್ಷಣೆ ಬಗ್ಗೆ ತಿಳಿದುಕೊಳ್ಳಬಹುದು. ರಾಸಾಯಾನಿಕ ಕೀಟ ನಾಶಕಗಳನ್ನು ಕಡಿಮೆ ಬಳಸಿ ಸಾವಯವ ಗೊಬ್ಬರ ವನ್ನು ಹೆಚ್ಚು ಬಳಸಿದರೆ ಬೆಳೆ ಉತ್ತಮವಾಗಿ ಬರತ್ತದೆ ಎಂದರು.

ದ್ವಿತಳಿ ರೇಷ್ಮೆ ಗೂಡುಗಳು ಉತ್ತಮ ಬಣ್ಣ, ಆಕಾರ ಮತ್ತು ದಪ್ಪನಾದ ನೂಲು ಹೊಂದಿರುತ್ತದೆ. ಜತೆಗೆ ಹೆಚ್ಚಿನ ಲಾಭವನ್ನು ಕೂಡ ಗಳಿಸಬಹುದು. ಪ್ರಸ್ತುತ ಕೋಲಾರ ಜಿಲ್ಲೆ ದ್ವಿತಳಿ ರೇಷ್ಮೆ ಗೂಡು ಉತ್ಪಾದನೆ ಮತ್ತು ವಹಿವಾಟಿನಲ್ಲಿ ಕೋಲಾರ ಜಿಲ್ಲೆ ರಾಜ್ಯದಲ್ಲೇ ಮೊದಲ ಸ್ಥಾನವನ್ನು ಪಡೆದುಕೊಂಡಿದೆ ಎಂದರು.

ವಿಜ್ಞಾನಿ ಡಾ.ಶಾಲಿನಿ, ರೇಷ್ಮೆ ಕೃಷಿ ವಿಸ್ತರಣಾ ಧಿಕಾರಿ ಪ್ರಶಾಂತ್‌ಕುಮಾರ್, ದೊಡ್ಡರಸಿನಕೆರೆ ಗ್ರಾ.ಪಂ ಅಧ್ಯಕ್ಷ ಶರತ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಗ್ರಾ.ಪಂ ಉಪಾಧ್ಯಕ್ಷೆ ವೀಣಾ, ಶ್ರೀನಿವಾಸ್, ಜ್ಯೋತಿ ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಶಿವನಂಜೇಗೌಡ, ಕೆ.ಎಂ.ದೊಡ್ಡಿ ತಾಂತ್ರಿಕ ಸೇವಾ ಕೇಂದ್ರದ ರೇಷ್ಮೆ ವಿಸ್ತರಣಾ ಎಚ್.ಸಿ.ಸಿದ್ದರಾಮೇಶ್, ರೇಷ್ಮೆ ನಿರೀಕ್ಷಕರಾದ ಯು.ಎಸ್.ಕೃಷ್ಣ, ರೇಷ್ಮೆ ನಿರೀಕ್ಷಕರಾದ ಅರುಣ್‌ಕುಮಾರ್ ಇದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ರಸ್ತೆ ಕಾಮಗಾರಿಗೆ ಭೂಮಿಪೂಜೆ



**ಸಕಲೇಶಪುರ:** ತಾಲೂಕಿನ ಉಚ್ಚಂಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಂದೂರು ಬಳಿ ಸುಮಾರು ರೂ. 3 ಕೋಟಿ ವೆಚ್ಚದಲ್ಲಿ ಕೈಗೊಂಡಿರುವ ರಸ್ತೆ ಕಾಮಗಾರಿಗೆ ಶಾಸಕ ಸಿಮೆಂಟ್ ಮಂಜು ಭೂಮಿಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿ, ಐಗೂರುನಿಂದ ಚಿಕ್ಕಂದೂರುವರೆಗಿನ ರಸ್ತೆ ತೀರ ಹದಗೆಟ್ಟಿದ್ದು, ಇದೀಗ ಸುಮಾರು ರೂ. 3 ಕೋಟಿ ವೆಚ್ಚದಲ್ಲಿ ಮರು ಡಾಂಬರೀಕರಣ ಕಾಮಗಾರಿ ಆರಂಭಗೊಳ್ಳಲಿದೆ. ಈ ರಸ್ತೆ ಅಭಿವೃದ್ಧಿಯಿಂದ ಸರಗಳ್ಳಿ ಹಾಗೂ ಬಾಳೆಕೆರೆ ವೃತ್ತಗಳ ವಿಸ್ತರಣೆ ಸಾಧ್ಯವಾಗಲಿದೆ ಎಂದು ತಿಳಿಸಿದರು.

ರಾಜ್ಯ ಹೆದ್ದಾರಿ–8 (ಹಿರಿಸಾವೆ–ತಟ್ಟಹಳ್ಳಿ) ಹಾಗೂ ರಾಜ್ಯ ಹೆದ್ದಾರಿ–277 (ಕೆಂಪುಹೊಳೆ–ಕಣ್ಣೂರು) ಸಂಪರ್ಕಿಸುವ ಈ ಜಿಲ್ಲಾ ಮುಖ್ಯ ರಸ್ತೆಯನ್ನು ಉತ್ತಮ ಗುಣಮಟ್ಟದಲ್ಲಿ ಅಭಿವೃದ್ಧಿಪಡಿಸಲಾಗುವುದು. ಕಾಮಗಾರಿಯ ವೇಳೆ ರಸ್ತೆ ಎರಡೂ ಬದಿಗಳಲ್ಲಿನ ಚರಂಡಿ ಸ್ವಚ್ಛತೆ, ತೋಳು ಚರಂಡಿ ನಿರ್ಮಾಣ ಹಾಗೂ ರಸ್ತೆಗೆ ಹೊಂದಿಕೊಂಡಿರುವ ಗಿಡಗಂಟಿಗಳನ್ನು ತೆರವುಗೊಳಿಸುವ ಕೆಲಸ ಕೈಗೊಳ್ಳಲಾಗುವುದು ಎಂದರು.

ಕಿರಿಕೊಡ್ಲಿ ಮಠದ ಶ್ರೀ ಸದಾಶಿವ ಸ್ವಾಮೀಜಿ ಮಾತನಾಡಿ, ಕ್ಷೇತ್ರದ ಕಟ್ಟಕಡೆಯ ಗ್ರಾಮಗಳಾದ ಈ ಭಾಗಕ್ಕೆ ಶಾಸಕರು ಹೆಚ್ಚಿನ ಅನುದಾನ ಒದಗಿಸಿರುವುದು ಪ್ರಶಂಸನೀಯವಾಗಿದೆ ಎಂದರು. ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಸದಸ್ಯರು, ಪಕ್ಷದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಚಿರತೆ ದಾಳಿ: ರೈತನಿಗೆ ಗಾಯ

**ಗುಂಡ್ಲುಪೇಟೆ:** ತಾಲೂಕಿನ ಬೊಮ್ಮನಹಳ್ಳಿ ಗ್ರಾಮದ ರಾಜಶೇಖರ ಮೂರ್ತಿ(ಸದಾ) ಎಂಬುವವರ ಮೇಲೆ ಚಿರತೆ ದಾಳಿ ನಡೆಸಿ ಗಾಯಗೊಳಿಸಿದ್ದು, ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಗುರುವಾರ ರಾತ್ರಿ 10.30ರ ಸಮಯದಲ್ಲಿ ಜಮೀನಿನಲ್ಲಿ ಅರಿಶಿನ ಬೇಯಿಸಿ ಒಣಗಲು ಹಾಕಿರುವುದನ್ನು ನೋಡಲು ತೆರಳುವಾಗ ಚಿರತೆ ಬೈಕ್ ಮೇಲೆ ತೆರಳುತಿದ್ದ ರಾಜಶೇಖರ ಮೂರ್ತಿ (ಸದಾ)ಎಂಬುವವರ ಮೇಲೆ ದಾಳಿ ನಡೆಸಿದೆ. ತಕ್ಷಣ ಬೈಕ್ ನಿಂದ ಬಿದ್ದು ಬೈಕ್ ಹಾರನ್ ಒತ್ತಿ ಹಿಡಿದಿದ್ದು ಶಬ್ದಕ್ಕೆ ಚಿರತೆ ಓಡಿ ಹೋಗಿದೆ ಎಂದು ತಿಳಿಸಿದ್ದಾರೆ.

ಈ ವಿಚಾರವಾಗಿ ಎ.ಸಿ.ಎಫ್.ಸುರೇಶ್ ಕುಮಾರ್ ಮಾತನಾಡಿ, ಚಿರತೆ ದಾಳಿ ಮಾಡಿದ್ದರೆ ಉಗುರಿನ ಗುರುತು ಇರಬೇಕಿತ್ತು ಚಿರತೆ ಎಗರಿರಬಹುದು ಅದನ್ನು ತಳ್ಳಿಹಾಕುವಂತಿಲ್ಲ ಡ್ರೋಣ್ ಮೂಲಕ ಪರಿಶೀಲನೆ ನಡೆಸಲಾಗುವುದು ನಮ್ಮ ಸಿಬ್ಬಂದಿ ಕೂಂಬಿಂಕ್ ಕೂಡ ನಡೆಸುತಿದ್ದಾರೆ. ಬೋನ್ ಕೂಡ ಇರಿಸಲಾಗುವುದು ಗಾಯಗೊಂಡ ವ್ಯಕ್ತಿಗೆ ಸೂಕ್ತ ಚಿಕಿತ್ಸೆ ಕೊಡಿಸಲಾಗುವುದು ಎಂದರು. ಈ ಬಗ್ಗೆ ಗ್ರಾಮದ ವಿಜಯ್ ಮಾತನಾಡಿ, ನಮ್ಮ ಗ್ರಾಮದ ಸುತ್ತಮುತ್ತ ಕಾಡು ಪ್ರಾಣಿಗಳ ಹಾವಳಿ ಹೆಚ್ಚಿದ್ದು, ಕೆಲವು ದಿನಗಳಿಂದ ಜಾನುವಾರುಗಳ ಮೇಲೆ ದಾಳಿ ನಡೆಸಿ ಕೊಂದು ಹಾಕಿದೆ. ಕೂಡಲೆ ಅರಣ್ಯ ಇಲಾಖೆ ಕ್ರಮ ವಹಿಸುವಂತೆ ಒತ್ತಾಯಿಸಿದರು.

# ಆಲೂರಿನಲ್ಲಿ ಶೋಭಾಯಾತ್ರೆ

## ಹಿಂದೂ ಧರ್ಮ ಉಳಿಸಲು ಅಸಮಾನತೆ ತೊಲಗಿಸಿ: ಶ್ರೀ ಸದಾಶಿವ ಶಿವಾಚಾರ್ಯ ಸ್ವಾಮೀಜಿ

**ಆಲೂರು:** ಜಾತಿ ವ್ಯವಸ್ಥೆಯಿಂದ ಹಿಂದೂ ಧರ್ಮ ಅಳಿಸಿ ಹೋಗುವ ಮೊದಲು ನಾವೆಲ್ಲರೂ ಹಿಂದೂ–ನಾವೆಲ್ಲರೂ ಒಂದು ಎಂಬ ಭಾವನೆ ಪ್ರತಿಯೊಬ್ಬ ಹಿಂದೂ ಸಮಾಜದ ಬಾಂಧವರಲ್ಲಿ ಬರಬೇಕು ಎಂದು ಕಾರ್ಜುವಳ್ಳಿ ಹಿರೇಮಠ ಸಂಸ್ಥಾನದ ಶ್ರೀ ಸದಾಶಿವ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘ ನೂರು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಕಸಬಾ ಹೋಬಳಿ ಹಿಂದೂ ಸಮಾಜೋತ್ಸವ ಆಯೋಜನಾ ಸಮಿತಿ ಆಯೋಜಿಸಿದ್ದ ಬೃಹತ್ ಶೋಭಾಯಾತ್ರೆ ಕಾರ್ಯ ಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಹಿಂದೂ ಧರ್ಮವನ್ನು ಉಳಿಸಲು ಸ್ವಾಮಿ ವಿವೇಕಾನಂದ, ಶಿವಾಜಿ, ರಾಣಿ ಚೆನ್ನಮ್ಮ, ಕೃಷ್ಣ ದೇವರಾಯ ಸೇರಿದಂತೆ ಇತರರು ಶ್ರಮ ವಹಿಸಿ ದ್ದರು. ಧರ್ಮದೊಳಗೆ ಸ್ವಾರ್ಥವನ್ನು ತುಂಬಿಕೊಂಡಿ ರುವ ಆಧುನಿಕ ಹಿಂದೂ ಸಮಾಜದ ನಾವೇ ನಮ್ಮ ಧರ್ಮವನ್ನು ತುಳಿಯುತ್ತಿದ್ದೇವೆ. ಒಳಪಂಗಡಗಳ ಆಧಾರಿತವಾಗಿ ಅಸಮಾನತೆ ತೋರುತ್ತಿರುವುದನ್ನು ಮೊದಲು ಬಿಡಬೇಕು ಎಂದರು.



> ರಾಷ್ಟ್ರೀಯ ಸ್ವಯಂಸೇವಕ ಸಂಘದ ಶತಾಬ್ದಿ ನಡೆಯುತ್ತಿರುವ ಪ್ರಸ್ತುತ ವರ್ಷದಲ್ಲಿ ರಾಷ್ಟ್ರಾದ್ಯಂತ ಹಿಂದೂ ಸಮಾಜವನ್ನು ಸಂಘಟಿಸಿ ಉಳಿಸುವ ನಿಟ್ಟಿನಲ್ಲಿ ಹಿಂದೂ ಸಮಾಜೋತ್ಸವ ಕಾರ್ಯಕ್ರಮ ನಡೆಸಲಾಗುತ್ತಿದೆ.
>
> ▶▶ **ಉಲ್ಲಾಸ್** ಹಿಂದೂ ಜಾಗರಣಾ ವೇದಿಕೆ ಪ್ರಾಂತ್ಯ ಕಾರ್ಯಕಾರಿ ಸಮಿತಿ ಸದಸ್ಯ



ವೇದಿಕೆ ಕಾರ್ಯಕ್ರಮಕ್ಕೂ ಮೊದಲು ಪಟ್ಟಣದ ಮುಖ್ಯ ರಸ್ತೆ ಕೆಇಬಿ ವೃತದಿಂದ ಕೊನೆಪೇಟೆಯವರಿಗೆ ಬೃಹತ್ ಶೋಭಾಯಾತ್ರೆ ಜೊತೆಗೆ ಬೈಕ್ ರ್‍ಯಾಲಿ ನಡೆಯಿತು. ಕಾರ್ಜುವಳ್ಳಿ ಹಿರೇಮಠದ ಶ್ರೀ ಸದಾಶಿವ ಶಿವಾಚಾರ್ಯ ಸ್ವಾಮೀಜಿ, ಸಂಕಲಾಪುರ ಮಠದ ಶ್ರೀ ಶಾಂತವೀರ ಮಲ್ಲಿಕಾರ್ಜುನ ಸ್ವಾಮೀಜಿ, ಹಿಂದೂ ಜಾಗರಣ ವೇದಿಕೆ ಪ್ರಾಂತ್ಯ ಕಾರ್ಯಕಾರಿ ಸಮಿತಿ ಸದಸ್ಯ ಉಲ್ಲಾಸ್, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಆಲೂರು ಕಸಬಾ ಹಿಂದೂ ಸಮಾಜೋತ್ಸವ ಸಮಿತಿ ಅಧ್ಯಕ್ಷ ಬಿ ಜಿ ಸದಾಶಿವಪ್ಪ, ಕಾರ್ಯಾಧ್ಯಕ್ಷ ಕೆ.ಪಿ.ರವಿ ಕೆಂಚನ ಹಳ್ಳಿ, ಉಪಾಧ್ಯಕ್ಷರಾದ ಎ.ಎಚ್ ರಮೇಶ್, ಉಮೇಶ್, ಆರ್.ಸಿ.ರುದ್ರೇಶ್, ಕೋಶ್ಯಾಧ್ಯಕ್ಷ ರವಿಕುಮಾರ್, ಶಿವರಾಜ್, ಲೋಕೇಶ್ ಕದಾಳು, ಉಮಾ ರವಿಪ್ರಕಾಶ್, ಎ.ಎಸ್.ಲೋಹಿತ್, ಹರೀಶ್, ಗಣೇಶ್ ಬೈರಾಪುರ, ಅನೂಪ್ ರಾಜ್, ನಾಗರಾಜ್ ಹುಲ್ಲಹಳ್ಳಿ, ದೇವೇಂದ್ರ, ಪಾಣಿ ಸೇರಿದಂತೆ ಹಿಂದೂ ಕಾರ್ಯಕರ್ತರು ಇದ್ದರು.

# ಬೇಲೂರಲ್ಲಿ ಅವೈಜ್ಞಾನಿಕ ರಸ್ತೆ ಕಾಮಗಾರಿ

## ಸಫಾಯಿ ಕರ್ಮಚಾರಿ ಆಯೋಗದ ಮಾಜಿ ಅಧ್ಯಕ್ಷ ವೆಂಕಟೇಶ್ ಆರೋಪ

**ಬೇಲೂರು:** ಪಟ್ಟಣದಲ್ಲಿ ನಡೆಯುತ್ತಿರುವ ಅವೈಜ್ಞಾನಿಕ ರಸ್ತೆ ಕಾಮಗಾರಿ, ಶಾಸಕರ ಏಕಮುಖ ನಿರ್ಧಾರಗಳಿಂದ ಜನರಿಗೆ ತೀವ್ರ ತೊಂದರೆಯಾಗುತ್ತಿದೆ ಎಂದು ಸಫಾಯಿ ಕರ್ಮಚಾರಿ ಆಯೋಗದ ಮಾಜಿ ಅಧ್ಯಕ್ಷ ಎಂ.ಆರ್. ವೆಂಕಟೇಶ್ ಅಸಮಾಧಾನ ವ್ಯಕ್ತಪಡಿಸಿದರು.

ಬೇಲೂರು ಒಂದು ಪುರಾತನ, ಐತಿಹಾಸಿಕ ಪಟ್ಟಣವಾಗಿದ್ದು ಕೋಟೆ, ಕಂದಕಗಳು ಇವೆ. ಸುತ್ತಲೂ ಸಣ್ಣ ಪುಟ್ಟ ಬೀದಿಗಳಿವೆ. ಇಂತಹ ಸ್ಥಳದಲ್ಲಿ ಯಾವುದೇ ಕಾಮಗಾರಿ ನಡೆಸುವಾಗ ಸೂಕ್ತ ಅಧ್ಯಯನ, ಜನಪ್ರತಿನಿಧಿಗಳ ಸಲಹೆ ಹಾಗೂ ವೈಜ್ಞಾನಿಕ ಯೋಜನೆ ಅಗತ್ಯವಿದೆ. ಆದರೆ, ಈಗ ಕೈಗೊಂಡಿರುವ ಕಾಮಗಾರಿಗಳು ಸಂಪೂರ್ಣವಾಗಿ ಅವೈಜ್ಞಾನಿಕವಾಗಿ ನಡೆಯು ತ್ತಿವೆ ಎಂದು ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಹಿಂದಿನ ಅವಧಿಯಲ್ಲಿ ಮುಖ್ಯಮಂತ್ರಿಗಳ ವಿಶೇಷ ನಿಧಿಯಿಂದ ಮಾಜಿ ಶಾಸಕ ಕೆ.ಎಸ್.ಲಿಂಗೇಶ್ ಅವರು ಸುಮಾರು 7 ಕೋಟಿ ರೂ. ಅನುದಾನ ತಂದಿದ್ದರು. ಆಗ ಯಾವ ರೀತಿಯ ಕಾಮಗಾರಿ ಮಾಡಬೇಕು ಎಂಬ ಬಗ್ಗೆ ಚರ್ಚೆ ನಡೆಸಲಾಗಿತ್ತು. ಆದರೆ, ತಾಂತ್ರಿಕ ಕಾರಣಗಳು ಹಾಗೂ ನಿರ್ಧಾರಗಳ ವಿಳಂಬದಿಂದ ಕಾಮಗಾರಿ ನಡೆಯಲಿಲ್ಲ. ಇದೀಗ ಪುರಸಭೆ ಸದಸ್ಯರು ಹಾಗೂ ಸಾರ್ವಜನಿಕರ ಸಲಹೆ ಪಡೆಯದೆ, ಹಾಲಿ ಶಾಸಕರು ಏಕಮುಖ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದ್ದಾರೆ ಎಂದು ಟೀಕಿಸಿದರು.

ಶಾಸಕರ ವರ್ತನೆಯಿಂದಾಗಿ ಗುತ್ತಿಗೆದಾರರು ಕೂಡ ಕೆಲಸ ಮಾಡಲು ಹೆದರುತ್ತಿದ್ದಾರೆ. ಮಾಜಿ ಶಾಸಕರ ಅನುದಾನದಲ್ಲಿ ಹಾಲಿ ಶಾಸಕರು ಕೆಲಸ ಮಾಡಿಸುತ್ತಿರುವುದು ಸರಿಯಲ್ಲ. ಸಿಎಂ ವಿಶೇಷ ಅನುದಾನದಲ್ಲಿ ತಂದಿರುವ ಕಾಮಗಾರಿಗಳು ಸಹ ಜನರಿಗೆ ಉಪಯೋಗವಾಗದಂತಾಗಿವೆ. 13ನೇ ವಾರ್ಡ್‌ನ ರಸ್ತೆಗಳ ಸ್ಥಿತಿ ಅತ್ಯಂತ ಕಳಪೆಯಾಗಿದೆ ಎಂದು ಹೇಳಿದರು.

> ಬಿಕ್ಕೋಡು ರಸ್ತೆಗೆ ಸುಮಾರು 3 ಕೋಟಿ ರೂ. ಅನುದಾನ ತಂದಿದ್ದರೂ, ಅಲ್ಲಿ ನಡೆಯುತ್ತಿರುವ ಕಾಮಗಾರಿ ಅಸ್ತವ್ಯಸ್ತವಾಗಿದೆ. ಅವೈಜ್ಞಾನಿಕ ಕಾಮಗಾರಿಯಿಂದ ಆಟೋ, ಆಂಬ್ಯುಲೆನ್ಸ್ ಹಾಗೂ ದೈನಂದಿನ ಸಂಚಾರಕ್ಕೂ ತೀವ್ರ ತೊಂದರೆ ಉಂಟಾಗಿದೆ. ಭ್ರಷ್ಟಾಚಾರ ವಿರೋಧಿ ಎಂದು ಹೇಳಿಕೊಳ್ಳುವ ಶಾಸಕರು ಎಲ್ಲ ಇಲಾಖೆಗಳನ್ನು ಪರಿಶೀಲಿಸಿದರೆ ವಾಸ್ತವ ತಿಳಿಯುತ್ತದೆ.
>
> ▶ **ಎಂ.ಆರ್. ವೆಂಕಟೇಶ್**
> ಸಫಾಯಿ ಕರ್ಮಚಾರಿ ಆಯೋಗದ ಮಾಜಿ ಅಧ್ಯಕ್ಷ



# ಎಂ.ಶ್ರೀನಿವಾಸ್ 75 ಅಭಿನಂದನಾ ಗ್ರಂಥ ಬಿಡುಗಡೆ



**ಮಂಡ್ಯ:** ಮಾಜಿ ಶಾಸಕ ಎಂ.ಶ್ರೀನಿವಾಸ್ ಅವರ 75ನೇ ವರ್ಷದ ಹುಟ್ಟುಹಬ್ಬದ ಅಂಗವಾಗಿ ಫೆ.2 ರಂದು ಹನಕರೆ ಎಂ.ಶ್ರೀನಿವಾಸ್ ಪ್ರತಿಷ್ಠಾನದಿಂದ ಅಭಿನಂದನಾ ಗ್ರಂಥ ಬಿಡುಗಡೆ ಹಾಗೂ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷ ಡಿ.ಶಿವರಾಜು ಕೀಲಾರ ತಿಳಿಸಿದರು.

ಅಂದು ಸಂಜೆ 4 ಗಂಟೆಗೆ ನಗರದ ಅಂಬೇಡ್ಕರ್ ಭವನದಲ್ಲಿ ಆಯೋಜಿಸಿರುವ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಉದ್ಘಾಟಿಸುವರು. ಶಾಸಕ ಪಿ.ರವಿಕುಮಾರ್ ಗೌಡ ಅಧ್ಯಕ್ಷತೆ ವಹಿಸುವರು. ವಿಶ್ವ ಒಕ್ಕಲಿಗ ಮಠದ ಪೀಠಾಧ್ಯಕ್ಷ ಡಾ.ನಿಶ್ಚಲಾನಂದನಾಥ ಸ್ವಾಮೀಜಿ ಸಾನಿಧ್ಯ ವಹಿಸುವರು ಎಂದು ಸುದ್ದಿಗೋಷ್ಠಿಯಲ್ಲಿ ವಿವರಿಸಿದರು.

ಡಾ.ಎಸ್.ಶಿವರಾಮು, ಲೋಕೇಶ್ ಚಂದಗಾಲು ಸಂಪಾದಕತ್ವದ 'ಶ್ರೀನಿಧಿ' ಅಭಿನಂದನಾ ಗ್ರಂಥವನ್ನು ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಆದಾಯ ತೆರಿಗೆ ಇಲಾಖೆಯ ಮುಖ್ಯ ಆಯುಕ್ತ ಜಯರಾಂ ರಾಯ ಪುರ ಬಿಡುಗಡೆ ಮಾಡುವರು ಎಂದು ಹೇಳಿದರು.

> ಪ್ರಗತಿಪರ ರೈತ ಶಿವು ಬನ್ನಹಳ್ಳಿ ಅವರಿಗೆ ಅರಸಮ್ಮ ಮೆಣಸೇಗೌಡ ಕೃಷಿ ಪ್ರಶಸ್ತಿ ಹಾಗೂ ಸಾಹಿತಿ ಡಾ.ಎಸ್.ತುಕಾರಾಮ್ ಅವರಿಗೆ ಎಂ.ಶ್ರೀನಿವಾಸ್ ಸಮಾಜ ಸೇವಾ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು.
>
> ▶ **ಡಿ.ಶಿವರಾಜು ಕೀಲಾರ**
> ಪ್ರತಿಷ್ಠಾನದ ಅಧ್ಯಕ್ಷ

ಮಾಜಿ ಶಾಸಕ ಎಂ.ಶ್ರೀನಿವಾಸ್ ಅವರನ್ನು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅಭಿನಂದಿಸುವರು. ಶಾಸಕರು ಹಾಗೂ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂ ತ್ರಣ ಮಂಡಳಿಯ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ಹಾಗೂ ಒಕ್ಕಲಿಗರ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಎಸ್.ಆತ್ಮಾನಂದ ಪ್ರಶಸ್ತಿ ಪ್ರದಾನ ಮಾಡುವರು ಎಂದರು.

ಮುಖ್ಯ ಅತಿಥಿಗಳಾಗಿ ಶಾಸಕ ಹಾಗೂ ಸೆಸ್ಕ್ ಅಧ್ಯಕ್ಷ ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಶಾಸಕರಾದ ಕೆ.ಎಂ.ಉದಯ್, ದರ್ಶನ್ ಪುಟ್ಟಣ್ಣಯ್ಯ, ಮಧು ಜಿ.ಮಾದೇಗೌಡ, ಮಾಜಿ ಸಚಿವ ಕೆ.ಸಿ.ನಾರಾಯಣಗೌಡ, ವಿಧಾನಪರಿಷತ್ ಮಾಜಿ ಸದಸ್ಯರಾದ ಬಿ.ರಾಮಕೃಷ್ಣ, ಮರಿತಿಬ್ಬೇಗೌಡ, ಕೆ.ಟಿ.ಶ್ರೀಕಂಠೇಗೌಡ ಉಪಸ್ಥಿತರಿರುವರು.

ನಿವೃತ್ತ ಪ್ರಾಂಶುಪಾಲರಾದ ಡಾ.ಮ.ರಾಮಕೃಷ್ಣ ಪ್ರಶಸ್ತಿ ಪುರಸ್ಕೃತರ ಕುರಿತು ಮಾತನಾಡುವರು. ಡಾ.ಎಸ್.ಬಿ.ಶಂಕರಗೌಡ ಎಂ.ಶ್ರೀನಿವಾಸ್ 75–ನುಡಿ ಹಾರೈಕೆ ಅರ್ಪಿಸುವರು. ಪ್ರಶಸ್ತಿ ಪುರಸ್ಕೃತರಿಗೆ ತಲಾ 25 ಸಾವಿರ ರೂ ನಗದು ನೀಡಲಾಗುವುದು ಎಂದು ವಿವರಿಸಿದರು.

ಕರ್ನಾಟಕ ಸಂಘದ ಅಧ್ಯಕ್ಷ ಡಾ. ಜಯಪ್ರಕಾಶ್‌ಗೌಡ, ಪ್ರತಿಷ್ಠಾನದ ಕಾರ್ಯದರ್ಶಿ ಹಾಗೂ ಕರ್ನಾಟಕ ಸಂಘದ ನಿರ್ದೇಶಕ ಎಚ್. ಎನ್.ನಾಗಪ್ಪ, ಟ್ರಸ್ಟಿಗಳಾದ ಮಂಜುಳಾ ಉದಯ ಶಂಕರ್, ಸಿ.ಎಚ್.ಶಿವರುದ್ರಪ್ಪ, ಕೋಶಾಧ್ಯಕ್ಷ ಎಚ್.ಎನ್.ರಾಮಚಂದ್ರ ಇದ್ದರು.

# ಮಹನೀಯರ ಆದರ್ಶ, ತತ್ವ ಅನುಸರಿಸಿ

**ಭಾರತೀನಗರ:** ರಾಷ್ಟ್ರೀಯ ಹಬ್ಬಗಳನ್ನು ಕೇವಲ ಆಚರಣೆ ಮಾಡಿದರೆ ಸಾಲದು. ಮಹತ್ಮರ ಆದರ್ಶ, ತತ್ವ ಸಿದ್ಧಾಂತಗಳನ್ನು ಅಳವಡಿಸಿಕೊಂಡಾಗ ಮಾತ್ರ ರಾಷ್ಟ್ರೀಯ ಹಬ್ಬಗಳಿಗೆ ಅರ್ಥಬರುತ್ತದೆ ಎಂದು ವಿದ್ಯಾವಿಹಾರ್ ಇಂಟರ್ ನ್ಯಾಷನಲ್ ಶಾಲೆಯ ಪ್ರಾಂಶುಪಾಲ ಮಹೇಶ್ ತಿಳಿಸಿದರು.

ಇಲ್ಲಿಗೆ ಸಮೀಪದ ಗುಡಿಗೆರೆ ಮತ್ತು ಭಾರತೀನಗರದಲ್ಲಿರುವ ವಿದ್ಯಾವಿಹಾರ್ ಇಂಟರ್ ನ್ಯಾಷನಲ್ ಶಾಲೆಯಲ್ಲಿ ಗಣರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮುಖ್ಯಶಿಕ್ಷಕಿ ಪ್ರತಿಭಾ ಮಾತನಾಡಿ, ಗಣರಾಜ್ಯದ ಸ್ಥಾಪನೆಗೆ ಡಾ.ಬಿ.ಆರ್.ಅಂಬೇಡ್ಕರ್ ಅವರ ಕೊಡುಗೆ ಅನನ್ಯ. ಪ್ರಪಂಚದಲ್ಲಿ ಭಾರತ ಸದೃಢ ಶಕ್ತಿಯಾಗಿ ಹೊರಹೊಮ್ಮಲು ಸಂವಿಧಾನದ ಪಾತ್ರ ಅತಿ ಮುಖ್ಯ ತಳಹದಿಯಾಗಿದೆ ಎಂದರು.

ನಂತರ ವಿದ್ಯಾರ್ಥಿಗಳೊಂದಿಗೆ ಮದ್ದೂರು ಮತ್ತು ಮಳವಳ್ಳಿ ಪಟ್ಟಣದಲ್ಲಿ ಗಣರಾಜ್ಯೋತ್ಸವದ ಬಗ್ಗೆ ನೃತ್ಯ ಮತ್ತು ದೇಶಭಕ್ತಿ ಗೀತೆಗಳೊಂದಿಗೆ ನೃತ್ಯ ಪ್ರದರ್ಶನ ಮಾಡಿ ಎಲ್ಲರ ಗಮನ ಸೆಳೆದರು. ಇದೇ ವೇಳೆ ಶಿಕ್ಷಕರಾದ ಸಂಧ್ಯಾ, ರಶ್ಮಿ, ರಾಣಿ, ಲಲಿತಾ, ರೇಖಾ, ಕಾರಾಯಿಣಿ, ಆರೋಕ್ಯ ಮೇರಿ, ರಚಿತ, ಸುನಂದಾ ಸೇರಿದಂತೆ ಹಲವರಿದ್ದರು.



# ಕೃಷಿಕ ಸಮಾಜ ಸಂಪರ್ಕ ಸೇತುವೆ



**ಯಳಂದೂರು:** ರೈತರು ಹಾಗೂ ಕೃಷಿ ಇಲಾಖೆಯ ನಡುವೆ ಕೃಷಿಕ ಸಮಾಜವು ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿದ್ದು, ರೈತರಿಗೆ ಸರ್ಕಾರದಿಂದ ಲಭಿಸುವ ಸೌಲಭ್ಯಗಳನ್ನು ಒದಿಸುವ ನಿಟ್ಟಿನಲ್ಲಿ ಸಹಕಾರಿಯಾಗಿದೆ ಎಂದು ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಗೌಡಹಳ್ಳಿ ರವಿ ತಿಳಿಸಿದರು.

ಪಟ್ಟಣದ ಕೃಷಿ ಇಲಾಖೆ ಕಚೇರಿಯ ಸಭಾಂಗಣದಲ್ಲಿ ತಾಲೂಕು ಕೃಷಿಕ ಸಮಾಜದ ವತಿಯಿಂದ ಹಮ್ಮಿಕೊಂಡಿದ್ದ ರೈತ ದಿನಾಚರಣೆ ಹಾಗೂ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಸದಸ್ಯರಿಗೆ ಹಮ್ಮಿಕೊಂಡಿದ್ದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ರೈತರು ಇಲಾಖೆಯಿಂದ ಲಭಿಸುವ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು. ತಮ್ಮ ಭೂಮಿಯನ್ನು ಹಸನುಗೊಳಿಸಿಕೊಳ್ಳಬೇಕು. ಅಧಿಕ ಇಳುವರಿ ಪಡೆಯಲು ಇಲಾಖೆಯಿಂದ ಲಭಿಸುವ ಸೂಕ್ತ ಸಲಹೆ, ಸೂಚನೆಗಳನ್ನು ಪಡೆದುಕೊಳ್ಳಬೇಕು, ಬೆಳೆ ವಿಮೆ, ಗೊಬ್ಬರಗಳು, ಕೃಷಿ ಯಂತ್ರೋಪಕರಣಗಳನ್ನು ಪಡೆದುಕೊಂಡು ಅಧಿಕ ಇಳುವರಿ ಪಡೆದುಕೊಳ್ಳಬೇಕು. ತಾಲೂಕಿನಲ್ಲಿ ಇದೇ ಮೊದಲ ಬಾರಿಗೆ ಕೃಷಿಕ ಸಮಾಜದ ವತಿಯಿಂದ ರೈತ ದಿನಾಚರಣೆಯನ್ನು ಆಚರಣೆ ಮಾಡಲಾಗುತ್ತಿದ್ದು, ಇದರ ಸದಸ್ಯರಿಗೆ ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಪ್ರಕಾಶ್ ಮಾತನಾಡಿ, ಅಕ್ಕಿ, ಗೋಧಿಯನ್ನು ಹೊರತುಪಡಿಸಿ ಧಾನ್ಯಗಳು, ಎಣ್ಣೆ ಕಾಳುಗಳು, ಸಾಂಬಾರ ಪದಾರ್ಥಗಳನ್ನು ನಾವು ಬೇರೆ ದೇಶಗಳಿಂದ ಅಮದು ಮಾಡಿಕೊಳ್ಳುವ ಅನಿವಾರ್ಯತೆ ಇದೆ. ನಮ್ಮನ್ನಾಳುವ ಸರ್ಕಾರಗಳು ನಮ್ಮನ್ನು ಬೀದಿಗೆ ತರಲು ಹೊಸ ಹೊಸ ಯೋಜನೆಗಳನ್ನು ರೂಪಿಸುತ್ತಿವೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಮುಸುಕಿನ ಜೋಳವನ್ನು ಅಮದು ಮಾಡಿಕೊಳ್ಳುವ ಮಾತುಕತೆ ನಡೆಯುತ್ತಿದ್ದಂತೆಯೇ ನಮ್ಮಲ್ಲಿ ಬೆಳೆಯುವ ಮುಸುಕಿನ ಜೋಳದ ಬೆಲೆ ಕುಸಿತ ಕಂಡು ಬಂದಿದೆ. ಇನ್ನು ಆಮದಾದರೆ ಇನ್ನೂ ಅಪಾಯವಿದೆ. ನಮ್ಮಲ್ಲಿ ಶೇ. 60 ರಷ್ಟು ರೈತರು ಇದ್ದಾರೆ. ಅಮೆರಿಕಾದಲ್ಲಿ ಶೇ. 1 ರಷ್ಟು, ಯುರೋಪ್ ರಾಷ್ಟ್ರಗಳಲ್ಲಿ ಶೇ. 4ರಷ್ಟು ರೈತರಿದ್ದಾರೆ. ಅವರು ಸಾವಿರಾರು ಎಕರೆ ಜಮೀನನ್ನು ಹೊಂದಿದ್ದಾರೆ. ಅವರು ನಮ್ಮ ಜಮೀನ್ನು ಖರೀದಿಸಿ ನಮಗೆ ಕೆಲಸ ಇಲ್ಲದಂತೆ ಮಾಡಿ, ನಮ್ಮ ಮೇಲೆ ಸವಾರಿ ಮಾಡುವ ಹಂತಕ್ಕೆ ಹೋದರೆ ನಾವು ಮತ್ತೆ ಗುಲಾಮಗಿರಿಗೆ ಹೋಗುವ ಅಪಾಯವಿದೆ. ಭೂಮಿಗೆ ರಾಸಾಯನಿಕಗಳನ್ನು ಸುರಿದು ಇದನ್ನು ಬರಡು ಮಾಡುವ ಅಪಾಯವಿದೆ. ನಾವು ನಮ್ಮ ಭೂಮಿಯನ್ನು ಉಳಿಸಿಕೊಂಡು, ನಮ್ಮಲ್ಲಿ ಬೆಳೆದ ಉತ್ಪನ್ನಗಳಿಂದ ಇತರೆ ವಸ್ತುಗಳನ್ನು ತಯಾರಿಸಿ ಮಾರಾಟ ಮಾಡುವ ಮೂಲಕ ಅಧಿಕ ಲಾಭಗಳಿಸುವತ್ತ ತಮ್ಮ ಚಿತ್ತ ಹರಿಸಬೇಕು ಎಂದು ಸಲಹೆ ನೀಡಿದರು.

ಕೃಷಿಕ ಸಮಾಜದ ಜಿಲ್ಲಾಧ್ಯಕ್ಷ ಚಿಕ್ಕಸ್ವಾಮಿ, ರಾಜ್ಯ ಪ್ರತಿನಿಧಿ ರಾಘವೇಂದ್ರ ನಾಯ್ಡು, ತಾಲೂಕು ಉಪಾಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ, ಖಜಾಂಚಿ ರಾಜು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಅಮೃತೇಶ್ವರ, ಕೃಷಿ ಅಧಿಕಾರಿ ವೆಂಕಟರಂಗಶೆಟ್ಟಿ ಜಿಲ್ಲಾ ರೈತ ಸಂಘದ ಅಧ್ಯಕ್ಷ ಗೌಡಹಳ್ಳಿ ಸೋಮಣ್ಣ, ತಾಲೂಕು ಅಧ್ಯಕ್ಷ ಸಿದ್ದಲಿಂಗಸ್ವಾಮಿ ನಿರ್ದೇಶಕರಾದ ನಾಗೇಂದ್ರಸ್ವಾಮಿ, ಕೆಸ್ತೂರು ನಟರಾಜು, ಬಸವಣ್ಣ, ಗೋವಿಂದನಾಯಕ ಜಯಶಂಕರ ಇದ್ದರು.

## ತಹಶೀಲ್ದಾರ್‌ಗೆ ಅವಾಚ್ಯ ನಿಂದನೆ: ಆರೋಪಿಗಳ ವಿರುದ್ಧ ಕಠಿಣ ಕ್ರಮಕ್ಕೆ ಕಂದಾಯ ನೌಕರರ ಸಂಘ ಒತ್ತಾಯ



**ತಿ.ನರಸೀಪುರ:** ಮೈಸೂರು ಜಿಲ್ಲೆಯ ಹೆಚ್.ಡಿ. ಕೋಟೆ ತಾಲ್ಲೂಕಿನಲ್ಲಿ ಜ.20ರಂದು ರೈತ ಸಂಘಟನೆ ನಡೆಸಿದ ಪ್ರತಿಭಟನೆಯ ವೇಳೆ ತಹಶೀ ಲ್ದಾರ್‌ರನ್ನು ಸಾರ್ವಜನಿಕವಾಗಿ ಅವಾಚ್ಯ ಪದಗಳಿಂದ ನಿಂದಿಸಿ ತೇಜೋ ವಧೆ ಮಾಡಿದ ಪ್ರಕರಣವನ್ನು ತೀವ್ರವಾಗಿ ಖಂಡಿಸಿ, ಸಂಬಂಧಿಸಿದ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ

ತಿ. ನರಸೀಪುರ ತಾಲ್ಲೂಕು ಕಂದಾಯ ಇಲಾಖಾ ನೌಕರರ ಸಂಘವು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದೆ.

ತಾಲ್ಲೂಕು ದಂಡಾಧಿಕಾರಿ ಸುರೇಶಾಚಾರ್ ಅವರ ಮೂಲಕ ಮನವಿ ಸಲ್ಲಿಸಿದ ಸಂಘದ ಸದಸ್ಯರು, ಪ್ರತಿಭಟನೆಯ ಸಂದರ್ಭ ಹೊನ್ನೂರು ಪ್ರಕಾಶ ಎಂಬ ವ್ಯಕ್ತಿಯು ತನ್ನ ಸಂಘಟನೆಯವರ ಸಮ್ಮುಖದಲ್ಲೇ ತಹಶೀಲ್ದಾರ್ ಹಾಗೂ ತಾಲ್ಲೂಕು ದಂಡಾಧಿಕಾರಿಗಳ ಹುದ್ದೆಗೆ ಅಗೌರವ ತೋರಿಸಿ ಅವಾಚ್ಯ ಶಬ್ದಗಳಿಂದ ನಿಂದಿಸಿರುವುದು ಅತ್ಯಂತ ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.


ಇದೇ ರೀತಿ ಕೆಲ ದಿನಗಳ ಹಿಂದೆ ರವಿ ಎಂಬ ವ್ಯಕ್ತಿಯು ಸಹ ಅಧಿಕಾರಿಗಳ ವಿರುದ್ಧ ಏಕವಚನದಲ್ಲಿ ನಿಂದನೆ ನಡೆಸಿದ್ದ ಘಟನೆ ನಡೆದಿದ್ದು, ಇತ್ತೀಚಿನ ದಿನಗಳಲ್ಲಿ ಇಂತಹ ಪ್ರಕರಣಗಳು ಹೆಚ್ಚುತ್ತಿರು ವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಸಂಘವು ತಿಳಿಸಿತು.

ಈ ಕುರಿತು ಮಾತನಾಡಿದ ಸಂಘದ ಅಧ್ಯಕ್ಷ ಸಿದ್ದರಾಜು, ಜಿಲ್ಲೆಯಲ್ಲಿ ಮಾತ್ರವಲ್ಲದೆ ರಾಜ್ಯಾದ್ಯಂತ ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ನೌಕರರ ಮೇಲೆ ವಿವಿಧ ಸಂಘಟನೆಗಳು, ಮಧ್ಯವರ್ತಿಗಳು ಹಾಗೂ ಕೆಲವು ಮುಖಂಡರಿಂದ ಸಾರ್ವಜನಿಕವಾಗಿ ಅವಾಚ್ಯ ನಿಂದನೆ ಹಾಗೂ ದೌರ್ಜನ್ಯ ನಡೆಯುತ್ತಿರುವುದು ಗಂಭೀರ ಚಿಂತೆಯ ವಿಷಯವಾಗಿದೆ ಎಂದರು.

ಇಂತಹ ಘಟನೆಗಳಿಂದ ಅಧಿಕಾರಿಗಳು ಮತ್ತು ನೌಕರರು ಮಾನಸಿಕ ಒತ್ತಡಕ್ಕೆ ಒಳಗಾಗುತ್ತಿದ್ದು, ಸಾರ್ವಜನಿಕ ಸೇವೆಗಳ ನಿರ್ವಹಣೆಯ ಮೇಲೂ ದುಷ್ಪರಿಣಾಮ ಬೀರುತ್ತಿದೆ. ಆದ್ದರಿಂದ ದೌರ್ಜನ್ಯ ಎಸಗಿದವರ ವಿರುದ್ಧ ತಕ್ಷಣ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಸಂಬಂಧಿಸಿದ ಆರೋಪಿಗಳನ್ನು ಬಂಧಿಸಬೇಕು ಎಂದು ಅವರು ಆಗ್ರಹಿಸಿದರು.

ಉಪ ತಹಶೀಲ್ದಾರ್ ಗಳಾದ ತಲಕಾಡು ಕುಮಾರ್, ಸೋಸಲೆ ಶೋಭಾ, ಮೂಗೂರು ಲಕ್ಷ್ಮಿ, ರಾಜಸ್ವ ನಿರೀಕ್ಷಕರಾದ ಕಸಬಾ ಮಹೇಂದ್ರ, ಮೂಗೂರು ಬಸವರಾಜು, ಬನ್ನೂರು ಸಿದ್ದರಾಜು, ತಲಕಾಡು ನಾಗೇಂದ್ರ, ಸೋಸಲೆ ಆನಂದ್, ಗ್ರಾಮ ಆಡಳಿತಾಧಿಕಾರಿಗಳಾದ ಸೋಮಶೇಖರ್, ಸತೀಶ್, ಶ್ರೀನಿವಾಸ್, ಪ್ರಮೋದ್, ಸಾಗೀರಪ್ಪ, ಜಬೀನಾ, ಪ್ರಶಾಂತ್, ಶಿವರಾಮ್, ಸದ್ದಾಂ, ಚೈತ್ರಾ, ಶೃತಿ, ಸುನಿಲ್, ಆನಂದ್ ಹಾಜರಿದ್ದರು.

## 'ರೈತ ರತ್ನ' ಪ್ರಶಸ್ತಿಗೆ ಸಿ.ಚಂದನ್‌ಗೌಡ ಭಾಜನ



**ಮೈಸೂರು:** ಬೆಂಗಳೂರಿನ ಒರಿಯಂಟಲ್ ಫೌಂಡೇಶನ್ ವತಿಯಿಂದ ಕೃಷಿ ಕ್ಷೇತ್ರಕ್ಕೆ ಕೊಡಮಾಡುವ 2025-26 ನೇ ಸಾಲಿನ ಪ್ರತಿಷ್ಠಿತ 'ರೈತ ರತ್ನ' ಪ್ರಶಸ್ತಿಗೆ ಕರ್ನಾಟಕ ರಾಜ್ಯ ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಭೂಮಿಪುತ್ರ ಸಿ. ಚಂದನ್‌ಗೌಡ ಅವರು ಭಾಜನರಾಗಿದ್ದಾರೆ.

ಫೆಬ್ರವರಿ 1ರ ಭಾನುವಾರ ಬೆಂಗಳೂರಿನ ಚಾಮರಾಜಪೇಟೆಯ ಪಂಪ ಮಹಾಕವಿ ರಸ್ತೆ ಯಲ್ಲಿರುವ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ.

ನಾಡಿನ ಹೆಸರಾಂತ ಸ್ವಾಮೀಜಿಗಳು, ಸಾಹಿತಿಗಳು ಹಾಗೂ ವಿವಿಧ ಕ್ಷೇತ್ರಗಳ ಬಹುಮುಖ್ಯ ಗಣ್ಯರ ಸಮ್ಮುಖದಲ್ಲಿ ನಡೆಯಲಿರುವ ಈ ವಿಶೇಷ ಕಾರ್ಯಕ್ರಮದಲ್ಲಿ ಚಂದನ್ ಗೌಡ ಅವರಿಗೆ 'ರೈತ ರತ್ನ' ಪ್ರಶಸ್ತಿ ಪ್ರದಾನಿಸಿ ಗೌರವಿಸಲಾಗುವುದು ಎಂದು ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ರವಿಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಸ್ತೆ ಸುರಕ್ಷತಾ ಜಾಗೃತಿ



**ನಂಜನಗೂಡು:** ದಕ್ಷಿಣಕಾಶಿ ನಂಜನಗೂಡಿನಲ್ಲಿ ಮೈಸೂರು ಜಿಲ್ಲಾ ಪೊಲೀಸರು ರಸ್ತೆ ಸುರಕ್ಷತಾ ಮಾಸಾಚರಣೆ ಅರ್ಥಪೂರ್ಣವಾಗಿ ಹಮ್ಮಿಕೊಂಡಿದ್ದರು.ಸಂಚಾರ ನಿಯಮಗಳ ಪಾಲನೆ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಸಲುವಾಗಿ ಹಮ್ಮಿಕೊಂಡ ಶಾಲಾ ಕಾಲೇಜು ವಿಧ್ಯಾರ್ಥಿಗಳ ಜಾಥಾಗೆ ಜಿಲ್ಲಾ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ರವರು ಚಾಲನೆ ನೀಡಿದರು.ನಂಜನಗೂಡಿನ ಪ್ರಮುಖ ರಸ್ತೆಗಳಾದ ಆರ್.ಪಿ.ರಸ್ತೆ ಹಾಗೂ ಎಂ.ಜಿ.ರಸ್ತೆಯಲ್ಲಿ ಜಾಥಾ ಸಾಗಿ ಸಂಚಾರಿ ನಿಯಮಗಳನ್ನ ಪಾಲಿಸುವ ಬಗ್ಗೆ ಅರಿವು ಮೂಡಿಸಲಾಯಿತು.ಇದೇ ವೇಳೆ ಹೆಲ್ಮೆಟ್ ಧರಿಸದೆ ದ್ವಿಚಕ್ರ ವಾಹನ ಚಾಲನೆ ಮಾಡಿದ 100 ಕ್ಕೂ ಹೆಚ್ಚು ಸವಾರರಿಗೆ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ರವರು ಉಚಿತವಾಗಿ ಹೆಲ್ಮೆಟ್ ವಿತರಿಸಿದರು.ನಂತರ ಜೆಎಸ್ ಎಸ್ ಕಾಲೇಜಿನಲ್ಲಿ ವಿಧ್ಯಾರ್ಥಿಗಳಿಗೆ,ಪೋಷಕರಿಗೆ ಸಂಚಾರಿ ನಿಯಮಗಳ ಬಗ್ಗೆ ಮಾಹಿತಿ ನೀಡುವ ಮೂಲಕ ಜಾಗೃತಿ ಮೂಡಿಸಲಾಯಿತು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಕ್ಷೇತ್ರಕ್ಕೆ ಬರದಿದ್ದರೂ ಅಭಿವೃದ್ಧಿ ನಿಲ್ಲಬಾರದು

## ಸಂಸದ ಸುನಿಲ್ ಬೋಸ್ ಎಚ್ಚರಿಕೆ | ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ



**ತಿ.ನರಸೀಪುರ:** ಕೆಲಸದ ಒತ್ತಡದ ಹಿನ್ನೆಲೆ ಯಲ್ಲಿ ನಾನು ಅಥವಾ ನಮ್ಮ ತಂದೆ ಕ್ಷೇತ್ರಕ್ಕೆ ಹೆಚ್ಚಾಗಿ ಭೇಟಿ ನೀಡಲಾಗದೇ ಇದ್ದರೂ, ಅದನ್ನೇ ನೆಪಮಾಡಿಕೊಂಡು ಅಧಿಕಾರಿಗಳು ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷ್ಯ ವಹಿಸಿದರೆ ಕಠಿಣ ಪರಿಣಾಮಗಳನ್ನು ಎದುರಿಸ ಬೇಕಾಗುತ್ತದೆ ಎಂದು ಸಂಸದ ಸುನಿಲ್ ಬೋಸ್ ಎಚ್ಚರಿಕೆ ನೀಡಿದರು.

ಪಟ್ಟಣದ ಪುರಸಭೆ ಸಭಾಂಗಣದಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದ ಸುನಿಲ್ ಬೋಸ್. ಸಾರ್ವಜನಿಕರ ಕೆಲಸ ಮತ್ತು ಅಭಿವೃದ್ಧಿ ಕಾಮಗಾರಿಗಳ ಕೆಲಸ ನಿರಂತರವಾಗಿ ನಡೆಯಬೇಕು ಎಂದು ತಿಳಿಸಿದರು ಹಾಗೂ ಸಮರ್ಪಕ ಮಾಹಿತಿ ನೀಡದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಬೋಸ್, ಕ್ಷೇತ್ರದ ಅಭಿವೃದ್ಧಿಗೆ ಅಗತ್ಯವಾದ ಅನುದಾನವನ್ನು ನಿರಂತರವಾಗಿ ಬಿಡುಗಡೆ ಮಾಡಲಾಗುತ್ತಿದ್ದು, ಅದನ್ನು ಸಮರ್ಪಕವಾಗಿ ಸದ್ಬಳಕೆ ಮಾಡಿ ಕೊಂಡು ಕಾಮಗಾರಿಗಳನ್ನು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸ ಬೇಕು ಎಂದು ಸೂಚಿಸಿದರು.

ತಾಲ್ಲೂಕು ಕಚೇರಿಯಲ್ಲಿ ಮಧ್ಯವರ್ತಿಗಳಿಲ್ಲದೇ ಯಾವುದೇ ಕೆಲಸ ನಡೆಯುತ್ತಿಲ್ಲ ಎಂಬ ದೂರುಗಳು ಕೇಳಿಬಂದಿರುವುದನ್ನು ಉಲ್ಲೇಖಿಸಿ, ಜನರು ನೇರವಾಗಿ ಬಂದು ಲಂಚ ನೀಡದೇ ತಮ್ಮ ಕೆಲಸ ಮಾಡಿಸಿಕೊಳ್ಳುವಂತಹ ವ್ಯವಸ್ಥೆ ರೂಪುಗೊಳ್ಳಬೇಕು ಎಂದು ತಹಸಿಲ್ದಾರ್ ಟಿ.ಜೆ. ಸುರೇಶಾಚಾರ್ ಅವರಿಗೆ ಸೂಚಿಸಿದರು.

ಒಂದೇ ಸ್ಥಳದಲ್ಲಿ ಎರಡು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಪಟ್ಟಿ ತಯಾರಿಸಿ ಅವರ ವರ್ಗಾವಣೆಗೆ ಕ್ರಮ ಕೈಗೊಳ್ಳಲಾಗುವುದು. ಆದರೆ ಉತ್ತಮ ಹಾಗೂ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿರುವ ಅಧಿಕಾರಿಗಳನ್ನು ತಾಲ್ಲೂಕಿನಲ್ಲಿಯೇ ಉಳಿಸಿಕೊಳ್ಳಲಾಗುತ್ತದೆ ಎಂದು ಸ್ಪಷ್ಟಪಡಿಸಿದರು.

ಜಿ.ಪಂ.ಯ 16 ಕೋಟಿ ರೂ.ಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಶೀಘ್ರವಾಗಿ ಆರಂಭಿಸುವಂತೆ ಜಿ.ಪಂ. ಎಇಇ ಚರಿತಾ ಅವರಿಗೆ ಸೂಚಿಸಿದ ಅವರು, ಅಧಿವೇಶನದ ಕಾರಣ ನಾನು ಕ್ಷೇತ್ರಕ್ಕೆ ಬಾರದಿದ್ದರೂ, ನಮ್ಮ ತಂದೆ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ. ಮಹದೇವಪ್ಪ ಅವರು ಭೂಮಿಪೂಜೆಗೆ ಆಗಮಿಸಲಿದ್ದು, 19 ಗ್ರಾಮಗಳಲ್ಲಿ ಕಾಮಗಾರಿಗಳು ಆರಂಭವಾಗಬೇಕೆಂದು ತಿಳಿಸಿದರು.

ಸಭೆಯ ಬಳಿಕ ಸಾರ್ವಜನಿಕರು ತಮ್ಮ ವಿವಿಧ ಸಮಸ್ಯೆಗಳ ಕುರಿತು ಸಂಸದರಿಗೆ ಅಹವಾಲು ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೆಡಿಪಿ ಸದಸ್ಯ ಉಕ್ಕಲಗೆರೆ ಬಸವಣ್ಣ, ಸೋಸಲೆ ಮಹದೇವಸ್ವಾಮಿ, ಬಿ.ಎಂ. ದಿವಾಕರ್, ಪುರಸಭೆ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ತುಂಬಲ ಪ್ರಕಾಶ್, ತಾ.ಪಂ. ಮಾಜಿ ಅಧ್ಯಕ್ಷ ದೊಡ್ಡಬಾಗಿಲು ಮಲ್ಲಿ ಕಾರ್ಜುನ ಸ್ವಾಮಿ,ತಾ.ಪಂ.ಸಾಮಾಜೀಕ ನ್ಯಾಯ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಕುಕ್ಕೂರು ಗಣೇಶ್,ರಾಮಲಿಂಗಯ್ಯ, ಕೆಪಿಸಿಸಿ ಮೀನುಗಾರರ ವಿಭಾಗದ ತಾಲ್ಲೂಕು ಅಧ್ಯಕ್ಷ ಕೊಳತೂರು ಕುಮಾರ್,ಅಸಂಘಟಿತ ಕಾರ್ಮಿಕ ವಿಭಾಗದ ಜಿಲ್ಲಾಧ್ಯಕ್ಷ ಮದನಿ ಕುಮಾರ್, ಮುಖಂಡರಾದ ಗದ್ದೆಮೊಳೆ ಸಿದ್ದರಾಜು,ಶ್ರೀರಂಗರಾಜಪುರ ರಾಜೇಶ್,ಕಲಿಯೂರು ಸಿದ್ದರಾಜು,

ಸೇರಿದಂತೆ ಹಲವರು ಹಾಗೂ ಅಧಿಕಾರಿಗಳಾದ ತಹಶೀಲ್ದಾರ್ ಸುರೇಶಾಚಾರ್, ಪುರಸಭೆ ಮುಖ್ಯಾಧಿಕಾರಿ ಶ್ರೀನಿವಾಸ್, ಆರಕ್ಷಕ ನಿರೀಕ್ಷಕ ಧನಂಜಯ ಸೇರಿದಂತೆ ವಿವಿಧ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ಮೀನುಗಾರಿಕೆ ಇಲಾಖೆಯಲ್ಲಿ ಪಾರದರ್ಶಕತೆ ಇಲ್ಲ

ಮೀನುಗಾರಿಕೆ ಇಲಾಖೆಯಲ್ಲಿ ಸವಲತ್ತು ವಿತರಣೆ ವೇಳೆ ಸಾರ್ವಜನಿಕರಿಗೆ ಮಾಹಿತಿ ನೀಡಲಾಗುತ್ತಿಲ್ಲ. ಫಲಾನುಭವಿಗಳ ಆಯ್ಕೆಯಲ್ಲೂ ಪಾರದರ್ಶಕತೆ ಇಲ್ಲ ಎಂದು ಕುಕ್ಕೂರು ಗಣೇಶ್ ಆರೋಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಹಾಯಕ ನಿರ್ದೇಶಕಿ ಕೆ.ಬಿ. ಶ್ವೇತ, ಇಲಾಖೆಯ ವ್ಯವಹಾರಗಳು ಪಾರದರ್ಶಕವಾಗಿದ್ದು ಪರಿಶೀಲನೆಗೆ ಸಿದ್ಧ ಎಂದರು.

> "ಕ್ಷೇತ್ರಕ್ಕೆ ಭೇಟಿ ಕಡಿಮೆಯಾದರೂ ಅಭಿವೃದ್ಧಿ ಕಾಮಗಾರಿಗಳು ನಿಲ್ಲಬಾರದು. ಅನುದಾನ ಬಿಡುಗಡೆ ಆಗಿದ್ದು, ಹಣದ ಸದ್ಬಳಕೆ ಮಾಡಿ ಕೆಲಸ ಪೂರ್ಣಗೊಳಿಸ ಬೇಕು.ಅಧಿಕಾರಿಗಳ ನಿರ್ಲಕ್ಷ್ಯ ಸಹಿಸಲಾಗದು"
> ▶ **ಸುನಿಲ್ ಬೋಸ್** ಸಂಸದ



**ಜನ ಸಂಪರ್ಕ ಸಭೆ ಮತ್ತು ಅಧಿಕಾರಿಗಳ ಸಭೆ ನಡೆಸಲು ಪಟ್ಟಣದ ಪುರಸಭೆ ಸಭಾಂಗಣಕ್ಕೆ ಆಗಮಿಸಿದ ಸಂಸದ ಸುನಿಲ್ ಬೋಸ್ ರವರನ್ನು ತಿ.ನರಸೀಪುರ ಪುರಸಭೆ ಸಾಮಾಜಿಕ ಸ್ಥಾಯಿ ಸಮಿತಿ ನಿಕಟ ಪೂರ್ವ ಅಧ್ಯಕ್ಷ ತುಂಬಲ ಪ್ರಕಾಶ್ ಸನ್ಮಾನ ಮಾಡಿ ಸ್ವಾಗತಿಸಿದರು ಈ ವೇಳೆ ಮಾಜಿ ಪುರಸಭೆ ಮುಖ್ಯಾಧಿಕಾರಿ ಶ್ರೀನಿವಾಸ್, ಮೆನೇಜರ್ ಮಹೇಂದ್ರ ಸೇರಿದಂತೆ ಹಾಜರಿದ್ದರು.**

## ಮಹದೇಶ್ವರ ಬೆಟ್ಟಕ್ಕೆ ಪಾತ್ರೆಗಳ ಹಸ್ತಾಂತರ



**ಹನೂರು:** ತಾಲೂಕಿನ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟಕ್ಕೆ ಮೈಸೂರಿನ ಕೆ.ಜಿ ಕೊಪ್ಪಲು ನಿವಾಸಿ ಶಿವು ಹಾಗೂ ಸ್ನೇಹಿತರು 75 ಸಾವಿರ ಮೌಲ್ಯದ ಎರಡು ಪಾತ್ರೆಗಳನ್ನು ದಾಸೋಹ ಭವನದ ಉಸ್ತುವಾರಿ ಮಲ್ಲಿಕಾರ್ಜುನ್ ರವರಿಗೆ ಹಸ್ತಾಂತರ ಮಾಡಿದರು.

ನಂತರ ಯುವ ಉದ್ಯಮಿ ಶಿವು ಮಾತನಾಡಿ, ಕಳೆದ ವರ್ಷ ಒಂದು ಲಕ್ಷ ರೂ. ಮೌಲ್ಯದಲ್ಲಿ ಒಂದು ಸಾವಿರ ತಟ್ಟೆಗಳನ್ನು ಹರಕೆ ರೂಪದಲ್ಲಿ ನೀಡಲಾಗಿತ್ತು. ಇದೀಗ ಸ್ನೇಹಿತರಾದ ಕಿಶೋರ್ ಹಾಗೂ ಉದ್ಯಮಿ ಶಿವರಾಜ್ ಅವರ ಸಹಕಾರದೊಂದಿಗೆ ಒಮ್ಮೆಲೆ ನೂರು ಕೆಜಿ ಪ್ರಸಾದ ತಯಾರು ಮ ಡುವ ಪಾತ್ರೆಗಳನ್ನು ದಾಸೋಹ ಭವನಕ್ಕೆ ನೀಡಲಾಗಿದೆ. ಮುಂದಿನ ದಿನಗ ಳಲ್ಲಿ ನಮ್ಮ ಕೈಲಾದ ಮಟ್ಟಿಗೆ ಹರಕೆ ರೂಪದಲ್ಲಿ ದಾಸೋಹ ಭವನಕ್ಕೆ ಅವಶ್ಯಕತೆ ಇರುವ ಸಾಮಗ್ರಿಗಳನ್ನು ಪೂರೈಕೆ ಮಾಡಲಾಗುವುದು ಎಂದರು. ಮೈಸೂರಿನ ಕೆ.ಜಿ. ಕೊಪ್ಪಲಿನ ಉದ್ಯಮಿಗಳಾದ ಡಿ.ಕಿಶೋರ್ ಕುಮಾರ್, ಶಿವರಾಜು ಇದ್ದರು.

## ಅಪರಿಚಿತ ವಾಹನ ಡಿಕ್ಕಿ: ವ್ಯಕ್ತಿ ಸಾವು

**ಮಳವಳ್ಳಿ:** ತಾಲೂಕಿನ ಬಿ.ಜಿ.ಪುರ ಹೋಬಳಿಯ ಕಿರಗಸೂರು ಸಮೀಪ ಬುಧವಾರ ಸಂಜೆ ಅಪರಿಚಿತ ವಾಹನ ಡಿಕ್ಕಿಯಾಗಿ ಪಾದಚಾರಿ ಮೃತಪಟ್ಟಿದ್ದಾರೆ.

ಕಿರಗಸೂರು ಗ್ರಾಮದ ನಿವಾಸಿ ಬಸವರಾಜು (70) ಮೃತರು. ಇವರು ಕಗ್ಗಲೀಪುರ ರಸ್ತೆಯಲ್ಲಿ ವಾಯು ವಿಹಾರಕ್ಕೆ ತೆರಳಿದ್ದಾಗ ಅಪರಿಚಿತ ವಾಹನ ಡಿಕ್ಕಿ ಹೊಡೆದು ಪರಾರಿಯಾಗಿದೆ. ಗಾಯಗೊಂಡ ಬಸವರಾಜು ಅವರನ್ನು ಬೆಳಕವಾಡಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ಮೈಸೂರಿನ ಕೆ ಆರ್ ಆಸ್ಪತ್ರೆಯಲ್ಲಿ ಸಾಗಿಸುವ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ. ಬೆಳಕವಾಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮೂಲಸೌಲಭ್ಯಕ್ಕಾಗಿ ಆಗ್ರಹಿಸಿ ಧರಣಿ



**ಹನೂರು:** ಸ್ವಾತಂತ್ರ ಬಂದು ಸರಿ ಸುಮಾರು 79 ವರ್ಷಗಳೇ ಕಳೆದರೂ ಹಿಂದುಳಿದ ವರ್ಗಗಳೇ ಹೆಚ್ಚಿರುವ ತಾಲ್ಲೂಕಿನ ನಾಗಣ್ಣ ನಗರ ಗ್ರಾಮದಲ್ಲಿ ಕಳೆದ ನೂರಾರು ವರ್ಷಗಳಿಂದ ವಾಸಿಸುತ್ತಿರುವ ಜನರಿಗೆ ಯಾವುದೇ ಮೂಲ ಸೌಲಭ್ಯಗಳನ್ನು ದೊರಕುತ್ತಿಲ್ಲ ಎಂದು ಆಗ್ರಹಿಸಿ ಪ್ರತಿಭಟನೆ ನಡೆಸಿದರು..

ಪ್ರತಿಭಟನೆಯಲ್ಲಿ ಯುವ ಮುಖಂಡ ಮಂಜುನಾಥ್ ಮಾತನಾಡಿ ತಾಲ್ಲೂಕು ಆಡಳಿತ, ಜಿಲ್ಲಾಡಳಿತ, ಹಾಗೂ ಗ್ರಾಮಾಡಳಿತಾಧಿಕಾರಿಗಳು ನಾಗಣ್ಣ. ನಗರ ಗ್ರಾಮವನ್ನು ಕಡೆಗಣಿಸಿರುವುದು ಭಾರತದ ಪ್ರಜೆಗಳಾದ ನಮಗೆ ಅತ್ಯಂತ ನೋವು ತರಿಸಿದೆ. ಈ ಗ್ರಾಮದಲ್ಲಿ ಕೂಲಿ ಮಾಡಿಕೊಂಡು ಜೀವನ ಸಾಗಿಸುತ್ತಿರುವವರ ಸಂಖ್ಯೆ ಹೆಚ್ಚು, ನಾಗಣ್ಣ ನಗರ ಗ್ರಾಮವು ರಾಮಾಪುರ ಗ್ರಾಮಪಂಚಾಯಿತಿ ವ್ಯಾಪ್ತಿಗೆ ಸೇರಿದ್ದು, ಈ ಗ್ರಾಮಕ್ಕೆ ಮೂಲ ಸೌಕರ್ಯ ಇಲ್ಲದಿರುವುದು ಗ್ರಾಮ ಪಂಚಾಯಿತಿಯ ತಂತ್ರಾಂಶದಲ್ಲಿ ಅಂದರೆ ಪಂಚತಂತ್ರದಲ್ಲಿ, ಹಾಗೂ ಪಂಚಾಯಿತಿಯ ಡಿಮ್ಯಾಂಡ್ ರಿಜಿಸ್ಟರ್ ನಲ್ಲಿಯೂ ಸೇರಿರುವುದಿಲ್ಲ ಹಾಗೇ ಕಂದಾಯ ಗ್ರಾಮವೂ ಆಗಿರುವುದಿಲ್ಲ. 1995-96 ರ ಹಿಂದೆ ಆಜ್ಜಿಪುರ ಗ್ರಾಮ, ಪಂಚಾಯಿತಿ ವ್ಯಾಪ್ತಿಗೆ ಸೇರಿದ್ದಾಗ ಎಲ್ಲಾ ರೀತಿಯ ಮೂಲ ಸೌಕರ್ಯಗಳು ನಮ್ಮ ಗ್ರಾಮಕ್ಕೆ ದೊರಕುತ್ತಿತ್ತು. ಆದರೆ ಈಗ ರಾಮಾಪುರ ಗ್ರಾಮ ಪಂಚಾಯಿತಿಯಿಂದ ಯಾವುದೇ ಮೂಲ ಸೌಕರ್ಯ ದೊರಕುತ್ತಿಲ್ಲ. ನಮ್ಮ ಗ್ರಾಮದಲ್ಲಿರುವ ಅಂಗನವಾಡಿ ಕಟ್ಟಡ, ಹಾಗೂ ಶಾಲಾ ಕಟ್ಟಡ ಶಿಥಿಲಾಸ್ಥಿತಿಯಲ್ಲಿದ್ದು, ನಾವು ಯಾರ ಬಳಿ ಹೋಗಿ ಮೂಲ ಸೌಕರ್ಯ ಕೇಳುವುದು ಎಂಬುವುದೇ ತಿಳಿಯದಾಗಿದೆ. ಮುಂದಿನ ದಿನಗಳಲ್ಲಿ ಯಾವುದೇ ಚುನಾವಣೆಗಳು ಬಂದರೂ ನಾವು ಮತ ಚಲಾಯಿಸದೇ ಚುನಾವಣೆಯನ್ನು ಬಹಿಷ್ಕರಿಸುತ್ತೇವೆ ಎಂದರು.

ಪ್ರತಿಭಟನಾ ನಿರತರ ಮನವಿ ಆಲಿಸಿದ ತಹಸೀಲ್ದಾರ್ ಚೈತ್ರ ಅವರು, ನಾಗಣ್ಣ ನಗರವನ್ನು ಕಂದಾಯ ಗ್ರಾಮವನ್ನಾಗಿ ಈಗಾಗಲೇ ಫೈನಲ್ ನೋಟಿಫಿಕೇಶನ್ ಆಗಿದೆ. ನಿಮ್ಮ ಗ್ರಾಮ ಅಜ್ಜೀಪುರ ಹಾಗೂ ರಾಮಾಪುರ ಗ್ರಾಮ ಪಂಚಾಯಿತಿಗೆ ಸೇರಿದಿಯೋ ಎಂಬುದಷ್ಟೇ ನಿರ್ಣಯ ಆಗಬೇಕಾಗಿದೆ. ಈ ಸಂಬಂಧ ಜಿ.ಪಂ. ಹಾಗೂ ತಾ.ಪಂ.ಹಿರಿಯ ಅಧಿಕಾರಿಗಳ ನಿರ್ದೇಶನ ಬಂದ ತಕ್ಷಣ ಕ್ರಮಕೈಗೊಳ್ಳುವ ಮೂಲಕ ನಿಮ್ಮ ಬಹು ದಿನಗಳ ಬೇಡಿಕೆಗಯನ್ನು ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.

ಮುನಿಸ್ವಾಮಿ, ಕುಮಾರ್ , ಗೋವಿಂದರಾಜು, ಪಳನಿ, ಮಣಿ, ಮಾದೇಶ್, ಷಣ್ಮುಖ, ಮಹಿಳೆಯರು ಸೇರಿದಂತೆ ಇನ್ನಿತರರು ಇದ್ದರು.

# ತಾಪಂ, ಜಿಪಂ ಚುನಾವಣೆಗೆ ಒಟ್ಟಾಗಿ ಶ್ರಮಿಸಿ

## ಕಾರ್ಯಕರ್ತರಿಗೆ ಮಾಜಿ ಶಾಸಕ ಆರ್.ನರೇಂದ್ರ ಸಲಹೆ | ಬಿಎಲ್‌ಒಗಳ ನೇಮಕಾತಿ ಸಭೆ



**ಹನೂರು:** ಬೂತ್ ಮಟ್ಟದಲ್ಲಿ ಪಕ್ಷವನ್ನು ಬಲಪಡಿಸುವ ಮೂಲಕ ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಬೇಕು ಎಂದು ಮಾಜಿ ಶಾಸಕ ಆರ್.ನರೇಂದ್ರ ಹೇಳಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಬೂತ್ ಮಟ್ಟದ ಬಿಎಲ್‌ಒಗಳ ನೇಮಕಾತಿ ಸಭೆಯಲ್ಲಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳಿಗೆ ಕ್ಷಣಗಣನೆ ಪ್ರಾರಂಭವಾಗಿದೆ. ಈ ನಿಟ್ಟಿನಲ್ಲಿ ಪಕ್ಷದ ಕಾರ್ಯಕರ್ತರು ಸಂಘಟನೆಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ನಮ್ಮ ಪಕ್ಷದ ಅಭ್ಯರ್ಥಿಗಳನ್ನು ಜಯಶೀಲರನ್ನಾಗಿ ಮಾಡುವಲ್ಲಿ ಬಿಎಲ್‌ಒ ಗಳು ಪ್ರಮುಖ ಪಾತ್ರ ವಹಿಸಲಿದ್ದಾರೆ. ಹಾಗಾಗಿ ಪ್ರತಿಯೊಬ್ಬರೂ ಸಂಘಟನೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ನಾನು ಶಾಸಕನಾಗಿದ್ದಾಗ ಕ್ಷೇತ್ರ ವ್ಯಾಪ್ತಿಯಲ್ಲಿ ಇಂದಿರಾ, ಏಕಲವ್ಯ, ಮುರಾರ್ಜಿ ದೇಸಾಯಿ ವಸತಿ ಶಾಲೆ, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ, ಖಾಸಗಿ ಬಸ್ ನಿಲ್ದಾಣ, ಯಡಕುರಿಯ ಸೇತುವೆ, ಕೆ ಶಿಪ್ ಅಭಿವೃದ್ಧಿ ಕಾಮಗಾರಿ ಸೇರಿಂದತೆ ಕ್ಷೇತ್ರ ವ್ಯಾಪ್ತಿಯ 32 ಹಾಡಿಗಳಲ್ಲಿ ವಿದ್ಯುತ್ ಸಂಪರ್ಕವಿಲ್ಲದೆ ತೊಂದರೆ ಅನುಭವಿಸುತ್ತಿದ್ದರು, ನಾನು ಶಾಸಕನಾಗಿ ಆಯ್ಕೆಯಾದ ನಂತರ 20 ಹಾಡಿಗಳಿಗೆ ವಿದ್ಯುತ್ ಸಂಪರ್ಕ ಕೊಡಿಸಿದ್ದೇನೆ. ಉಳಿದ 12 ಹಾಡುಗಳಿಗೂ ವಿದ್ಯುತ್ ಸಂಪರ್ಕಕ್ಕೆ ಕ್ರಮವಹಿಸಲಾಗಿದೆ. ಆದರೇ ಹಾಲಿ ಶಾಸಕರು 2 ಕೋಟಿ ಖರ್ಚು ಮಾಡಿ ಕರೆಗೆ ನೀರು ತುಂಬಿಸಿ ಸಾಮಾಜಿಕ ಜಾಲತಾಣದಲ್ಲಿ ಇನ್ನಿಲ್ಲದ ಪ್ರಚಾರ ಗಳನ್ನು ತೆಗೆದುಕೊಳ್ಳುತ್ತಿದ್ದಾರೆ ಎಂದರು. ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹನೂರು ಉಸ್ತುವಾರಿ ಮಿಲಿಂದ್ ಧರ್ಮಸೇನಾ ಮಾತನಾಡಿ, ಯಾವುದೇ ಚುನಾವಣೆಗಳಾದರೂ ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಸಂಘಟನೆ ಮಾಡಿದರೆ ಯಶಸ್ಸು ಸಿಕ್ಕೇ ಸಿಗುತ್ತದೆ, ಈ ನಿಟ್ಟಿನಲ್ಲಿ ಪಕ್ಷದ ಕಾರ್ಯಕರ್ತರು ತಮ್ಮ ಗ್ರಾಮಗಳಲ್ಲಿ ತಮ್ಮ ಬೂತ್ ಗಳಲ್ಲಿ ಸಂಘಟನೆಗೆ ಹೆಚ್ಚಿನ ಆದ್ಯತೆ ನೀಡಬೇಕು, ಸಣ್ಣ ಪುಟ್ಟ ಗೊಂದಲದಿಂದ ಪಕ್ಷ ಬಿಟ್ಟಿರುವ ತಮ್ಮ ಸ್ನೇಹಿತರು ಬಂಧುಬಳಗವನ್ನು ಪಕ್ಷಕ್ಕೆ ಕರೆತರುವ ಮೂಲಕ ಪಕ್ಷವನ್ನು ಬಲಪಡಿಸಬೇಕು ಎಂದರು.

ಮಾಜಿ ಶಾಸಕ ಆರ್.ನರೇಂದ್ರ ಅವರು ಕಳೆದ 15 ವರ್ಷಗಳ ಅವಧಿಯಲ್ಲಿ ಕ್ಷೇತ್ರದಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ, ಆದರೆ ಸಣ್ಣ ಪುಟ್ಟ ಗೊಂದಲದಿಂದ ಕಳೆದ ಚುನಾವಣೆಯಲ್ಲಿ ಸೋಲಾಗಿದೆ. ಮುಂದಿನ ದಿನಗಳಲ್ಲಿ ಪಕ್ಷ ಸಂಘಟನೆ ಮಾಡುವ ಮೂಲಕ ಪಕ್ಷ ಹಾಗೂ ಪಕ್ಷದ ಅಭ್ಯರ್ಥಿಗಳನ್ನು ಜಯಶೀಲರನ್ನಾಗಿ ಮಾಡಲು ತಾವು ಸಕ್ರಿಯರಾಗಬೇಕು ಎಂದರು.

ಈ ಸಂದರ್ಭದಲ್ಲಿ ಚಾಮುಲ್ ಅಧ್ಯಕ್ಷ ನಂಜುಂಡಸ್ವಾಮಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮುಕುಂದ ವರ್ಮ, ಈಶ್ವರ್, ಗ್ಯಾರಂಟಿ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ಸಿದ್ದರಾಜು, ತಾಲೂ ಕು ಅಧ್ಯಕ್ಷ ರಾಚಯ್ಯ, ಜಿಲ್ಲಾ ಯೂತ್ ಕಾಂಗ್ರೆಸ್ ಅಧ್ಯಕ್ಷ ಯೋಗೇಂದ್ರ, ಚೇತನ್ ಕುಮಾರ್, ಮುಖಂಡರಾದ ಪಾಳ್ಯ ಕೃಷ್ಣ, ಗಿರೀಶ್ ಇದ್ದರು.

### ಭೂಮಿಪೂಜೆಗೆ ಸಚಿವರು ಬರಲಿಲ್ಲ

ಮೂರು ಕೆರೆಗಳಿಗೆ ನೀರು ತುಂಬಿಸುವ 127 ಕೋಟಿ ರೂ. ಯೋಜನೆ ಹಾಗೂ ಮೊದಲ ಹಂತದಲ್ಲಿ ನೂರು ಹಳ್ಳಿಗಳಿಗೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಕಾಮಗಾರಿ ಶಂಕುಸ್ಥಾಪನೆಗೆ ಶಾಮಿಯಾನ ಹಾಕಿ ಎಲ್ಲ ವ್ಯವಸ್ಥೆ ಮಾಡಿಕೊಳ್ಳಲಾಗಿತ್ತು. ಯೋಜನೆಗೆ ಸಚಿವರು ಬಂದು ಶಂಕು ಸ್ಥಾಪನೆ ಮಾಡಿದರೆ ಆರ್.ನರೇಂದ್ರ ಅವರಿಗೆ ಹೆಸರು ಬರುತ್ತದೆ ಎಂದು ವಿರೋಧ ಪಕ್ಷದವರು ಪಿತೂರಿ ನಡೆಸಿ ಈ ಕಾರ್ಯಕ್ರಮವನ್ನು ರದ್ದು ಮಾಡಿಸಿದರು. ಆದರೆ ನಾನು ಅಧಿಕಾರಿಗಳ ಜತೆಗೂಡಿ ಪೂಜೆ ಸಲ್ಲಿಸಿದ್ದೆ ಇದೀಗ ಕಾಮಗಾರಿ ಪೂರ್ಣಗೊಂಡಿದೆ ಎಂದು ಮಾಜಿ ಶಾಸಕ ಆರ್.ನರೇಂದ್ರ ಹೇಳಿದರು.